


# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ


BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 269 | ₹ ಬೆಲೆ: 4 | Wednesday, 20, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಉತ್ತರ ಕನ್ನಡ ಜಿಲ್ಲೆಗೂ ಕಾಲಿಟ್ಟ ಕೊರೊನಾ ವೈರಸ್



ಕಾರವಾರ: ಕೊರೊನಾ ರೂಪಾಂತರಿಯಾದ ಜೆಎನ್1 (JN1) ವೈರಸ್ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಇದೀಗ ಕರ್ನಾಟಕದ ಉತ್ತರ ಕನ್ನಡ ಜಿಲ್ಲೆಗೂ ಕಾಲಿಟ್ಟಿದೆ.

ಕಾರವಾರ ತಾಲೂಕಿನ ಸದಾಶಿವಗಡ ಗ್ರಾಮದ ಯುವಕನಲ್ಲಿ ಕೊರೊನಾ ಸೋಂಕು ಪತ್ತೆಯಾಗಿದೆ. ಗೋವಾದಿಂದ ಕಾರವಾರಕ್ಕೆ ಬಂದಿದ್ದ ಯುವಕನೋರ್ವನಲ್ಲಿ ಕಳೆದ 15 ದಿನಗಳ ಹಿಂದೆ ಸೋಂಕು ಪತ್ತೆಯಾಗಿದ್ದು, ಈಗ ಆರ್‌ಟಿಪಿಸಿಆರ್ ರಿಪೋರ್ಟ್ ನೆಗೆಟಿವ್ ಬಂದಿದೆ. ಒಟ್ಟು 15ರಿಂದ 20 ಜನರಲ್ಲಿ ಕೆಮ್ಮು, ನೆಗಡಿ ಹಾಗೂ ಜ್ವರ ಕಾಣಿಸಿಕೊಂಡಿತ್ತು. ಒಂದೇ ಕುಟುಂಬದ ಸದಸ್ಯರಲ್ಲಿ ಕೊರೊನಾ ಲಕ್ಷಣಗಳು ಕಾಣಿಸಿಕೊಂಡಿದ್ದು, ಲಸಿಕೆ ಪಡೆದ ಹಿನ್ನೆಲೆ ಕೇವಲ 3ರಿಂದ 4 ದಿನಗಳಲ್ಲಿ ಪೂರ್ತಿ ಗುಣಮುಖರಾಗಿದ್ದಾರೆ.

ಚಳಿಗಾಲದ ಹಿನ್ನೆಲೆ ಹೆಚ್ಚು ಜನರಲ್ಲಿ ನೆಗಡಿ, ಕೆಮ್ಮು, ಜ್ವರ ಕಾಣಿಸಿಕೊಳ್ಳುತ್ತಿದೆ. ಕೊರೊನಾ ಲಕ್ಷಣ ಹೆಚ್ಚಾಗಿ ಕಂಡು ಬಂದಲ್ಲಿ ಮಾತ್ರ ಕೊರೊನಾ ಪರೀಕ್ಷೆ ಮಾಡಲಾಗುತ್ತಿದೆ. ಹೊಸ ವರ್ಷಕ್ಕೆ ಹೊರ ರಾಜ್ಯಗಳಿಂದ ಹೆಚ್ಚಿನ ಜನ ಕಾರವಾರಕ್ಕೆ ಬರುವ ಹಿನ್ನೆಲೆ ಮುಂಜಾಗೃತ ಕ್ರಮ ಕೈಗೊಳ್ಳಲು ಜಿಲ್ಲಾಡಳಿತ ಚಿಂತನೆ ನಡೆಸಿದೆ.

# ಪ್ರಧಾನಿ ಮೋದಿ ಭೇಟಿ ಮಾಡಿದ ಸಿಎಂ ಸಿದ್ದರಾಮಯ್ಯ

## ರಾಜ್ಯದ ಬರ ಪರಿಸ್ಥಿತಿ ಬಗ್ಗೆ ಚರ್ಚೆ, ಪರಿಹಾರಕ್ಕೆ ಮನವಿ

ನವದೆಹಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನವದೆಹಲಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ರಾಜ್ಯದ ಬರ ಪರಿಸ್ಥಿತಿಯ ಕುರಿತು ವಿವರಿಸಿ, ಶೀಘ್ರವೇ 18,177 ಕೋಟಿ ರೂ. ಪರಿಹಾರ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದಾರೆ.

ಇದರಲ್ಲಿ 4,663 ಕೋಟಿ ರೂ. ಇನ್‌ಪುಟ್ ಸಬ್ಸಿಡಿ, 12,577 ಕೋಟಿ ರೂ. ತುರ್ತು ಪರಿಹಾರ, 566 ಕೋಟಿ ರೂ. ಕುಡಿಯುವ ನೀರಿಗಾಗಿ ಹಾಗೂ 363 ಕೋಟಿ ರೂ. ಜಾನುವಾರುಗಳ ಸಂರಕ್ಷಣೆಗಾಗಿ ಒದಗಿಸುವಂತೆ ಕೋರಲಾಗಿದೆ.

ರಾಜ್ಯದಲ್ಲಿ 236 ತಾಲೂಕುಗಳ ಪೈಕಿ 223 ತಾಲ್ಲೂಕುಗಳು ಬರಪೀಡಿತವಾಗಿದ್ದು, ಅದರಲ್ಲಿ 196 ತಾಲ್ಲೂಕುಗಳಲ್ಲಿ ಬರದ ತೀವ್ರತೆ ಹೆಚ್ಚಾಗಿದೆ. ಇದರಿಂದಾಗಿ 48.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಮತ್ತು ತೋಟಗಾರಿಕಾ ಬೆಳೆಗಳು ನಷ್ಟವಾಗಿದ್ದು, ಇದರಿಂದ ಹೆಚ್ಚಿನ ಸಂಖ್ಯೆಯ ಸಣ್ಣ ಮತ್ತು ಅತಿ ಸಣ್ಣ ರೈತರು ಸಂಕಷ್ಟಕ್ಕೆ ಒಳಗಾಗಿದ್ದಾರೆ. ಎನ್.ಡಿ.ಆರ್.ಎಫ್. ನಿಂದ 4,663 ಕೋಟಿ ರೂ. ಇನ್‌ಪುಟ್ ಸಬ್ಸಿಡಿ ಒದಗಿಸುವಂತೆ ಮನವಿ ಮಾಡಿದ್ದಾರೆ.

ರೈತರಿಗೆ ಇನ್‌ಪುಟ್ ಸಬ್ಸಿಡಿ ನೀಡಲು 2015-16 ರ ಕೃಷಿ ಗಣತಿಯನ್ನು ಪರಿಗಣಿಸಲಾಗುತ್ತಿದ್ದು, ಇದು 8 ವರ್ಷ ಹಳೆಯ ಮಾಹಿತಿಯಾಗಿದೆ.



ಅಲ್ಲದೆ, ರಾಜ್ಯದಲ್ಲಿ ರೈತರ ದತ್ತಾಂಶವನ್ನು ಫ್ರೂಟ್ಸ್ ತಂತ್ರಾಂಶದಲ್ಲಿ ದಾಖಲಿಸಲಾಗಿದ್ದು, ಪಿಎಂ-ಕಿಸಾನ್ ಯೋಜನೆಗೆ ಇದನ್ನು ಪರಿಗಣಿಸಲಾಗುತ್ತಿದೆ. ಇದರನ್ವಯ ರಾಜ್ಯದಲ್ಲಿ 83 ಲಕ್ಷ ಜನ ಸಣ್ಣ ಮತ್ತು ಅತಿ ಸಣ್ಣ ರೈತರಿದ್ದು, ಪರಿಹಾರ ವಿತರಣೆಗೆ ಈ ದತ್ತಾಂಶವನ್ನು ಪರಿಗಣಿಸುವಂತೆ ಮನವಿ ಮಾಡಿದ್ದೇನೆ. ಜೊತೆಗೆ ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ಬರಪೀಡಿತ ತಾಲ್ಲೂಕುಗಳಲ್ಲಿ ಉದ್ಯೋಗದ ದಿನಗಳನ್ನು 100 ರಿಂದ 150 ದಿನಗಳಿಗೆ ಹೆಚ್ಚಿಸುವಂತೆ ಆಗ್ರಹಿಸಿರುವುದಾಗಿ ತಿಳಿಸಿದ್ದಾರೆ.

ಬರ ಪರಿಹಾರಕ್ಕಾಗಿ ರಾಜ್ಯದ ಮೊದಲ ಪ್ರಸ್ತಾವನೆಯನ್ನು ಕೇಂದ್ರ ಕೃಷಿ ಸಚಿವಾಲಯಕ್ಕೆ ದಿನಾಂಕ 22-09-2023 ರಂದ ಸಲ್ಲಿಸಲಾಗಿತ್ತು ಭಾರತ ಸರ್ಕಾರದ ಬರ ಅಧ್ಯಯನ ತಂಡವು ಅಕ್ಟೋಬರ್ ತಿಂಗಳ 4 ರಿಂದ 9ರ ನಡುವೆ ಭೇಟಿ ನೀಡಿ, ವರದಿಯನ್ನು ಸಲ್ಲಿಸಿದೆ.

ಅದರ ನಂತರ ಇನ್ನೂ 21 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಯಿತು.

ಆದ್ದರಿಂದ ಅಕ್ಟೋಬರ್ 20 ರಂದು ಕೇಂದ್ರ ಕೃಷಿ ಸಚಿವಾಲಯಕ್ಕೆ ಎನ್.ಡಿ.ಆರ್.ಎಫ್. ಅಡಿ 17,901 ಕೋಟಿ ರೂ. ಪರಿಹಾರ ಒದಗಿಸುವಂತೆ ಪ್ರಸ್ತಾವನೆ ಸಲ್ಲಿಸಲಾಯಿತು.

ಇದರಲ್ಲಿ ತುರ್ತು ಪರಿಹಾರದ12,577 ಕೋಟಿ ರೂ. ಮೊತ್ತವೂ ಸೇರಿದೆ. ನವೆಂಬರ್ 4 ರಂದು ಹೆಚ್ಚುವರಿಯಾಗಿ 7 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಯಿತು. ಈ ಹಿನ್ನೆಲೆಯಲ್ಲಿ ಸಲ್ಲಿಸಿದ ಪೂರಕ ಮನವಿಯೊಂದಿಗೆ ಕೇಂದ್ರದಿಂದ 18,177 ಕೋಟಿ ರೂ. ಪರಿಹಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಮೊದಲ ಮನವಿ ಸಲ್ಲಿಸಿ ಈಗಾಗಲೇ ಮೂರು ತಿಂಗಳು ಕಳೆದಿದ್ದು, ರೈತರು ಅತ್ಯಂತ ಸಂಕಷ್ಟದ ಪರಿಸ್ಥಿತಿಯಲ್ಲಿದ್ದಾರೆ. ಬೆಳೆ ವಿಫಲವಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ಇನ್‌ಪುಟ್ ಸಬ್ಸಿಡಿ ನೀಡುವುದು ಅತ್ಯಗತ್ಯವಾಗಿದೆ ಎಂದು ಪ್ರಧಾನ ಮಂತ್ರಿಗಳಿಗೆ ಮನವರಿಕೆ ಮಾಡಿಕೊಟ್ಟಿದ್ದೇನೆ. ಬರದಿಂದ ಸಂಕಷ್ಟದಲ್ಲಿರು ಕರ್ನಾಟಕದ ರೈತರ ಹಿತರಕ್ಷಣೆಯ ದೃಷ್ಟಿಯಿಂದ ಆದಷ್ಟು ಬೇಗ ಪರಿಹಾರ ಬಿಡುಗಡೆ ಮಾಡುವಂತೆ ಕೋರಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬರ ಪರಿಸ್ಥಿತಿಯಲ್ಲಿ ನರೇಗಾ ಕೆಲಸವನ್ನು 100 ರಿಂದ 150 ದಿನಗಳಿಗೆ ಕಡ್ಡಾಯವಾಗಿ ಹೆಚ್ಚಿಸಲು ಕಾನೂನಿನಲ್ಲಿ ಅವಕಾಶವಿದೆ. ಅದರಂತೆ ಹೆಚ್ಚಿಸಲು 3 ತಿಂಗಳ ಹಿಂದೆಯೇ ನಾವು ಕೇಂದ್ರಕ್ಕೆ ಮನವಿಯನ್ನು ಮಾಡಿದ್ದೇವೆ.

ಈ ವರೆಗೆ ಮನವಿ ಈಡೇರಿಲ್ಲ. ಈ ಬಗ್ಗೆಯೂ ತುರ್ತಾಗಿ ತೀರ್ಮಾನ ತೆಗೆದುಕೊಳ್ಳುವಂತೆ ಒತ್ತಾಯಿಸಿದ್ದೇವೆ.

ಮಹದಾಯಿ ವಿಚಾರದಲ್ಲಿ ಈಗಾಗಲೇ ಗೆಜೆಟ್ ಕೂಡ ಆಗಿದೆ. ಬೇರೆ ಅಡೆ ತಡೆ ಏನೂ ಇಲ್ಲ. ಪರಿಸರ ತೀರುವಳಿ ಮಾತ್ರ ಬಾಕಿ ಇದೆ. ಇದನ್ನು ಕೇಂದ್ರವೇ ಕೊಡಬೇಕು. ಇದುವರೆಗೂ ಕೊಟ್ಟಿಲ್ಲ. ಟೆಂಡರ್ ಕರೆದು ಎಸ್ಟಿಮೇಟ್ ಕೂಡ ಆಗಿದೆ. ಕೇಂದ್ರ ಕ್ಲಿಯರೆನ್ಸ್ ಕೊಟ್ಟ ಕೂಡಲೇ ಕೆಲಸ ಶುರು ಮಾಡಬಹುದು. ಆದ್ದರಿಂದ ಬೇಗ ಕ್ಲಿಯರೆನ್ ಕೊಡಿಸುವಂತೆ ಒತ್ತಾಯಿಸಿದ್ದೇವೆ ಎಂದು ತಿಳಿಸಿದ್ದರು.

## ಸೇನೆ ಹೆಸರಿನಲ್ಲಿ ನಕಲಿ ನೇಮಕಾತಿ

### ತನಿಖೆ ನಡೆಸುತ್ತಿರುವ ಪೊಲೀಸರು



ಬೆಂಗಳೂರು: ಸೇನೆಗೆ ಸೇರುವ ಆಸೆಯಲ್ಲಿ ದೇಶದ ವಿವಿಧ ಪ್ರದೇಶದಲ್ಲಿ ಅಗ್ನಿವೀರ್ ಯೋಜನೆ ಹೆಸರಲ್ಲಿ ನೇಮಕಾತಿಗಳು ನಡೆದಿದೆ. ಇದಕ್ಕಾಗಿ ಒಂದಷ್ಟು ರ್ಯಾಲಿ ಹಾಗು ನೇಮಕಾತಿ ಪ್ರಕ್ರಿಯೆಗಳು ನಡೆದಿವೆ. ಇದೆಲ್ಲದಕ್ಕೆ ಭಾರತದ ಯುವ ಸಮೂಹ ಮುಂದೆ ಬಂದು ಸೇನೆ ಸೇರುತ್ತಿದ್ದಾರೆ. ಇದರ ನಡುವೆ ದೇಶದ ವಿವಿಧ ಪ್ರದೇಶದಲ್ಲಿ ಸೇನಾ ರ್ಯಾಲಿ ನಡೆದ ಸ್ಥಳದಲ್ಲೇ ಸೇನೆಗೆ ಸೇರಲು ಆಸೆ ಪಡುವವರನ್ನು ವಂಚಿಸಲಾಗಿದೆ. ಕಳೆದ ಫೆಬ್ರವರಿಯಲ್ಲಿ ಒಂದಷ್ಟು ಜನರು ಬೆಂಗಳೂರಿನ ಅಶೋಕ ನಗರದಲ್ಲಿರುವ ಭಾರತೀಯ ಸೇನೆಯ ಕಚೇರಿಗೆ ಆಗಮಿಸಿ ತಮಗೆ ಅಪಾಯಿಂಟ್ ಆಗಿದೆ ಎಂದು ಲೆಟರ್ ಸಹಿತ ಬಂದ ಘಟನೆ ನಡೆದಿದೆ.

ಫೆಬ್ರವರಿಯಲ್ಲಿ ಬಂದಿದ್ದ ಒಂದಷ್ಟು ಜನರಿಗೆ ಇದು ತಪ್ಪು, ನಾವು ಯಾವುದೇ ನೇಮಕಾತಿ ಮಾಡಿಲ್ಲ. ನಿಮಗೆ ಯಾರೋ ಮೋಸಾ ಮಾಡಿರಬಹುದು ನೋಡಿ ಎಂದು ಹೇಳಿ ಸೇನಾ ಅಧಿಕಾರಿಗಳು ವಾಪಸ್ಸು ಕಳಿಸಿದ್ದಾರೆ. ಆದರೆ ತಿಂಗಳು ಕಳೆದಂತೆ ಪದೇ ಪದೇ ಇದೇ ರೀತಿ ದೇಶದ ವಿವಿಧ ಸ್ಥಳದಿಂದ ಯುವಕರು ಆಫರ್ ಲೆಟರ್ ( ನೇಮಕಾತಿ ಪ್ರತಿ ) ಸಹಿತ ಆಗಮಿಸಿ ಕೆಲಸಕ್ಕೆ ಜಾಯಿನ್ ಆಗಲು ಮುಂದಾಗಿದ್ದಾರೆ. ಆಗ ಸೇನಾಧಿಕಾರಿಗಳು ಸಹ ಇದನ್ನು ಗಂಭೀರವಾಗಿ ಪರಿಗಣಿಸಿ ಪರಿಶೀಲನೆ ಮಾಡಿದ್ದಾರೆ. ಈ ವೇಳೆ ಅಸ್ಸಾಂ ಸೇರಿದಂತೆ ದೇಶದ ವಿವಿಧ ಕಡೆ ಸೇನಾ ರ್ಯಾಲಿ ನಡೆದ ಸಂದರ್ಭದಲ್ಲಿ ಓರ್ವ ವ್ಯಕ್ತಿ ಸೇನೆಯ ಸಮವಸ್ತ್ರ ಧರಿಸಿಕೊಂಡು ತನ್ನನ್ನು ತಾನು ಲೆಫ್ಟಿನೆಂಟ್ ಕರ್ನಲ್ ಎಂದು ಹೇಳಿಕೊಂಡು ಒಂದಷ್ಟು ಯುವಕರಿಗೆ ನಿಮಗೆಲ್ಲಾ ನೇರ ನೇಮಕಾತಿ ಮಾಡುತ್ತೇನೆ ಎಂದು ಸೇನೆಯ ಸೀಲು ಹಾಗು ಸಹಿ ಮಾಡಿ ಸೇನೆಯ ನೇಮಕಾತಿ ಪತ್ರದ ರೀತಿಯಲ್ಲಿ ನೇಮಕಾತಿ ಪತ್ರ ನೀಡಿರುವುದು ಗಮನಕ್ಕೆ ಬಂದಿದೆ. ಇಲ್ಲಿ ಕೇವಲ ಸೇನೆಗೆ ನಕಲಿ ನೇಮಕಾತಿ ಮಾಡಿ ತಲಾ ಇಪತ್ತರಿಂದ ಮೂವತ್ತು ಸಾವಿರ ಹಣ ಪಡೆದಿರುವುದು ಮಾತ್ರವಲ್ಲ. ಬದಲಾಗಿ ಭಾರತೀಯ ಸೇನೆಗೆ ಸಂಬಂಧ ಪಟ್ಟ ಸೀಲು ಹಾಗು ಸಹಿಯನ್ನು ನಕಲಿ ಮಾಡಿರುವುದು ಪತ್ತೆಯಾಗಿದೆ.

ಘಟನೆಯ ಗಂಭೀರತೆ ಪರಿಗಣಿಸಿ ಸೇನೆಯ ಅಧಿಕಾರಿಗಳು ಈಗ ಬೆಂಗಳೂರಿನ ಆಶೋಕ ನಗರ ಠಾಣೆಯಲ್ಲಿ ದೂರು ನೀಡಿದ್ದಾರೆ. ದೂರಿನ ಅನ್ವಯ ಕೇಸ್ ದಾಖಲು ಮಾಡಿಕೊಂಡಿರುವ ಪೊಲೀಸರು ತನಿಖೆ ನಡೆಸುತಿದ್ದಾರೆ. ದೇಶದ ಬೇರೆ ಬೇರೆ ರಾಜ್ಯದಲ್ಲಿ ಈ ಕೃತ್ಯ ನಡೆಸಲಾಗಿತ್ತು. ಸಂಪೂರ್ಣ ತನಿಖೆ ಬಳಿಕ ಸತ್ಯ ಹೊರಬರಬೇಕಿದೆ. ಜೊತೆಗೆ ನಾಪತ್ತೆಯಾಗಿರುವ ನಕಲಿ ಲೆಫ್ಟಿನೆಂಟ್ ಕರ್ನಲ್ ಗಾಗಿ ಪೊಲೀಸರು ಹುಡುಕಾಟ ನಡೆಸುತಿದ್ದಾರೆ.

## ಮೋದಿ ಸರ್ಕಾರ ಏಕರೂಪ ನಾಗರಿಕ ಸಂಹಿತೆಯನ್ನು(ಯುಸಿಸಿ) ಜಾರಿಗೆ ತರುವುದು ನಿಶ್ಚಿತ: ಶಾ



ಅಜೆಂಡಾ ಆಜ್ ತಕ್ ವೇದಿಕೆಯಲ್ಲಿ ನಡೆದ ಚರ್ಚೆಯಲ್ಲಿ ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಹಾಗೂ ಬಿಜೆಪಿಯ ವರಿಷ್ಠ ನಾಯಕ ಅಮಿತ್ ಶಾ ಅವರು, ಏಕರೂಪ ನಾಗರಿಕ ಸಂಹಿತೆಯನ್ನು (ಯುಸಿಸಿ) ಜಾರಿಗೆ ತರಲು ಮೋದಿ ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದರು.ಈ ಉಪಕ್ರಮದಿಂದ ಪಕ್ಷ ಹಿಂದೆ ಸರಿಯುವುದಿಲ್ಲ ಎಂದು ಪುನರುಚ್ಚಿಸಿದರು.

ಸ್ವಾತಂತ್ರ್ಯದ ನಂತರ ದಶಕಗಳ ಕಾಲ ಕಾಂಗ್ರೆಸ್ ಸರ್ಕಾರ ಏಕರೂಪ ನಾಗರಿಕ ಸಂಹಿತೆಯನ್ನು ರಾಜಕೀಯ ಸಾಧನವಾಗಿ ಬಳಸಿಕೊಂಡು ತಡೆಹಿಡಿದಿತ್ತು. ಸ್ವಾತಂತ್ರ್ಯದ ನಂತರ ತಕ್ಷಣದ ಅನುಷ್ಠಾನವು ಕಾರ್ಯಸಾಧ್ಯವಾಗದ ಕಾರಣ ಇದನ್ನು ರಾಜ್ಯ ನಿರ್ದೇಶಕ ತತ್ವಗಳಿಗೆ ಸೇರಿಸಲಾಯಿತು. ಆಶ್ಚರ್ಯವೆಂಬಂತೆ ಬಿಜೆಪಿಯು 1950ರ ದಶಕದಿಂದಲೂ ತನ್ನ ಚುನಾವಣಾ ಪ್ರಣಾಳಿಕೆಗಳಲ್ಲಿ ಯುಸಿಸಿಯನ್ನು ಕಾರ್ಯಗತಗೊಳಿಸಲು ಕೆಲಸ ಮಾಡುವುದಾಗಿ ನಿರಂತರವಾಗಿ ಭರವಸೆ ನೀಡುತ್ತಾ ಬಂದಿದೆ.

ಭಾರತದ ರಾಜಕೀಯಕ್ಕೆ ಹೊಸ ರೂಪು ನೀಡುತ್ತಿರುವ ಶಾ, ಏಕರೂಪ ನಾಗರಿಕ ಸಂಹಿತೆಯು ಮಹತ್ವದ ಸಾಮಾಜಿಕ ಮತ್ತು ಕಾನೂನು ಪರಿವರ್ತನೆಯನ್ನು ತರಲಿದೆ ಎಂದು ಪ್ರತಿಪಾದಿಸಿದರು. ಈ ವಿಷಯದಲ್ಲಿ ಸಾರ್ವಜನಿಕ ಅಭಿಪ್ರಾಯವನ್ನು ಸಂಗ್ರಹಿಸಲು, ಲಕ್ಷಾಂತರ ಜನರನ್ನು ಸಮಾಲೋಚಿಸಲು ರಾಜ್ಯಗಳಲ್ಲಿ ಸಮಿತಿಗಳನ್ನು ರಚಿಸಲಾಗುತ್ತಿದೆ. ಪ್ರಸ್ತಾವಿತ ಕಾನೂನಿನ ಕಾನೂನಾತ್ಮಕ ಪರಿಶೀಲನೆಯನ್ನು ಸಹ ಮಾಡಲಾಗುವುದು.

ಅಂತ್ಯೋದಯ (ಸಮಾಜದ ಕೊನೆಯ ವ್ಯಕ್ತಿಯನ್ನು ಸಹ ಮೇಲಕ್ಕೆತ್ತುವುದು) ರಾಜಕೀಯದಲ್ಲಿ ತೊಡಗಿರುವ ಶಾ, ಎಲ್ಲಾ ಪ್ರಕ್ರಿಯೆಗಳನ್ನು ಅನುಸರಿಸಿ ಒಮ್ಮೆ ಈ ಪ್ರಮುಖ ಕಾನೂನನ್ನು ರೂಪಿಸಿದರೆ, ಇಡೀ ದೇಶವು ಅದನ್ನು ಸ್ವಯಿಚ್ಛೆಯಿಂದ ಒಪ್ಪಿಕೊಳ್ಳುತ್ತದೆ ಎಂದು ನಂಬುತ್ತಾರೆ. ಮೋದಿ-ಶಾ ಜೋಡಿಯು ರಾಜಕೀಯದಲ್ಲಿ ಪ್ರಜಾಪ್ರಭುತ್ವ ಮೌಲ್ಯಗಳನ್ನು ಸ್ಥಾಪಿಸಲು ಅಭೂತಪೂರ್ವ ಪ್ರಯತ್ನಗಳನ್ನು ಮಾಡಿದ್ದರೆ, ವೈಯಕ್ತಿಕ ಅಥವಾ ಪಕ್ಷದ ಲಾಭಕ್ಕಿಂತ ಹೆಚ್ಚಾಗಿ ಜನರು ಮತ್ತು ರಾಷ್ಟ್ರಕ್ಕಾಗಿ ಕೆಲಸ ಮಾಡಿದ್ದಾರೆ.

ವ್ಯಕ್ತಿಗತ ರಾಜಕೀಯ, ವಂಶಾಡಳಿತ ಮತ್ತು ತುಷ್ಟೀಕರಣವನ್ನು ತೊಡೆದುಹಾಕುವಲ್ಲಿ ಶಾ ಅವರ ಕೊಡುಗೆ ಶ್ಲಾಘನೀಯ. ಕಳೆದ ಒಂಬತ್ತು ವರ್ಷಗಳಿಂದ ದಲಿತರು, ಅಂಚಿನಲ್ಲಿರುವ ಸಮುದಾಯಗಳು ಮತ್ತು ಹಿಂದುಳಿದ ವರ್ಗಗಳನ್ನು ಅತ್ಯಂತ ಸಮ್ಮಾನಪೂರ್ವಕವಾಗಿ ಮುಖ್ಯವಾಹಿನಿಗೆ ಸೇರಿಸುವ ಪ್ರಯತ್ನಗಳನ್ನು ಮಾಡಿದ್ದಾರೆ.

ಈ ಅಡಿಪಾಯದ ಜೊತೆಗೆ, ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವ ಮತ್ತು ಗೃಹ ಸಚಿವ ಅಮಿತ್ ಶಾರವರ ಪ್ರವೀಣ ಮಾರ್ಗದರ್ಶನದಲ್ಲಿ, ಬಿಜೆಪಿ ಸರ್ಕಾರವು ದೇಶಕ್ಕೆ ಏಕರೂಪ ನಾಗರಿಕ ಸಂಹಿತೆಯನ್ನು ಜಾರಿಗೆ ತರುವುದು ನಿಶ್ಚಿತವಾಗಿದೆ.

## ಲೋಕಸಭಾ ಚುನಾವಣೆಗೆ ಕೈ ತಯಾರಿ ಶುರು

### ಡಿ. 21ರಂದು ದೆಹಲಿಯಲ್ಲಿ ಹೈವೋಲ್ಟೇಜ್ ಸಭೆ



ನವದೆಹಲಿ: 2024ರ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಈಗಿನಿಂದಲೇ ತಯಾರಿ ಶುರು ಮಾಡಿದೆ. ಅದಕ್ಕಾಗಿ ಗುರುವಾರ (ಡಿ.21) ದೆಹಲಿಯ ಕೇಂದ್ರ ಕಚೇರಿಯಲ್ಲಿ ಮಹತ್ವದ ಸಭೆ ಕರೆದಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಕಾರ್ಯಕಾರಿಣಿ ಸಭೆ ಕರೆದಿದ್ದು, ಕರ್ನಾಟಕ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಭಾಗಿಯಾಗಲಿದ್ದಾರೆ. ಇದರೊಂದಿಗೆ ಎಲ್ಲಾ ರಾಜ್ಯಗಳ ಪ್ರಮುಖ ನಾಯಕರು ಹಾಗೂ ರಾಜ್ಯಾಧ್ಯಕ್ಷರು ಭಾಗಿಯಾಗಲಿದ್ದಾರೆ.

ಮಂಗಳವಾರ (ಡಿ.19) ಕಾಂಗ್ರೆಸ್ ವರ್ಕಿಂಗ್ ಕಮಿಟಿ (CWC) ಸಭೆ ನಡೆಯಲಿದ್ದು, ಇತ್ತಿಚೇಗೆ ಮುಕ್ತಾಯಗೊಂಡ ಮಧ್ಯಪ್ರದೇಶ, ಛತ್ತೀಸ್‌ಗಢ, ರಾಜಸ್ಥಾನ ಚುನಾವಣೆಯಲ್ಲಿ (Five States Elections) ಕಾಂಗ್ರೆಸ್ ಸೋಲಿನ ಕುರಿತು ವಿಸ್ತೃತ ಚರ್ಚೆ ನಡೆಯಲಿದೆ. ತೆಲಂಗಾಣ ಹೊರತುಪಡಿಸಿ ಉಳಿದ ರಾಜ್ಯಗಳಲ್ಲಿ ಕಾಂಗ್ರೆಸ್ ಸೋಲಿಗೆ ಕಾರಣಗಳ ಕುರಿತು ಸಮಾಲೋಚನೆ ನಡೆಸಲಾಗುತ್ತದೆ. ಈ ಮೂಲಕ ಮುಂಬರುವ ಲೋಕಸಭಾ ಚುನಾವಣೆಗೆ ವಹಿಸಬೇಕಾದ ಎಚ್ಚರಿಕೆಗಳ ಬಗ್ಗೆ ಚರ್ಚೆ ನಡೆಯಲಿದೆ.

ರಾಜ್ಯವಾರು ನಾಯಕರಿಗೆ ಹೈಕಮಾಂಡ್ ಟಾರ್ಗೆಟ್? 2024ರ ಲೋಕಸಭಾ ಚುವಾವಣೆಯನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡಿರುವ ಕಾಂಗ್ರೆಸ್ ರಾಜ್ಯವಾರು ನಾಯಕರಿಗೆ ಟಾರ್ಗೆಟ್ ನೀಡಲು ಮುಂದಾಗಿದೆ. ಖಓಆಖಂ ಒಕ್ಕೂಟ ನೆರವಿನೊಂದಿಗೆ ಬಿಜೆಪಿ ವಿರುದ್ಧ ಅಜೆಂಡಾ ರೂಪಿಸುವುದು, ಈ ಮೂಲಕ ಕಾಂಗ್ರೆಸ್ ಬಲಿಷ್ಠ ರಾಜ್ಯಗಳಲ್ಲಿ ಹೆಚ್ಚು ಸ್ಥಾನಗಳು ಗೆಲ್ಲುವ ಟಾರ್ಗೆಟ್ ಹಾಕಿಕೊಂಡಿದೆ ಎಂದು ಮೂಲಗಳಿಂದ ತಿಳಿದುಬಂದಿದೆ.

ಕರ್ನಾಟಕ ಮತ್ತು ತೆಲಂಗಾಣದಲ್ಲಿ ಕಾಂಗ್ರೆಸ್ ಸರ್ಕಾರ ಸ್ಥಾಪಿನೆಯಾಗಿರುವ ಹಿನ್ನೆಲೆಯಲ್ಲಿ ದಕ್ಷಿಣ ಭಾರತದಿಂದ ಹೆಚ್ಚು ಸ್ಥಾನ ಗೆಲ್ಲುವ ನಿರೀಕ್ಷೆಯನ್ನು ಕೈ ನಾಯಕರು ಇಟ್ಟುಕೊಂಡಿದ್ದಾರೆ. ಆದ್ದರಿಂದ ಉತ್ತರ ಭಾರತದಲ್ಲಿ ಜನಾದೇಶ ಗಳಿಸಲು ವಿಫಲವಾಗಿರುವ ಕಾಂಗ್ರೆಸ್ ಪಕ್ಷವನ್ನು ಮೇಲೆತ್ತುವ ಬಗ್ಗೆಯೂ ವರ್ಕಿಂಗ್ ಕಮಿಟಿ ಸಭೆಯಲ್ಲಿ ಚರ್ಚೆ ನಡೆಯಲಿದೆ ಎಂದು ಪಕ್ಷದ ಉನ್ನತ ಮೂಲಗಳು ಹೇಳಿವೆ.

## ಚಾಕು ತೋರಿಸಿ ಬಾಲಕಿ ಮೇಲೆ ಲೈಂಗಿಕ್ ಕಿರುಕಳ

ಕಲಬುರಗಿ: ಚಾಕು ತೋರಿಸಿ ಬೆದರಿಸಿ, 10 ವರ್ಷದ ಬಾಲಕಿಯ ಮೇಲೆ ಇಬ್ಬರು ಅಪ್ರಾಪ್ತ ಬಾಲಕರು ಲೈಂಗಿಕ್ ಕಿರುಕಳ ಎಸಗಿದ್ದು, ಕೃತ್ಯವನ್ನು ವಿಡಿಯೋ ಮಾಡಿರುವ ಘಟನೆ ಕಲಬುರಗಿ ಜಿಲ್ಲೆಯಲ್ಲಿ ಮಂಗಳವಾರ ವರದಿಯಾಗಿದೆ. ಕಾಳಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಪೋಷಕರು ಕೆಲಸದ ನಿಮಿತ್ತ ಮುಂಬೈಗೆ ತೆರಳಿದ್ದ ಕಾರಣ ಬಾಲಕಿ ಸಂಬಂಧಿಕರೊಂದಿಗೆ ವಾಸವಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ. ಆಕೆ ಶಾಲೆಗೆ ಹೋಗುತ್ತಿದ್ದಾಗ, 14 ಮತ್ತು 16 ವರ್ಷ ವಯಸ್ಸಿನ ಇಬ್ಬರು ಬಾಲಕರು ಆಕೆಯನ್ನು ನಿರ್ಜನ ಪ್ರದೇಶಕ್ಕೆ ಕರೆದೊಯ್ದಿದ್ದು ಕೃತ್ಯ ಎಸಗಿದ್ದಾರೆ.

# ಉತ್ತರ ಕರ್ನಾಟಕದ ಅಭಿವೃದ್ಧಿ ಬಗ್ಗೆ ಸರ್ಕಾರ ನಿರ್ಲಕ್ಷ್ಯ


## ಸಿಎಂ ಸಿದ್ದರಾಮಯ್ಯಗೆ ಬಸವರಾಜ ಬೊಮ್ಮಾಯಿ ಪತ್ರ

ಬೆಂಗಳೂರು: ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತ ಚರ್ಚೆಗೆ ಬೆಳಗಾವಿ ಅಧಿವೇಶನದಲ್ಲಿ ಸಮರ್ಪಕ ಉತ್ತರ ನೀಡದ ಸರಕಾರ ಆ ಭಾಗದ ಜನರ ನಿರೀಕ್ಷೆ ಹುಸಿಗೊಳಿಸಿದೆ. ಜತೆಗೆ ಅಭಿವೃದ್ಧಿ ಪರವಾದ ಯಾವುದೇ ಹೊಸ ನಿರ್ಣಯ ಪ್ರಕಟಿಸದೆ ಈಗಾಗಲೇ ಇರುವ ಕಾರ್ಯಕ್ರಮಗಳನ್ನು ಮತ್ತೆ ಘೋಷಿಸಲಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆಕ್ಷೆ?ಪ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸುದೀರ್ಘ ಪತ್ರ ಬರೆದಿರುವ ಅವರು, "ಉತ್ತರ ಕರ್ನಾಟಕವಷ್ಟೆ? ಅಲ್ಲ, ಸಮಗ್ರ ಕರ್ನಾಟಕದಲ್ಲಿ ಯಾವುದೇ ಮೂಲಸೌಕರ್ಯ ಕಾಮಗಾರಿ ಆರಂಭವಾಗದಿರುವುದು ಜನರ ಅನುಭವಕ್ಕೆ ಬಂದಿದೆ. ನೀರಾವರಿ ಯೋಜನೆಗಳು ಸೇರಿದಂತೆ ಪ್ರಮುಖ ಯೋಜನೆ ಕೈಗೆತ್ತಿಕೊಳ್ಳಲು ಸರಕಾರ ಮುಂದಾಗಿಲ್ಲ ಎಂದು ಆರೋಪಿಸಿದ್ದಾರೆ. ನಮ್ಮ ಅವಧಿಯಲ್ಲಿ ಹೊಸದಾಗಿ 7 ವಿಶ್ವವಿದ್ಯಾಲಯ ಪ್ರಾರಂಭಿಸಿದ್ದೇವೆ.

ಅನುದಾನ ಕೊರತೆಯ ನೆಪ ಹೇಳಿ ಈ ವಿವಿಗಳನ್ನು ಮುಚ್ಚಲು ಮುಂದಾಗಿದ್ದರಿಂದ ಹಿಂದುಳಿದ ಜಿಲ್ಲೆಗಳ ಬಡ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತದೆ. ಹಾಗಾಗಿ, ಈ ವಿವಿಗಳನ್ನು ಬಂದ್ ಮಾಡುವ ಪ್ರಸ್ತಾವ ಕೈಬಿಡಬೇಕು ಎಂದು ಆಗ್ರಹಿಸಿದ್ದಾರೆ.

**ಬೊಮ್ಮಾಯಿ ಪತ್ರದ ಪ್ರಮುಖಾಂಶ**

ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-3ರ ಅಡಿ 130 ಟಿಎಂಸಿ ಅಡಿ ನೀರು ಬಳಕೆಗೆ ನಮ್ಮ



ಸರಕಾರ ಪ್ರಾರಂಭಿಸಿದ್ದ ಪುನರ್ವಸತಿ ಮತ್ತು ಪುನರ್ ನಿರ್ಮಾಣಕ್ಕೆ ಈ ವರ್ಷ ಒಂದು ರೂಪಾಯಿಯನ್ನೂ ಬಿಡುಗಡೆ ಮಾಡಿಲ್ಲ. ಇದು ಉತ್ತರ ಕರ್ನಾಟಕದ ಬಗ್ಗೆ ಸರಕಾರದ ಅಸಡ್ಡೆಯನ್ನು ತೋರಿಸುತ್ತದೆ. ಮಹದಾಯಿ ಡಿಪಿಆರ್‌ಗೆ ಕೇಂದ್ರ ಅನುಮೋದಿಸಿದೆ. ಅರಣ್ಯ ಇಲಾಖೆ ಅನುಮತಿ ಸಂಬಂಧ ತೆಗೆದುಕೊಂಡ ಕ್ರಮದ ಬಗ್ಗೆ ವಿವರಣೆ ನೀಡಿಲ್ಲ. ಈ ಯೋಜನೆ ಬಗ್ಗೆ ಆಸಕ್ತಿ ಇಲ್ಲವೆನ್ನುವುದು ಇದರಿಂದ ಗೊತ್ತಾಗುತ್ತದೆ. ತುಂಗಭದ್ರಾ ಸಮತೋಲನ ಜಲಾಶಯ ನಿರ್ಮಾಣಕ್ಕೆ ನಮ್ಮ ಸರಕಾರ ಡಿಪಿಆರ್ ಸಿದ್ಧಪಡಿಸಿದೆ. ತಕ್ಷಣವೇ ನೆರೆ ರಾಜ್ಯಗಳೊಂದಿಗೆ ಮಾತನಾಡಿ ಯೋಜನೆ ಜಾರಿಗೆ ಕ್ರಮ ವಹಿಸಬೇಕು. ಉತ್ತರ ಕರ್ನಾಟಕದ ಸಾಸಲಟ್ಟಿ ಶಿವಲಿಂಗೇಶ್ವರ, ಮಂಟೂರು ಮಹಾಲಕ್ಷ್ಮೀ, ಶ್ರೀ ವೆಂಕಟೇಶ್ವರ ಏತ ನೀರಾವರಿ ಸೇರಿ ಹಲವು ಏತ ನೀರಾವರಿ ಯೋಜನೆಗಳಿಗೆ ನಮ್ಮ ಸರಕಾರ ಚಾಲನೆ ನೀಡಿದ್ದು, ಇವುಗಳಿಗೆ ಬಜೆಟ್‌ನಲ್ಲಿ ಹಣ ಮೀಸಲಿಟ್ಟಿಲ್ಲ. ಅಧಿವೇಶನದಲ್ಲೂ ಈ ಬಗ್ಗೆ ಪ್ರಸ್ತಾಪಿಸಿಲ್ಲ.

ಹುಬ್ಬಳ್ಳಿಯಲ್ಲಿಎಫ್‌ಎಂಸಿಜಿಗೆ ನಮ್ಮ ಸರಕಾರ ಜಮೀನು ಮಂಜೂರು ಮಾಡಿ ವಿಶೇಷ ರಿಯಾಯಿತಿ ಒದಗಿಸಿದೆ. ಸುಮಾರು 1 ಲಕ್ಷ ಜನರಿಗೆ ಉದ್ಯೋ?ಗ ನೀಡುವ ಈ ಯೋಜನೆ ಸಂಬಂಧ ಮುಂದಿನ ಕ್ರಮ ಕೈಗೊಳ್ಳದಿರುವುದು ದುರದೃಷ್ಟಕರ.

ಕಲಬುರಗಿಯಲ್ಲಿಪಿಎಂ ಮಿತ್ರ ಯೋಜನೆಯಡಿ ಟೆಕ್ಸ್‌ಟೈಲ್ ಪಾರ್ಕ್‌ಗೆ ಅನುಮೋದನೆ ನೀಡಿದ್ದು, ಅದಕ್ಕೆ ನಮ್ಮ ಸರಕಾರದ ಅವಧಿಯಲ್ಲಿ1 ಸಾವಿರ ಎಕರೆ ಮೀಸಲಿಟ್ಟಿದೆ. ನೀವು ಬಂದ ಬಳಿಕ ಯಾವುದೇ ಕ್ರಮ ಕೈಗೊಂಡಿಲ್ಲ. ರಾಯಚೂರಿನ ಫಾರ್ಮಾ ಪಾರ್ಕ್ ಬಗ್ಗೆಯೂ ಕೂಡ ನಿಮ್ಮ ಉತ್ತರದಲ್ಲಿ ಪ್ರಸ್ತಾಪಿಸಿಲ್ಲ ಎಂದು ಉಲ್ಲೇಖಿಸಿದ್ದಾರೆ.

# ರೈತರಿಗೆ ಸೂಕ್ತ ಸಮಯದಲ್ಲಿ ಬರ ಪರಿಹಾರ ಸಿಗದಿದ್ದರೆ ಜಿಲ್ಲಾಧಿಕಾರಿಗಳೇ ಹೊಣೆ: ಸಚಿವ ಕೃಷ್ಣ ಬೈರೇಗೌಡ

ಬೆಂಗಳೂರು: ಬರ ಪರಿಹಾರ ನೀಡಲು ರಾಜ್ಯ ಸರ್ಕಾರದ ಖಜಾನೆಯಲ್ಲಿ ಹಣವಿದೆ. ಆದರೆ, ರೈತರಿಗೆ ಸೂಕ್ತ ಸಮಯದಲ್ಲಿ ಪರಿಹಾರದ ಹಣ ಸಿಗದಿದ್ದರೆ ಅದಕ್ಕೆ ಜಿಲ್ಲಾಧಿಕಾರಿಗಳೇ ಹೊಣೆ ಎಂದು ಸಚಿವ ಕೃಷ್ಣ ಬೈರೇಗೌಡ ಎಚ್ಚರಿಸಿದರು.

ವಿಡಿಯೋ ಕಾನ್ಫರೆನ್ಸ್ ಮೂಲಕ ಜಿಲ್ಲಾಧಿಕಾರಿಗಳ ಸಭೆ ನಡೆಸಿದ ಸಚಿವ ಕೃಷ್ಣ ಬೈರೇಗೌಡ, ರೈತರ ಜಮೀನಿನ ಸಂಪೂರ್ಣ ವಿಸ್ತೀರ್ಣವನ್ನು ಫ್ರೂಟ್ಸ್ ತಂತ್ರಾಂಶದಲ್ಲಿ ನಮೂದಿಸುವಂತೆ ಕಳೆದ ಎರಡು ತಿಂಗಳಿನಿಂದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರಂತರವಾಗಿ ಸೂಚಿಸಲಾಗುತ್ತಿದೆ. ಆದರೂ, ಫ್ರೂಟ್ಸ್ ತಂತ್ರಾಂಶದಲ್ಲಿ ರೈತರ ಜಮೀನಿನ ಮಾಹಿತಿ ಶೇ.70ನ್ನೂ ಮೀರಿಲ್ಲ. ಪರಿಸ್ಥಿತಿ ಹೀಗೆ ಮುಂದುವರೆದರೆ ರೈತರಿಗೆ ಅನ್ಯಾಯವಾಗಲಿದೆ ಎಂದು ಅಸಮಾಧಾನ ಹೊರಹಾಕಿದರು.

ಇತರೆ ಜಿಲ್ಲೆಗಳಿಗೆ ಹೋಲಿಸಿದರೆ ತುಮಕೂರು, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಲ್ಲಿನ ಸಾಧನೆ ತೀರಾ ಕಳಪೆಯಾಗಿದೆ. ಬರ ಪರಿಹಾರ ಹಣ ನೀಡಲು ರಾಜ್ಯ ಸರ್ಕಾರದ ಸಿದ್ದವಾಗಿದೆ. ಖಜಾನೆಯಲ್ಲಿ ಹಣವೂ ಇದೆ. ಆದರೆ, ಪರಿಹಾರ ಫ್ರೂಟ್ಸ್ ದತ್ತಾಂಶವನ್ನು ಆಧರಿಸಿರುವ ಕಾರಣ ಜಿಲ್ಲಾಧಿಕಾರಿಗಳು ಮಾಡುವ ಸಣ್ಣ ತಪ್ಪೂ ಸಹ ರೈತರ ಮೇಲೆ ಪರಿಣಾಮ ಬೀರಲಿದೆ. ಶೀಘ್ರದಲ್ಲಿ ತಾಲೂಕು ಹೋಬಳಿ ಸಭೆ ನಡೆಸಿ ಎಲ್ಲಾ ಅಧಿಕಾರಿಗಳನ್ನು ಸ್ಥಳ ವೀಕ್ಷಣೆಗೆ ಕಳುಹಿಸಿ ಡಿಸೆಂಬರ್ 22ರ ಒಳಗಾಗಿ ರೈತರ ಜಮೀನಿನ ಸಂಪೂರ್ಣ ಮಾಹಿತಿಯನ್ನು ನಮೂದಿಸಿ ಎಂದು ಸಮಯದ ಗಡುವು ನೀಡಿದರು.

ಇದೇ ಸಮಯದಲ್ಲಿ ನೀರಿನ ಸಮಸ್ಯೆಯನ್ನು ಸೂಕ್ತ ಮಾದರಿಯಲ್ಲಿ ನಿಭಾಯಿಸಿದ್ದಕ್ಕಾಗಿ ಎಲ್ಲ ಜಿಲ್ಲಾಧಿಕಾರಿಗಳ ಬಗ್ಗೆಯೂ ಮೆಚ್ಚುಗೆ ಸೂಚಿಸಿದ ಸಚಿವರು, ಕುಡಿಯುವ ನೀರಿನ ಸಮಸ್ಯೆ



ಎದುರಾಗಬಹುದಾದ ಜಿಲ್ಲೆಗಳಲ್ಲಿ ಅಧಿಕಾರಿಗಳು ಈಗಾಗಲೇ ಖಾಸಗಿ ಬೋರ್ ವೆಲ್ ಗಳನ್ನು ಗುರುತಿಸಿದ್ದಾರೆ. ಟ್ಯಾಂಕರ್ ಗಳಿಗೆ ಟೆಂಡರ್ ಅನ್ನೂ ಸಹ ಕರೆಯಲಾಗಿದೆ. ಇದು ನಿಜಕ್ಕೂ ಉತ್ತಮವಾದ ಕೆಲಸ. ಮುಂದಿನ ಬೇಸಿಗೆಗೆ ನೀರಿನ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ಎದುರಿಸಲು ಅಧಿಕಾರಿಗಳ ಈ ಕ್ರಮ ಸಹಕಾರಿಯಾಗಲಿದೆ.

ಆದರೆ, ಬರ ಘೋಷಿಸಲಾಗಿದ್ದರೂ ರಾಜ್ಯದ 134 ತಾಲೂಕುಗಳಲ್ಲಿ ಈವರೆಗೆ ಟಾಸ್ಕ್ ಫೋರ್ಸ್ ಸಭೆ ನಡೆಸಿಲ್ಲ. ಹೀಗಾಗಿ ಅಧಿಕಾರಿಗಳು ಈ ಬಗ್ಗೆಯೂ ಗಮನ ನೀಡಬೇಕು ಎಂದು ಸೂಚಿಸಿದರು.

ಕಂದಾಯ ಗ್ರಾಮ ಘೋಷಿಸಿ ಹಕ್ಕುಪತ್ರ ನೀಡಿ: ಸಭೆಯಲ್ಲಿ ಅರ್ಹ ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಿಸುವ ಕುರಿತೂ ಚರ್ಚೆ ನಡೆಸಲಾಯಿತು. ಈ ಬಗ್ಗೆ ಅಧಿಕಾರಿಗಳಿಗೆ ಬಡವರಿಗೆ ಸಹಾಯಮಾಡುವ ನಿಟ್ಟಿನಲ್ಲಿ ಅರ್ಹ ಕಂದಾಯ ಗ್ರಾಮಗಳನ್ನು ಶೀಘ್ರ ಘೋಷಿಸಿ ಹಕ್ಕುಪತ್ರ ವಿತರಿಸುವಂತೆ ಸಚಿವರು ಎಂದು ತಾಕೀತು ಮಾಡಿದರು.

ಹೆಚ್ಚುವರಿಯಾಗಿ ಹೊಸ ಕಂದಾಯ ಗ್ರಾಮಗಳ ಘೋಷಣೆಗಾಗಿ ಕಲಬುರಗಿ ಜಿಲ್ಲೆಯಲ್ಲಿ 174, ತುಮಕೂರು ಜಿಲ್ಲೆ 40, ವಿಜಯನಗರ ಜಿಲ್ಲೆಯಿಂದ 29 ಪ್ರಸ್ತಾವನೆ ಬಂದಿದೆ. ಪ್ರತಿ ತಾಲೂಕಿನಲ್ಲೂ ನಾವು ಗುರುತಿಸಿರುವುದಕ್ಕಿಂತ ಅಧಿಕ ಸಂಖ್ಯೆಯಲ್ಲಿ ಕಂದಾಯ ಗ್ರಾಮಗಳಿರುವ ಸಾಧ್ಯತೆ ಇದೆ. ಈ ಬಗ್ಗೆ ತಹಶೀಲ್ದಾರ್ ಹಾಗೂ ಸ್ಥಳೀಯ ಶಾಸಕರ ಜೊತೆಗೆ ಚರ್ಚಿಸಿ, ಮತ್ತಷ್ಟು ಹೊಸ ಕಂದಾಯ ಗ್ರಾಮಗಳ ಘೋಷಣೆಗೆ ಪ್ರಸ್ತಾವನೆ ಸಲ್ಲಿಸಿ ಎಂದು ಸೂಚಿಸಿದರು.

ಅಲ್ಲದೆ, ಕಂದಾಯ ಗ್ರಾಮಗಳ ಘೋಷಣೆಯ ಜೊತೆ ಜೊತೆಗೆ ಅಧಿಕಾರಿಗಳು ಹಕ್ಕುಪತ್ರಗಳನ್ನೂ ಸಿದ್ದಪಡಿಸಿಕೊಳ್ಳಬೇಕಿದೆ. ಈಗಾಗಲೇ ಸರ್ಕಾರ 2.11 ಲಕ್ಷ ಹಕ್ಕುಪತ್ರಗಳನ್ನು ವಿತರಿಸಬೇಕಿದ್ದು, ಜನವರಿ ತಿಂಗಳಿಗೆ ಕನಿಷ್ಠ 1.25 ಲಕ್ಷ ಹಕ್ಕುಪತ್ರಗಳನ್ನು ವಿತರಿಸಬೇಕಿದೆ. ಅಧಿಕಾರಿಗಳು ಈ ಬಗ್ಗೆ ಹೆಚ್ಚಿನ ಗಮನಕೊಡಬೇಕು ಎಂದರು.

ಬಗರ್ ಹುಕುಂ ಆಯಪ್ ಬಿಡುಗಡೆ : ಇದೇ ವೇಳೆ ಸಚಿವ ಕೃಷ್ಣ ಬೈರೇಗೌಡ ಅವರು ಹೊಸದಾಗಿ ಅಭಿವೃದ್ಧಿಪಡಿಸಲಾಗಿರುವ ಬಗರ್ ಹುಕುಂ ಆಯಪ್ ಬಿಡುಗಡೆಗೊಳಿಸಿದರು. ನಮೂನೆ 50, 53, 57ರ ಅಕ್ರಮ ಸಕ್ರಮ ಯೋಜನೆಯಡಿ ಸಾವಿರಾರು ಅರ್ಜಿಗಳು ಸಲ್ಲಿಕೆಯಾಗಿವೆ. ಆದರೆ, ಕೃಷಿಯೇತರ ಚಟುವಟಿಕೆಗಳಲ್ಲಿ ತೊಡಗಿರುವವರಿಗೂ ಸಹ ಸಾಗುವಳಿ ಚೀಟಿ ನೀಡುವುದು ಅಸಾಧ್ಯ. ಅಲ್ಲದೇ, ಸಾವಿರಾರು ಎಕರೆ ಸರ್ಕಾರಿ ಭೂಮಿ ಅಕ್ರಮ ಸಾಗುವಳಿದಾರರ ಪಾಲಾಗಿದ್ದು, ಪ್ರತಿಯೊಂದು ಭಾಗಕ್ಕೂ ಅಧಿಕಾರಿಗಳೇ ನೇರ ಹೋಗಿ ಕೃಷಿ ನಡೆಯುತ್ತಿದೆಯೇ?. ಎಂದು ಪರಿಶೀಲಿಸುವುದು ಸಾಧ್ಯವಿಲ್ಲ ಎಂದರು.

ಹೀಗಾಗಿ ಬಗರ್ ಹುಕುಂ ತಂತ್ರಾಶದ ಮೂಲಕ ಅಕ್ರಮ ಸಾಗುವಳಿ ಭೂಮಿಯಲ್ಲಿ ಕೃಷಿ ಅಥವಾ ಇನ್ನಾವುದೇ ಚಟುವಟಿಕೆ ಬಗ್ಗೆ ಸ್ಯಾಟಲೈಟ್ ಇಮೇಜ್ ಮೂಲಕ ಮಾಹಿತಿ ಪಡೆದು ಅರ್ಜಿ ವಿಲೇವಾರಿ ಮಾಡುವುದಕ್ಕೆ ಹಾಗೂ ಅರ್ಜಿಗಳ ಶೀಘ್ರ ಪ್ರಕ್ರಿಯೆಗೂ ಈ ಆಯಪ್ ಸಹಕಾರಿಯಾಗಲಿದೆ ಎಂದರು.

# ಕೊಡ ನೀರಿನ ಹಿಂದಿದೆ ಕಂಬನಿಯ ಕೊಡುಗೆ

ರಾಜ್ಯದ ಇತಿಹಾಸದಲ್ಲಿ ಪ್ರತಿ ಮನೆಗೂ ಕುಡಿಯುವ ನೀರು ಸಿಗಬೇಕು ಎಂಬ ಧ್ಯೇಯವನ್ನು ಕಾರ್ಯಗತಗೊಳಿಸಲು ಬಹುಶಃ ನಜೀರ್ ಸಾಬ್ ಅವರಂತೆ ಶ್ರಮಿಸಿದ ಇನ್ನೊಬ್ಬ ರಾಜಕಾರಣಿ ವಿರಳ ಎನ್ನಬಹುದು. ಗ್ರಾಮ ಪಂಚಾಯಿತಿಗಳ ಮೂಲಕ ಮನೆಮನೆಗೂ ಕುಡಿಯುವ ನೀರು ತಲುಪಲೇಬೇಕೆಂಬ ಗುರಿ ಇರಿಸಿಕೊಂಡು, ಕೊಳವೆಬಾವಿಗಳನ್ನು ಕೊರೆಸಿ ನೀರು ಪೂರೈಸಿದ ಹೆಗ್ಗಳಿಕೆ ಅವರದು. ಅದಕ್ಕಾಗಿಯೇ ಅವರನ್ನು ಜನ 'ನೀರುಸಾಬ್' ಎಂದು ಕರೆದರು.


ಈಗಲೂ ರಾಜ್ಯದ ಐದೂವರೆ ಸಾವಿರಕ್ಕಿಂತ ಹೆಚ್ಚು ಗ್ರಾಮ ಪಂಚಾಯಿತಿಗಳಲ್ಲೂ ಕುಡಿಯುವ ನೀರು ಪೂರೈಕೆಯೇ ಪ್ರಮುಖ ಹೊಣೆಯಾಗಿದೆ. ಬಹುತೇಕ ಪಂಚಾಯಿತಿಗಳ ಆದಾಯವೂ ನೀರೆತ್ತುವ ಪಂಪುಗಳ ವಿದ್ಯುತ್ ಬಳಕೆಗಾ-ಗಿಯೇ ವೆಚ್ಚವಾಗುತ್ತಿದೆ.

ಅನೇಕ ಪಂಚಾಯಿತಿಗಳಿಗೆ ಸರ್ಕಾರ ಕೊಡುವ ಅನುದಾನದಿಂದಲೇ ವಿದ್ಯುತ್ ಶುಲ್ಕವನ್ನು ಮುರಿದುಕೊಳ್ಳುತ್ತಿರುವುದರಿಂದ, ಅಲ್ಲಿ ಅಭಿವೃದ್ಧಿ ಎಂಬುದು ಶೂನ್ಯ ಸ್ಥಾನದಲ್ಲಿದೆ. ಸರ್ಕಾರಕ್ಕೆ ನಿಜವಾಗಿ ಜನಪರ ಕಾಳಜಿಯಿರುವುದು ಹೌದಾದರೆ, ಜನರಿಗೆ ನೀರುಣಿಸಲು ಬಳಸುವ ವಿದ್ಯುತ್ತಿನ ಶುಲ್ಕವನ್ನು ಮನ್ನಾ ಮಾಡಬಹುದಿತ್ತು.

ಇನ್ನೊಂದು ವಿಷಾದದ ಸಂಗತಿಯೆಂದರೆ, ಹನಿ ನೀರೂ ಅಮೃತಸಮಾನ, ಚಿನ್ನಕ್ಕಿಂತ ಮೌಲಿಕ ಎಂಬುದನ್ನು ಬಳಕೆದಾರರು ತಿಳಿಯದೇ ಹೋಗಿರುವುದು. ಮನೆಯೊಂದರ ಮುಂದಿರುವ ಸಾರ್ವಜನಿಕ ನಲ್ಲಿಯಲ್ಲಿ ನೀರು ಸೋರುತ್ತಿದ್ದರೆ ಅದನ್ನು ನಿಲ್ಲಿಸಲು ಕಾಳಜಿ ವಹಿಸದ ಮನೆಯವರಿದ್ದಾರೆ. 'ಯಾಕೆ ಹೀಗೆ ನೀರು ಸೋರಲು ಬಿಟ್ಟಿದ್ದೀರಿ? ನಲ್ಲಿಯ ಬಿರಡೆ ಭದ್ರವಾಗಿ ಹಾಕಿ' ಎಂದು ಹೇಳಿದರೆ ತಿರುಗಿಬೀಳುತ್ತಾರೆ. 'ಅದೇನೂ ಧರ್ಮದ ನೀರಲ್ಲ, ನಾವು ಅದಕ್ಕೆ ಹಣ ಕೊಡುತ್ತೇವೆ' ಎಂದು ದಬಾಯಿಸುತ್ತಾರೆ.

ನಿಜ, ನೀರಿಗಾಗಿ ಎಲ್ಲ ಮನೆಗಳವರೂ ಶುಲ್ಕ ಕೊಡುತ್ತಾರೆ. ಆದರೆ, ಶುಲ್ಕ ಅತ್ಯಲ್ಪ. ಲೀಟರ್‌ಗೆ ಹತ್ತೋ ಹದಿನೈದೋ ರೂಪಾಯಿ ಕೊಟ್ಟು ಪೇಟೆಯ ಬಾಟಲಿ ನೀರು ಕೊಂಡು ಕುಡಿಯುವವರು ಇಲ್ಲಿ ಇಷ್ಟು ಕಡಿಮೆ ಮೊತ್ತಕ್ಕೆ ಸಿಗುವ ನೀರಿನ ಪ್ರಮಾಣ ತಿಳಿದರೆ ಅಚ್ಚರಿಪಡಬಹುದು.

ಕಡಿಮೆ ಬೆಲೆಗೆ ಸಿಗುವ ನೀರಾದ್ದರಿಂದ ಸಾರ್ವಜನಿಕರಿಗೆ ಅದರ ಮಹತ್ವ ತಿಳಿಯದೆ ಹೋಗಿರಲೂಬಹುದು. ಮನೆಗಳಿಗೆ ನೀರು ಸರಬರಾಜು ಮಾಡಲು ರಸ್ತೆಯಲ್ಲಿ ಅಡ್ಡವಾಗಿ ತೋಡಿ ಕೊಳವೆಗಳನ್ನು ಅಳವಡಿಸುವುದುಂಟು.



ಕೆಲವೊಮ್ಮೆ ಭಾರವಾದ ವಾಹನಗಳು ಅಲ್ಲಿ ಸಂಚರಿಸಿದಾಗ ಕೊಳವೆ ಒಡೆದು ನೀರಿನ ಪ್ರವಾಹ ಹರಿಯಬಹುದು.ಆಗಲೂ ಅದನ್ನು ತಡೆಯಲು ಯಾರೂ ಮುಂದಾಗುವುದಿಲ್ಲ. 'ಅದನ್ನು ಸರಿಪಡಿಸುವುದು ನೀರಿನ ನಿರ್ವಾಹಕರ ಜವಾಬ್ದಾರಿ, ನಮ್ಮದಲ್ಲ' ಎನ್ನುತ್ತಾರೆ.

ಆ ನೀರು ಬೇರೆಯವರ ಮನೆಗಳಿಗೆ ಹರಿಯುತ್ತಿದ್ದರೆ, ತಮ್ಮ ಮನೆಗಲ್ಲವಲ್ಲ ಎಂದು-ಕೊಂಡು ನಿರ್ಲಿಪ್ತರಾಗುತ್ತಾರೆ. ಸಾವಿರಾರು ಲೀಟರ್ ನೀರು ವ್ಯರ್ಥವಾದಾಗಲೂ ಜನ ಅದಕ್ಕಾಗಿ ಮರುಗುವುದಿಲ್ಲ.

ಹೆಚ್ಚಿನ ಗ್ರಾಮ ಪಂಚಾಯಿತಿಗಳಲ್ಲಿ ನೀರಿನ ನಿರ್ವಹಣೆ ನೋಡಿಕೊಳ್ಳುವುದಕ್ಕೆ ಒಬ್ಬನೇ ನಿರ್ವಾಹಕ ಇರುತ್ತಾನೆ. ನೂರಾರು ಮನೆಗಳಿಗೆ ಸುಗಮವಾಗಿ ನೀರು ತಲುಪುವಂತೆ ನೋಡಿಕೊಳ್ಳುವುದು ಅವನ ಜವಾಬ್ದಾರಿ. ಬೇಸಿಗೆಯ ದಿನಗಳಲ್ಲಿ ವಿದ್ಯುತ್ ಕಡಿತವಿದ್ದರೆ ಎಲ್ಲ ಮನೆಗಳಿಗೂ ನೀರು ತಲುಪಿಸಲು ಅವನಿಗೆ ಸಾಧ್ಯವಾಗದೇ ಹೋದಾಗ ಜನ ಕೆರಳಿ ಅವನ ಮೇಲೆ ಏರಿ ಹೋಗುತ್ತಾರೆ.

ಬೆಳಕು ಹರಿಯುವ ಮುನ್ನ ಕೊಳವೆಬಾವಿಯ ಬಳಿಗೆ ಬಂದು, ಪಂಪು ಚಾಲೂ ಮಾಡಿ, ಕೊಳವೆಗಳು ಕೆಟ್ಟುಹೋದಾಗ ತನ್ನದೇ ವೆಚ್ಚದಲ್ಲಿ ಸರಿಪಡಿಸುವ ಈ ಶ್ರಮಜೀವಿಗೆ ಕತ್ತಲಲ್ಲಿ ಹಾವು ಕಡಿ-ದರೂ ಪಂಚಾಯಿತಿ ಯಾವುದೇ ಸುರಕ್ಷೆ ಒದಗಿಸುವುದಿಲ್ಲ. ಅವನಿಗೆ ಸೇವಾ ಬಡ್ತಿಯಿಲ್ಲ. ತಿಂಗಳಿಗೆ ನಿಗದಿತ ಕನಿಷ್ಠ ಸಂಬಳ ಬಿಟ್ಟರೆ ಬೇರೆ ಯಾವುದೇ ಸೌಲಭ್ಯಗಳು ಸಿಗುವುದಿಲ್ಲ.

ಪಂಚಾಯಿತಿಯ ನೀರನ್ನು ಕುಡಿಯಲು ಮಾತ್ರ ಉಪಯೋಗಿಸಬೇಕು ಎಂಬ ಕರಾರಿಗೆ ನೀರಿನ ಬಳಕೆದಾರರು ಒಪ್ಪಿಕೊಂಡು ಸಹಿ ಮಾಡುತ್ತಾರೆ. ಆದರೆ ರಾತ್ರಿಯಾದ ಕೂಡಲೇ ನೀರಿನ ಮೀಟರನ್ನು ಸ್ಥಗಿತಗೊಳಿಸಿ, ಇದೇ ನೀರನ್ನು ಮಲ್ಲಿಗೆ, ವೀಳ್ಯದೆಲೆ ಕೃಷಿಗೆ ಬಳಸುವವರಿದ್ದಾರೆ. ಇದನ್ನು ಆಕ್ಷೇಪಿಸಿದ ನೀರು ನಿರ್ವಾಹಕನಿಗೆ ಹೊಡೆದವರೂ ಇದ್ದಾರೆ.

ನಿಜವಾಗಿ ಬಳಕೆದಾರರಿಗೆ ಈ ನೀರು ಪೂರೈಕೆಯ ಉದ್ದೇಶ ಅರಿವಾಗದೇ ಹೋಗಿರುವುದು ದುರ್ದೈವ. ಒಂದು ಕೊಡ ನೀರಿಗಾಗಿ ಮೈಲುಗಟ್ಟಲೆ ದೂರ ಹೋಗಿ, ಕೆರೆಯ ಒದ್ದೆ ಮಣ್ಣನ್ನು ಕೈಯಿಂದ ತೋಡಿ ತೆಗೆದು, ಒಸರುವ ನೀರನ್ನು ಬೊಗಸೆಗಳಲ್ಲಿ ತುಂಬಿ ಕೊಡವನ್ನು ಭರ್ತಿ ಮಾಡಿ ತರುತ್ತಿದ್ದ ನೂರಾರು ಮನೆಗಳ ಹೆಂಗಳೆಯರ ಕಂಬನಿ ಈ ಕೊಡುಗೆಯ ಹಿಂದೆ ಮಡುಗಟ್ಟಿದೆ.

ಒಂದು ಕೊಡ ನೀರು ಸಿಗಲು ತಾಸುಗಟ್ಟಲೆ ಕಾಯಬೇಕು. ಅದನ್ನು ಹೊತ್ತು ಮನೆಗೆ ತರಲು ಅರ್ಧ ದಿನ ಬೇಕು. ಕೂಲಿಗೆ ಹೋಗುವಂತಿಲ್ಲ. ಬಟ್ಟೆ ಒಗೆಯಲು, ಸ್ನಾನ ಮಾಡಲು ನೀರಿಲ್ಲ. ಗಂಟಲೊಣಗದೆ ಜೀವ ಉಳಿಸಿಕೊಳ್ಳಲು ಮಾತ್ರ ಆ ನೀರು ಸಾಕಾಗುತ್ತಿತ್ತು.

ಇಂತಹ ಶೋಚನೀಯ ಪರಿಸ್ಥಿತಿಯಿಂದ, ಮುಖ್ಯವಾಗಿ ಹಳ್ಳಿಯ ಮಹಿಳೆಯರನ್ನು ಮುಕ್ತಗೊಳಿಸಲು ನಜೀರ್ ಸಾಬ್ ಅವರು ಬಳಕೆಗೆ ತಂದ ಯೋಜನೆಯೊಂದರ ಸಾಫಲ್ಯ ಸಾರ್ವಜನಿಕರ ಸದ್ಬಳಕೆ ಮತ್ತು ಜವಾಬ್ದಾರಿಯಿಂದ ಮಾತ್ರ ನೆರವೇರಬಹುದು. ಆದರೆ ಹಾಗಾಗುತ್ತಿಲ್ಲ.

# ಡಿ.23ರಂದು ಬೆಂಗಳೂರಿನಲ್ಲಿ ರೈತರ ಮಹಾಧಿವೇಶನ



ಮೈಸೂರು: ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ) ಸಂಘಟನೆಯಿಂದ ಡಿ.23ರಂದು ನಡೆಯುವ ರೈತರ ಮಹಾಧಿವೇಶನದ ಭಿತ್ತಿಪತ್ರವನ್ನು ಮೈಸೂರಿನಲ್ಲಿ ಬಿಡುಗಡೆಗೊಳಿಸಲಾಯಿತು.

ನಗರದ ಜಲದರ್ಶಿನಿಯಲ್ಲಿ ಭಿತ್ತಿಪತ್ರ ಬಿಡುಗಡೆಗೊಳಿಸಿ ಮಾತನಾಡಿದ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್, ದೇಶದ ಎಲ್ಲ ರಾಜ್ಯದ ರೈತ ಸಂಘಟನೆಗಳು ಒಗ್ಗೂಡಿ ಡಿ.20 ರಂದು ಕೇರಳದ ಪಾಲಕಾಡ್ನಲ್ಲಿ, ಡಿ.21 ತಮಿಳುನಾಡಿನ ಚೆನ್ನೈನಲ್ಲಿ, ಡಿ.23 ರಂದು ಕರ್ನಾಟಕದ ಬೆಂಗಳೂರಿನಲ್ಲಿ ಮತ್ತು ಡಿ.26ರಂದು ತೆಲಂಗಾಣದ ಹೈದರಾಬಾದ್ನಲ್ಲಿ ಬೃಹತ್ ಅಧಿವೇಶನಗಳನ್ನು ನಡೆಸಲಾಗುವುದು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ರೈತರ ಎಚ್ಚರಿಕೆಯ ಶಕ್ತಿ ಪ್ರದರ್ಶನ ನಡೆಯಲಿದೆ ಎಂದರು.

ಬೆಂಗಳೂರಿನಲ್ಲಿ ಮಹಾಧಿವೇಶನ: ರೈತರ ಬೆಳೆ ಸಾಲದ ಬಡ್ಡಿಮನ್ನಾ ಎನ್ನುವುದು ನಾಟಕೀಯವಾಗಿದೆ. ರೈತರ ಕೃಷಿ ಸಾಲ ಸಂಪೂರ್ಣ ಮನ್ನಾಕ್ಕಾಗಿ ಡಿ.23 ರಂದು ಬೆಂಗಳೂರಿನಲ್ಲಿ ರೈತರ ಮಹಾಧಿವೇಶನ ನಡೆಯಲಿದೆ. ಸಾಲ ಮನ್ನಾ ಆಗದಂತೆ ವಂಚಿಸಲು ಬ್ಯಾಂಕುಗಳು ಬಡ್ಡಿ ದುಪ್ಪಟ್ಟು ಆಗುತ್ತದೆ, ಸುಸ್ತಿಯಾಗುತ್ತದೆ ಎಂದು ಹೆದರಿಸಿ ಆಂಗ್ಲ ಭಾಷೆಯ ಪತ್ರಕ್ಕೆ ರೈತರ ಸಹಿ ಪಡೆದು ಸಾಲ ನವೀಕರಣ ಮಾಡುತ್ತಿದ್ದಾರೆ. ಇದರಿಂದ ರೈತರು ಸಾಲ ಮನ್ನಾದಿಂದ ವಂಚಿತವಾಗುತ್ತಿದ್ದಾರೆ. ಈ ಬಗ್ಗೆ ರೈತರು ಜಾಗೃತರಾಗಿರಬೇಕು ಎಂದು ಹೇಳಿದರು.

ಕಳೆದ ಮೂರು ವರ್ಷಗಳಿಂದ ಅತಿವೃಷ್ಟಿಯ ಪ್ರವಾಹದಿಂದ ಹಾನಿ, ಅನಾವೃಷ್ಟಿಯಿಂದ ಬರಗಾಲಕ್ಕೆ ತುತ್ತಾಗಿರುವ ರಾಜ್ಯದ ಎಲ್ಲಾ ರೈತರ ಕೃಷಿ ಸಾಲ ಸಂಪೂರ್ಣ ಮನ್ನಾ ಮಾಡಬೇಕು. ಸಾಲ ಪಡೆದ ರೈತರು ಬೆಳೆ ಬೆಳೆಯಲು ಹೂಡಿಕೆ ಮಾಡಿ ಬೆಳೆ ನಾಶವಾಗಿ ಕೈಸುಟ್ಟಕೊಂಡು ಸಂಕಷ್ಟಕ್ಕೆ ಸಿಲುಕಿದ್ದಾರೆ. ಅದಕ್ಕಾಗಿ ಸಾಲಮನ್ನಾ ಆಗಲೇಬೇಕೆಂದು ಒತ್ತಾಯಿಸಿದರು.

ಕೈಗಾರಿಕೆ, ಉದ್ಯಮಿಗಳಿಗೆ ಸಂಕಷ್ಟದ ನೆರವು ಎಂದು 12 ಲಕ್ಷ ಕೋಟಿ ಮನ್ನಾ ಮಾಡಿರುವ ಕೇಂದ್ರ ಸರ್ಕಾರ ಅದೇ ಮಾದರಿ ರೈತರ ಸಾಲ ಮನ್ನಾ ಮಾಡಬೇಕು. ಇದೇ ದಿನ ರೈತರು ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಡಿ.23 ರಂದು ಸಾಲ ಮನ್ನಾ ಕೋರಿಕೆ ಅರ್ಜಿ ಸಲ್ಲಿಸಲಾಗುತ್ತದೆ. ಸಾಲ ಪಡೆದ ರೈತರೇ ಈ ಅಧಿವೇಶನಕ್ಕೆ ಸ್ವಯಂ ಪ್ರೇರಿತರಾಗಿ ಬರಬೇಕು ಎಂದು ಮನವಿ ಮಾಡಿದರು.

ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ: ಎಲ್ಲಾ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಕಾನೂನು ಜಾರಿ ಆಗಬೇಕು. ಸ್ವಾಮಿನಾಥನ್ ಆಯೋಗದ ವರದಿಯಂತೆ ಕನಿಷ್ಠ ಬೆಂಬಲ ಬೆಲೆ ನಿಗದಿಯಾಗಬೇಕು. ಪ್ರಧಾನಿಯವರು ರೈತರಿಗೆ ಭರವಸೆ ನೀಡಿದಂತೆ ಕೇಂದ್ರ ಸರ್ಕಾರ ಕೂಡಲೇ ಈ ಕಾನೂನು ಜಾರಿ ಮಾಡಬೇಕೆಂದು ಹೇಳಿದರು. ರೈತರು ಬರಗಾಲದ ಸಂಕಷ್ಟದಿಂದ ನರಳುತ್ತಿದ್ದು, ರಾಜ್ಯ ಸರ್ಕಾರ 2000ರೂ ಭಿಕ್ಷಾ ರೂಪದ ಪರಿಹಾರ ನೀಡುವುದು ಬೇಡ. ಸಂಪೂರ್ಣ ಬೆಳೆ ನಷ್ಟ ಪರಿಹಾರ ಕನಿಷ್ಠ 25,000 ರೂ. ನಿಡಬೇಕೆಂದರು. ಕೇಂದ್ರ ಸರ್ಕಾರ ಸಕ್ಕರೆ ರಫ್ತು ನಿಷೇಧ, ಯಥನಾಲ್ ಉತ್ಪಾದನೆಗೆ ತಡೆ ಹಾಕಿರುವುದು ಕಬ್ಬು ಬೆಳೆಯುವ ರೈತರಿಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ರೈತರಲ್ಲಿ ಆತಂಕ ಸೃಷ್ಟಿಯಾಗುತ್ತಿದೆ ಕೇಂದ್ರ ಸರ್ಕಾರ ಈ ಬಗ್ಗೆ ಮರುಪರಿಶೀಲನೆ ನಡೆಸಲಿ ಎಂದು ಒತ್ತಾಯಿಸುತ್ತೇವೆ ಎಂದರು.

ಪಂಜಾಬ್ ರಾಜ್ಯದಲ್ಲಿ ಟನ್ ಕಬ್ಬಿಗೆ 4000 ರೂ. ನಿಗದಿ ಮಾಡಿದ್ದಾರೆ. ರಾಜ್ಯದಲ್ಲಿ ಎರಡು ಮೂರು ಸಭೆಗಳಾದರೂ ಬಣ್ಣಾರಿ ಸಕ್ಕರೆ ಕಾರ್ಖಾನೆ ಮಣಿಸಲು ಸರ್ಕಾರಕ್ಕೆ ಸಾಧ್ಯವಾಗಿಲ್ಲ. ತೂಕದಲ್ಲಿ ಮೋಸ ಇಳುವರಿಯಲ್ಲಿ ಮೋಸ ಹಣ ಪಾವತಿಯಲ್ಲಿ ಮೋಸ ಮಾಡುತ್ತಿದ್ದರೂ ಸರ್ಕಾರ ಕಾರ್ಖಾನೆಗಳ ಮೇಲೆ ಕಠಿಣ ಕ್ರಮ ಕೈಗೊಳ್ಳುತ್ತಿಲ್ಲ. ಈ ಕೂಡಲೇ ವಂಚನೆ ನಿಯಂತ್ರಣಕ್ಕೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತನಿಖಾ ಸಮಿತಿ ರಚಿಸಿ ಕ್ರಮ ಕೈಗೊಳ್ಳಬೇಕು.

5000 ತಿಂಗಳ ಪಿಂಚಣಿ: ದೇಶದ 140 ಕೋಟಿ ಜನರಿಗೆ ಆಹಾರ ಉತ್ಪಾದಿಸಲು ತಮ್ಮ ಜೀವನವನ್ನೆ ತ್ಯಾಗ ಮಾಡುತ್ತಿರುವ 60 ವರ್ಷ ಪೂರೈಸಿದ ರೈತರಿಗೆ ತಿಂಗಳಿಗೆ ಕನಿಷ್ಠ 5000 ಪಿಂಚಣಿ ನೀಡುವ ಯೋಜನೆ ಜಾರಿಗೆ ತರಬೇಕು. ರೈತನ ಮಗನ ಮದುವೆಯಾಗುವ ವಧುವಿಗೆ ಸರ್ಕಾರಿ ಕೆಲಸದಲ್ಲಿ ಶೇ.10 ಮೀಸಲಾತಿ ನೀಡುವ ನೀತಿ ಜಾರಿಗೆ ತರಬೇಕು. ರೈತರ ಮಕ್ಕಳು ಕೃಷಿಯಿಂದ ವಲಸೆ ಹೋಗುವುದನ್ನು ತಪ್ಪಿಸಬೇಕು ಎಂದರು.

# ಥಂಡಿಗಾಳಿ ಬೀಸೋಕೆ ಶುರುವಾಗಿದೆ, ಆರೋಗ್ಯ ಕಾಪಾಡೋಕೆ ಬೆಲ್ಲದ ಬಳಕೆ ಹೆಚ್ಚು ಮಾಡಿ..

ಚಳಿಗಾಲದಲ್ಲಿ ದೇಹ ಬೆಚ್ಚಗಾಗಿಡುವುದರ ಜೊತೆಗೆ ಆರೋಗ್ಯದ ಕಡೆಗೂ ಗಮನ ಹರಿಸಬೇಕಾಗುತ್ತದೆ. ಆಹಾರದ ಬಗ್ಗೆ ಪ್ರಮುಖವಾಗಿ ಕಾಳಜಿ ವಹಿಸುವುದು ಅತೀ ಅಗತ್ಯ. ನಾವು ಸೇವಿಸುವ ಆಹಾರ ನಮ್ಮ ಆರೋಗ್ಯವನ್ನು ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಹಾಗಾದರೆ ಚಳಿಗಾಲದಲ್ಲಿ ಹೇಗೆ ಯಾವ ವಸ್ತುವನ್ನು ತಿನ್ನಬೇಕು ಎಂದು ನೋಡೋಣ.

ಬೆಲ್ಲ ಯಾರಿಗೆ ತಾನೇ ಇಷ್ಟ ಇಲ್ಲ ಹೇಳಿ. ಪ್ರತಿಯೊಬ್ಬರೂ ಇಷ್ಟಪಡುವ ಬೆಲ್ಲ ಆರೋಗ್ಯದ ದೃಷ್ಟಿಯಿಂದಲೂ ಅತೀ ಉತ್ತಮವಾದುದು. ಚಳಿಗಾಲದಲ್ಲಿ ಬೆಲ್ಲ ಸೇವಿಸುವುದರಿಂದ ಅನೇಕ ಲಾಭಗಳಿವೆ. ಬೆಲ್ಲವನ್ನು ಬಿಸಿ ಆಹಾರ ಪದಾರ್ಥವೆಂದು ಪರಿಗಣಿಸಲಾಗುತ್ತದೆ.

ಚಳಿಗಾಲದಲ್ಲಿ ಬೆಲ್ಲ ತಿನ್ನುವುದು ಆರೋಗ್ಯದ ವಿಚಾರದಲ್ಲಿ ಒಳ್ಳೆಯ ಅಂಶವಾಗಿದೆ. ಆಮ್ಲ ಪುಡಿಯನ್ನು ಬೆಲ್ಲದೊಂದಿಗೆ ಸೇರಿಸಿ ಸೇವಿಸುವುದರಿಂದ ಆರೋಗ್ಯ ವೃದ್ಧಿಗೆ ಉತ್ತಮವಾಗುತ್ತದೆ. ಬೆಲ್ಲದೊಂದಿಗೆ ತಾಜಾ ಆಮ್ಲ ಸೇವಿಸಬಹುದು. ಇದರ ಸಿಹಿ ಹುಳಿ ರುಚಿ ದೇಹದ ಆರೋಗ್ಯ ವೃದ್ಧಿಸುವುದರ ಜೊತೆಗೆ ರೋಗನಿರೋಧಕ ಶಕ್ತಿಯನ್ನೂ ಹೆಚ್ಚಿಸುತ್ತದೆ.

ಮುಖ್ಯವಾಗಿ ಚಳಿಗಾಲದಲ್ಲಿ ಬೆಲ್ಲವನ್ನು ಜೇನುತುಪ್ಪದೊಂದಿಗೆ ಬೆರೆಸಿ ಸೇವಿಸಿದರೆ ರೋಗನಿರೋಧಕ



ಶಕ್ತಿ ಹೆಚ್ಚಾಗುತ್ತದೆ. ಹಿಮೋಗ್ಲೋಬಿನ್ ಹೆಚ್ಚುವಿಕೆಗೂ ಸಹಕಾರಿಯಾಗುತ್ತದೆ. ಚಳಿಗಾಲದಲ್ಲಿ ದೇಹವನ್ನು ಬೆಚ್ಚಗಾಗಿ ಇರಿಸಿಕೊಳ್ಳಲು ಬೆಲ್ಲದ ಚಹಾ ಸೇವಿಸಬಹುದು. ಇದಕ್ಕೆ ತುಳಸಿ ಎಲೆ ಬಳಸಿದರೆ ರಕ್ತ ಶುದ್ಧವಾಗುವ ಜೊತೆಗೆ ಅಲರ್ಜಿಯಂತಹ ಖಾಯಿಲೆ ದೂರವಾಗುತ್ತದೆ.

ಚಳಿಗಾಲದಲ್ಲಿ ಜೀರ್ಣದ ಸಮಸ್ಯೆ ಹೆಚ್ಚಾಗಿ ಕಾಡುತ್ತದೆ. ಇದಕ್ಕೆ ತುಪ್ಪದೊಂದಿಗೆ ಬೆಲ್ಲವನ್ನು ಬೆರೆಸಿ ತಿನ್ನುವುದು ಉತ್ತಮ ಔಷಧ. ಜೀರ್ಣಕ್ರಿಯೆ ಹೆಚ್ಚುವಂತೆ ಮಾಡುತ್ತದೆ. ಮಲಬದ್ಧತೆಯನ್ನು ಹೋಗಲಾಡಿಸುತ್ತದೆ. ರಾತ್ರಿ ಹೊತ್ತು ಹಾಲಿಗೆ ಬೆಲ್ಲ ಮತ್ತು ಚಿಟಿಕಿ ಅರಶಿನಪುಡಿ ಬೆರೆಸಿ ಕುಡಿದರೆ ಹೊಟ್ಟೆಯ ಉರಿಯೂತ ಕಡಿಮೆಯಾಗುತ್ತದೆ. ಉಸಿರಾಟ,ಶೀತದ ತೊಂದರೆಯೂ ಕಡಿಮೆಯಾಗುತ್ತದೆ.


# ಚಳಿಗಾಲದಲ್ಲಿ ಪ್ರತಿದಿನ ಸೇವಿಸಬೇಕು ಈ ಡ್ರೈಫ್ರೂಟ್; ಕಾರಣ ಗೊತ್ತಾ ?

ಚಳಿಗಾಲದಲ್ಲಿ ಡ್ರೈಫ್ರೂಟ್‌ಗಳನ್ನು ನಿಯಮಿತವಾಗಿ ಸೇವನೆ ಮಾಡಬೇಕು. ಅನೇಕರು ಡ್ರೈಫ್ರೂಟ್ ಹಲ್ವಾವನ್ನು ಇಷ್ಟಪಡುತ್ತಾರೆ. ಇನ್ನೂ ಬೇರೆ ಬೇರೆ ವಿಧಾನಗಳನ್ನು ಅವುಗಳನ್ನು ನಾವು ಸೇವಿಸುತ್ತೇವೆ. ಚಳಿಗಾಲದಲ್ಲಿ ಡ್ರೈಫ್ರೂಟ್ ತಿನ್ನುವುದರಿಂದ ದೇಹವು ಬೆಚ್ಚಗಿರುತ್ತದೆ.

ಡ್ರೈಫ್ರೂಟ್‌ಗಳಲ್ಲಿ ಖರ್ಜೂರಕ್ಕೆ ಮೊದಲ ಸ್ಥಾನ. ಆದರೆ ಚಳಿಗಾಲದಲ್ಲಿ ಇದನ್ನು ತಿನ್ನಬೇಕೆ ಅಥವಾ ಬೇಡವೇ ಎಂಬುದು ಅನೇಕರಲ್ಲಿರುವ ಗೊಂದಲ.ಚಳಿಗಾಲದಲ್ಲಿ ಖರ್ಜೂರವನ್ನು ಸೇವಿಸುವುದರಿಂದ ದೇಹಕ್ಕೆ ಏನೆಲ್ಲಾ ಪ್ರಯೋಜನಗಳು ಸಿಗುತ್ತವೆ ಎಂಬುದನ್ನು ನೋಡೋಣ. ಇದು ಅನೇಕ ರೋಗಗಳನ್ನು ಕೂಡ ನಿಯಂತ್ರಿಸಬಲ್ಲದು. ಚಳಿಗಾಲ ಶುರುವಾಗುತ್ತಿದ್ದಂತೆಯೇ ಮಾರುಕಟ್ಟೆಯಲ್ಲಿ ಖರ್ಜೂರದ ಭರಾಟೆ ಕೂಡ ಜೋರಾಗಿರುತ್ತದೆ.

ಅಧಿಕ ರಕ್ತದೊತ್ತಡನಿಯಂತ್ರಣ ಚಳಿಗಾಲದಲ್ಲಿ ಕಡಿಮೆ ತಾಪಮಾನದಿಂದಾಗಿ ರಕ್ತನಾಳಗಳು ತಾತ್ಕಾಲಿಕವಾಗಿ ಕುಗ್ಗುತ್ತವೆ. ಇದರಿಂದ ದೇಹಕ್ಕೆ ಸರಿಯಾಗಿ ರಕ್ತ ಪೂರೈಕೆಯಾಗುವುದಿಲ್ಲ. ಅಂತಹ ಪರಿಸ್ಥಿತಿಯಲ್ಲಿ ರಕ್ತದೊತ್ತಡ ಹೆಚ್ಚಾಗುತ್ತದೆ. ಚಳಿಗಾಲದಲ್ಲಿ ಅಧಿಕ ಬಿಪಿಯನ್ನು ನಿಯಂತ್ರಿಸಲು ಖರ್ಜೂರವನ್ನು ಪ್ರತಿದಿನ ಸೇವಿಸಿ. ಏಕೆಂದರೆ ಖರ್ಜೂರದಲ್ಲಿ ಪೊಟ್ಯಾಸಿಯಮ್ ಸಮೃದ್ಧವಾಗಿದೆ.

ಮಧುಮೇಹ ನಿಯಂತ್ರಣ: ಕೆಲವರಿಗೆ ಚಳಿಗಾಲದಲ್ಲಿ



ಸಿಹಿತಿಂಡಿಗಳನ್ನು ತಿನ್ನಬೇಕೆಂಬ ತೀವ್ರ ಹಂಬಲವಿರುತ್ತದೆ. ಆದರೆ ಅದರಿಂದ ಶುಗರ್ ಲೆವೆಲ್ ಹೆಚ್ಚಾಗುವ ಅಪಾಯವಿರುತ್ತದೆ. ಸಕ್ಕರೆ ಕಾಯಿಲೆ ಇರುವವರು ಸಿಹಿ ತಿನ್ನಲು ಭಯಪಡುತ್ತಾರೆ. ಆದರೆ ಮಧುಮೇಹಿಗಳು ಕೂಡ ಖರ್ಜೂರವನ್ನು ಪ್ರತಿದಿನ ಮಿತವಾಗಿ ಸೇವನೆ ಮಾಡಬಹುದು. ಅದರಲ್ಲಿ ಗ್ಲೈಸೆಮಿಕ್ ಸೂಚ್ಯಂಕವು ತುಂಬಾ ಕಡಿಮೆಯಿರುವುದರಿಂದ ಅವರಿಗೂ ಪ್ರಯೋಜನಕಾರಿಯಾಗಿದೆ.

ಶೀತ ಮತ್ತು ಕೆಮ್ಮಿನಿಂದ ರಕ್ಷಣೆ: ಚಳಿಗಾಲದಲ್ಲಿ ಪ್ರತಿನಿತ್ಯ ಖರ್ಜೂರವನ್ನು ಹಾಲಿನೊಂದಿಗೆ ಸೇವಿಸಿದರೆ ಶೀತ ಮತ್ತು ಕೆಮ್ಮು ಕಡಿಮೆಯಾಗುತ್ತದೆ. ಈ ಋತುವಿನಲ್ಲಿ ಹೆಚ್ಚಿನ ಜನರು ನೆಗಡಿ ಮತ್ತು ಕೆಮ್ಮಿನಿಂದ ಬಳಲುತ್ತಾರೆ. ಖರ್ಜೂರದಲ್ಲಿರುವ ಪೋಷಕಾಂಶಗಳು ನಮ್ಮ ರೋಗನಿರೋಧಕ ಶಕ್ತಿಯನ್ನು ಬಲಪಡಿಸುತ್ತವೆ.

# ಹಂದಿಗುಂದ ಸಾರ್ವಜನಿಕ ಕೆರೆ ಒತ್ತುವರಿದಾರರ ವಿರುದ್ಧ ಬೆಳಗಾವಿ ಜಿಲ್ಲಾಧಿಕಾರಿ ಸೇರಿ ಒಟ್ಟು 17 ಜನರ ವಿರುದ್ಧ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಸಮನ್ಸ್ ಜಾರಿ



ಬೆಂಗಳೂರು: ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಹಂದಿಗುಂದ ಗ್ರಾಮದ ಕೆರೆ ಒತ್ತುವರಿ ವಿಷಯವಾಗಿ ಬೆಳಗಾವಿ ಜಿಲ್ಲಾಧಿಕಾರಿ ಸೇರಿ ಒಟ್ಟು 17 ಜನರ ವಿರುದ್ಧ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಸಮನ್ಸ್ ಜಾರಿ ಮಾಡಿದೆ. ಬೆಂಗಳೂರು ಸೆರಿದಂತೆ ರಾಜ್ಯದ ಉದ್ದಗಲಕ್ಕೂ ಕೆರೆಗಳೂ ಮತ್ತು ಅವುಗಳ ಸುತ್ತಮುತ್ತಲಿನ 30 ಮೀಟರ್ ಬಫರ್ ವಲಯದ ಸರ್ವೇ ಕಾರ್ಯವನ್ನು ಪುನರಾರಂಬಿಸಬೇಕೆಂದು ಹೈಕೋರ್ಟ್, ರಾಜ್ಯ ಸರ್ಕಾರಕ್ಕೆ ಹಲವಾರು ಪ್ರಕರಣಗಳಲ್ಲಿ ಖಡಕ್ ಆದೇಶ ನೀಡಿದೆ ಈ ಸಂಬಂಧ ನ್ಯಾಯಾಲಯವು ಸರ್ಕಾರ, ಕರ್ನಾಟಕ ಕೆರೆ ಸಂರಕ್ಷಣಾ ಪ್ರಾಧಿಕಾರ ಹಾಗೂ ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದೆ.

ಬೆಂಗಳೂರಿನಂಥ ನಗರ ಪ್ರದೇಶಗಳಷ್ಟೇ ಅಲ್ಲದೆ ರಾಜ್ಯದ ಉದ್ದಗಲಕ್ಕೂ ದೊಡ್ಡ ಸಂಖ್ಯೆಯಲ್ಲಿ ಕೆರೆಗಳೂ ಒತ್ತುವರಿಯಾಗಿವೆ. ರಾಜ್ಯದಲ್ಲಿ ಈ ಮೋದಲು ಸುಮಾರು 39 ಸಾವಿರ ಕೆರೆಗಳಿವೆ ಎಂದು ಅಂದಾಜಿಸಲಾಗಿತ್ತು. ಆದರೆ ಈ ಪೈಕಿ 5 ಸಾವಿರಕ್ಕೂ ಹೆಚ್ಚೂ ಕೆರೆಗಳೂ ಕಣ್ಮರೆಯಾಗಿದ್ದು. ಈಗ ಕೇವಲ 34 ಸಾವಿರ ಕೆರೆಗಳೂ ಬದೂಕೂಳಿದಿವೆ. ಈ ಕೆರೆಗಳನ್ನೂ ಕೆಲವರು ಒತ್ತುವರಿ ಮಾಡಿಕೊಳ್ಳಲಾಗುತ್ತಿದ್ದು ಅವಸಾನದ ಅಂಚಿಗೆ ತಲುಪುತ್ತಿವೆ. ಬಹುತೇಕ ಕೆರೆಗಳೂ ಸಣ್ಣ ನಿರಾವರಿ ಇಲಾಖೆಯ ವ್ಯಾಪ್ತಿಯಲ್ಲಿದ್ದರೆ ಕೆಲವೆಡೆ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಅರಣ್ಯ ಇಲಾಖೆ ಮತ್ತಿತರ ಸರ್ಕಾರಿ ಸಂಸ್ಥೆಗಳ ಒಡೆತನದಲ್ಲಿವೆ . ರಾಜ್ಯದಲ್ಲಿ 2021 ರ ಪೇಬ್ರುವರಿ 23 ರ ಹೊತ್ತಿಗೆ 17000 ಕೆರೆಗಳ ಸರ್ವೇ ನಡೆಸಲಾಗಿದೆ. ಜೂನ್ 18 ರಂದೂ ರಾಜ್ಯ ಮಟ್ಟದ ಸಮಿತಿಯ ಸಭೆ ನಡೆಸಲಾಗಿದ್ದು , ಸರ್ವೇ ಕಾರ್ಯ ಆರಂಭಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೈಕೋರ್ಟಿಗೆ ಸರ್ಕಾರ ಮಾಹಿತಿ ನೀಡಿದೆ . ವಾಸ್ತವದಲ್ಲಿ ಕೆರೆಗಳ ಸಂರಕ್ಷಣೆ ವಿಷಯದಲ್ಲಿ ಸರ್ಕಾರಗಳೂ ಜವಾಬ್ದಾರಿಯಿಂದ ವರ್ತಿಸಿದ್ದರೆ ನ್ಯಾಯಾಲಯಗಳೂ ಆದೇಶ ಮಾಡುವ ಪ್ರಮೇಯವೇ ಬರುತ್ತಿರಲಿಲ್ಲ. ಈಗಲೂ ಕಾಲ ಮಿಂಚಿಲ್ಲ ಉಳಿದಿರುವ ಕೆರೆಗಳನ್ನಾದರೂ ಮುಂದಿನ ಪಿಳಿಗೆಗೆ ಕಾಪಾಡುವ ಕೇಲಸ ಮಾಡಬೇಕಿದೆ. ನಮ್ಮ ರಾಜ್ಯದಲ್ಲಿ ಬಹುತೇಕ ಭಾಗಗಳಿಗೆ ಕೃಷಿ ಮತ್ತು ಕುಡಿಯುವ ನೀರಿಗೆ ಜಲ ಮೂಲ ಎಂಬುವುದನ್ನು ಮರೆಯಬಾರದೂ ಆದರೆ ಕೇಲವು ಕಿಡಿಗೆಡಿಗಳ ದುರಾಶೆಯ ಫಲವಾಗಿ ಈ ಜಲ ಮೂಲಗಳನ್ನು ಹಾಳು ಮಾಡಲಾಗುತ್ತಿವೇ. ಕೆರೆಗಳ ಅಳಿವು -ಉಳಿವು ಅಂದರೆ ಅದು ಕೇವಲ ಕೇರೆಗಳ ಸಂರಕ್ಷಣೆ ಮಾತ್ರವಲ್ಲ .ಅದು ನಮ್ಮ ಅಳಿವು -ಉಳಿವು ಸಹ ಹೌದು. ಕೆರೆಗಳು ಜಿವಂತವಾಗಿದ್ದರೆ ನಾವು ಬದುಕುತ್ತೆವೆ . ಇಲ್ಲವಾದರೆ ನಮ್ಮ ಬದುಕು ಬತ್ತಿಹೋಗುತ್ತದೆ ಎಂಬ ಪ್ರಜ್ಞೆಯನ್ನು ಮೆರೆಯಬೇಕಿದೆ. ಕೆರೆಗಳ ಒತ್ತುವರಿ ಕೇವಲ ಬೆಂಗಳೂರಿನಂತಹ ನಗರ ಪ್ರದೇಶಗಳಿಗೆ ಸಿಮೀತವಾಗಿದೆ ಎಂಬ ಭಾವನೆ ಇದೆ. ಆದರೆ ರಾಜ್ಯಾದ್ಯಂತ ಹಳ್ಳಿ ,ನಗರವೆಂಬ ಬೇದವಿಲ್ಲದೆ ಕೆರೆಗಳೂ ಒತ್ತೂವರಿಯಾಗಿರುವುದು ಹಗಲಿನಷ್ಟೇ ಸತ್ಯ. ಸದ್ಯ ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಹಂದಿಗುಂದ ಎಂಬ ಗ್ರಾಮ ಈ ಅಪವಾದಕ್ಕೆ ಜಿವಂತ ಸಾಕ್ಷಿಯಾಗಿದೆ ಎಂದರೆ ಅಕ್ಷರಶ: ತಪ್ಪಾಗದೂ ಒಂದು ಅಂದಾಜಿನ ಪ್ರಕಾರ ಹಂದಿಗುಂದ ಗ್ರಾಮದ ಜನಸಾಮನ್ಯರನ್ನೂ ನೋಡಿದರೆ ತುಂಬಾ ಹೃದಯವಂತರೂ , ಸಹೃದಯಿಗಳೂ ಹಾಗೂ ಪರೋಪಕಾರಿಗಳು ಅಂದರೆ ಖಂಡಿತವಾಗಿಯೂ ಅತಿಶಯೋಕ್ತಿಯವಲ್ಲ. ಆದರೆ ಕೆಲವೇ ಕೆಲವು ಕೀಡಿಗೇಡಿಗಳು ಮಾಡುವ ಅಂದಾ ದುಂದಿಗೆ ನಿಜಕ್ಕೂ ಅಖಂಡ ಗ್ರಾಮದ ಜನತೆಯೇ ಕೆಲವು ಸಂಧರ್ಭಗಳಲ್ಲಿ ತಲೆ ತಗ್ಗಿಸುಂತಾಗಿದೆ . ಸದ್ಯ ಇಂತಹ ಅಪವಾದಕ್ಕೆ ಸಾಕ್ಷಿಯಾಗಿದ್ದೂ ಹಂದಿಗುಂದ ಗ್ರಾಮದ ಕೆರೆ ಒತ್ತುವರಿ.

ಹೌದು ಹಂದಿಗುಂದ ಗ್ರಾಮದ ಕೆರೆ ಒತ್ತುವರಿಯಾಗಿರುವ ವಿಷಯವನ್ನು ನ್ಯಾಯವಾದಿ ಮತ್ತು ಛಲಗಾರ ವಾಹಿನಿಯ ಮುಖ್ಯಸ್ಥ ಶ್ರೀ ಪ್ರಭಾಕರ ಹೆಚ್ ಗಗ್ಗರಿ ಎಂಬುವವರು ತಮ್ಮ ಗಮನಕ್ಕೆ ಬರುತ್ತಿದ್ದ ಹಾಗೆ ಹೆಗಾದರೂ ಸರಿ , ಹಂದಿಗುಂದ ಗ್ರಾಮದ ಕೆರೆಯನ್ನು ಉಳಿಸಿಕೊಳ್ಳಬೇಕು ಎಂದು ಸಂಕಲ್ಪ ಮಾಡಿ ದಿನಾಂಕ 22/01/2021 ರಂದು ಮೇ//ಜಿಲ್ಲಾಧಿಕಾರಿಗಳು ,ಬೆಳಗಾವಿ ಇವರಿಗೆ ಹಂದಿಗುಂದ ಗ್ರಾಮದ ಸಾರ್ವಜನಿಕ ಕೇರೆ ಒತ್ತುವರಿಯಾಗಿರುವ ಬಗ್ಗೆ ಮಾಹಿತಿ ನಿಡಿ ಅಕ್ರಮ ಕಟ್ಟಡಗಳನ್ನು ತೇರವುಗೊಳಿಸಲು ಪಿರ್ಯಾದಿ ನಿಡಿರುತ್ತಾರೆ. ನಂತರ ಸಂಬಂದಿತ ಅಧಿಕಾರಿಗಳ ಕ್ರಮ ವಿಳಂಬವಾಗಿದ್ದರಿಂದ ದಿನಾಂಕ 18/02/2021 ರಂದು ಮತ್ತೆ ಮೇ// ಜಿಲ್ಲಾಧಿಕಾರಿಗಳು ,ಬೆಳಗಾವಿ ಇವರಿಗೆ ಮರು ಅರ್ಜಿ ನಿಡಿರುತ್ತಾರೆ. ನಂತರ ಸದರಿ ಅಧಿಕಾರಿಗಳು ಕಾನೂನೂ ಕ್ರಮಕ್ಕಾಗಿ ಮೇ// ತಹಶಿಲ್ದಾರರವರು, ತಹಶಿಲ್ದಾರರವರ ಕಾರ್ಯಾಲಯ ರಾಯಬಾಗ ಇವರಿಗೆ, ರವಾಣೇ ಮಾಡಿ , ಸದರಿ ಅರ್ಜಿಯ ಆದೇಶ ಮಾಡಿರುತ್ತಾರೆ. ಆದರೆ ಸದರಿ ಅಧಿಕಾರಿಗಳು ಇದುವರೆಗೂ ಯಾವುದೇ ರೀತಿಯ ಕಾನೂನು ಕ್ರಮ ಜರುಗಿಸಿರುವುದಿಲ್ಲ ಆದ್ದರಿಂದ ತಡವಾಗಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಕಛೇರಿ ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ 'ಬಳಿ ಬಂದು ಪಿರ್ಯಾದಿ ನಿಡಿರುತ್ತಾರೆ. ಅದರಂತೆ ಗೌರವಾನ್ವಿತರಾದ ಪ್ರಾಧಿಕಾರ ಕೂಡಲೇ ಅನಧಿಕೃತವಾಗಿ ಅತಿಕ್ರಮಣವಾಗಿರುವ ಹಂದಿಗುಂದ ಕೆರೆಯನ್ನು ತೆರವುಗೊಳಿಸಬೇಕು ಮತ್ತು ಅತಿಕ್ರಮಣದಾರರ ಮೇಲೆ ಯೋಗ್ಯ ಕಾನೂನು ಕ್ರಮ ಜರುಗಿಸಬೇಕೆಂದು ಶ್ರೀ ಪ್ರಭಾಕರ ಹೆಚ್ ಗಗ್ಗರಿ ಪಿರ್ಯಾದಿ ನಿಡಿರುತ್ತಾರೆ. ಮತ್ತು ಸದರಿ ಪಿರ್ಯಾದಿಯ ಬಗ್ಗೆ ತೆಗೆದುಕೊಂಡಿರುವ




ಕುರಿತು ನಿಯಮಾನುಸರ ಪರಿಶೀಲನೆ ಮಾಡಿ ,ಸೂಕ್ತ ಕ್ರಮಕೈಗೊಂಡು , ಕೈಗೊಂಡ ಕ್ರಮದ ಕುರಿತು ಅರ್ಜಿದಾರರಿಗೆ ಹಿಂಬರಹ ನಿಡಿದ್ದು ಇರತ್ತದೆ . ಸದರಿ ಅರ್ಜಿಯ ಉಲ್ಲೇಖ: ನಂ ಕಂಶಾ/ಎನ್‌ಸಿಆರ್ /ಸಿಆರ್/07/2020-21 ದಿನಾಂಕ : 03/02/2021 ಎಂದು ಇರುತ್ತದೆ.

ವಿಷಯ ಹಿಗಿರುವಾಗ ಸದರಿ ತಣ ಖಾಧಿಕಾರಿಗಳು ಅರ್ಜಿ ನೀಡಿ ಒಂದು ವರ್ಷವಾದರೂ ಇದುವರೆಗೂ ಕೇರೆ ಒತ್ತುವರಿ ಮಾಡಿರುವ ಆರೋಪಿಗಳ ವಿರುದ್ಧವಾಗಲಿ, ಅಥವಾ ತೇರವುಗೋಳಿಸುವ ವಿಷಯವಾಗಲಿ ಯಾವುದೇ ಕಾನೂನೂ ಕ್ರಮ ಜರುಗಿಸಿರುವುದಿಲ್ಲ, ಆದ್ದರಿಂದ ಸದರಿ ತಣ ಖಾಧಿಕಾರಿಗಳನ್ನು ಕರ್ತವ್ಯಲೋಪದ ಆದಾರದ ಮೇಲೆ ಸೇವೆಯಿಂದ ಅಮಾನತ್ತು ಮಾಡಬೇಕು .ಮತ್ತು ಸದರಿ ಕೇರೆ ಒತ್ತುವರಿ ತೇರವುಗೋಳಿಸಲು ದಕ್ಷ ಪ್ರಾಮಾಣ ಕ ಅಧಿಕಾರಿಯನ್ನು ನೇಮಕ ಮಾಡಬೇಕು ಮತ್ತು ಸದರಿ ಅರ್ಜಿಯ ಬಗ್ಗೆ ತೇಗೆದುಕೊಂಡಿರುವ ಕಾನೂನು ಕ್ರಮದ ಕುರಿತು 20 ದಿನಗಳಲ್ಲಿ ಲೀಖಿತವಾಗಿ ಹಿಂಬರಹದೊಂದಿಗೆ ಮಾಹಿತಿ ನಿಡತಕ್ಕದ್ದು. ಎಂದು ಲೀಖಿತವಾಗಿ ಪಿರ್ಯಾದಿ ನಿಡಿರುತ್ತಾರೆ. ಅದರಂತೆ ಮೇ// ಜಿಲ್ಲಾಧಿಕಾರಿಗಳು ಬೆಳಗಾವಿ ರವರು ದಿನಾಂಕ 02/03/2022 ರಂದು ರಾಯಬಾಗ ತಹಶಿಲ್ದಾರರವರಿಗೆ ಕೆರೆ ಅತಿಕ್ರಮಣವನ್ನು ತೇರವುಗೊಳಿಸಲು ಮರು ಕಾನೂನು ಕ್ರಮದ ಕುರಿತು ಹಿಂಬರಹದ ಮುಖಾಂತರ ಮಾಹಿತಿ ನೀಡಬೇಕೆಂದು ದಿನಾಂಕ : 11/03/2022 ರಂದು ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಕಛೇರಿ ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ನೆಲ ಮಹಡಿ,ಬೀಜ ಭವನ, ಬಳ್ಳಾರಿ ರಸ್ತೆ ಹೆಬ್ಬಾಳ ,ಬೆಂಗಳೂರು ಇವರಲ್ಲಿ ಲೀಖಿತವಾಗಿ ಪಿರ್ಯಾದಿ ನಿಡಿರುತ್ತಾರೆ. ಆದರಂತೆ ಸದರಿ ಅಧಿಕಾರಿಗಳು ದಿನಾಂಕ : 13/04/2022 ರಂದು ಹಿಂರಹದ ಮೂಲಕ ಜಿಲ್ಲಾಧಿಕಾರಿಗಳು ಬೆಳಗಾವಿಯವರಿಗೆ ಆದೇಶ ಮಾಡಿದ್ದು ಸದರಿ ಹಿಂಬರಹದ ಅರ್ಜಿಯ ಉಲ್ಲೇಖ : ಸಂಖ್ಯೆ : ಕ.ಕೆ.ಸಂ.ಅ.ಪ್ರಾ/ಬೆಂ/ ಉಡಿಜತಚಿಟಿಥಿಜ/ ಬೆಳಗಾವಿ/19/2020-21/106 ಇರುತ್ತದೆ . ಅದರಂತೆ ಸದರಿ ಹಿಂಬರಹ ಅದೇಶದಲ್ಲಿ 1) ಜಿಲ್ಲಾಧಿಕಾರಿಗಳು ಬೆಳಗಾವಿ 2) ಮುಖ್ಯ ಕಾರ್ಯನಿರ್ವಾಣಾಧಿಕಾರಿಗಳು, ಜಿಲ್ಲಾ ಪಂಚಾಯತಿ ಬೆಳಗಾವಿ 3) ಮೇ// ತಹಶಿಲ್ದಾರರವರು, ತಹಶಿಲ್ದಾರರವರ ಕಾರ್ಯಾಲಯ ರಾಯಬಾಗ ಇವರಿಗೆ, 4) ಜಿಲ್ಲಾ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಕಾರ್ಯನಿರ್ವಾಹಣಾಧಿಕಾರಿಗಳ ಕಛೇರಿ ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ಬೆಳಗಾವಿ ಜಿಲ್ಲೆ ಇವರಿಗೆ ರವಾಣ ಸಿ ಕಾನೂನು ಕ್ರಮಕ್ಕಾಗಿ ಕಳುಹಿಸಿರುತ್ತಾರೆ. ಆದರೆ ಇದುವರೆಗೂ ಸಂಬಂದ ಪಟ್ಟ ಅಧಿಕಾರಿಗಳು , ಕೆರೆ ಸಂರಕ್ಷಣಾ ಕ್ರಮವಾಗಲಿ ಅಥವಾ ಅತಿಕ್ರಮಣ ಮಾಡಿದ ಆರೋಪಿಗಳ ಮೇಲೆ ಯಾವುದೇ ಕಾನೂನು ಕ್ರಮ ಜರುಗಿಸಿರುವುದಿಲ್ಲ.

( ಕ.ಕೆ.ಸಂ.ಅ.ಪ್ರಾ/ಬೆಂ ಇವರ ಆದೇಶದಲ್ಲಿ ಸದರಿ ಇಲಾಖೆಯಲ್ಲಿ ಇರುವ ದಾಖಲೆಗಳನ್ನು ಪರಿಶೀಲಿಸಲಾಗಿದ್ದು. ಈ ಕೆರೆಯು ಹಂದಿಗುಂದ ಗ್ರಾಮ ಪಂಚಾಯತಿಗೆ ಬರುವುದಾಗಿ ಗಮನಿಸಿದ್ದು. ಈ ಹಿನ್ನೆಲೆಯಲ್ಲಿ ಈ ಕೆರೆಯು ಪಂಚಾಯತ ಅಭಿವೃದ್ಧಿ ಅಧಿಕಾರಿ ಸುಪರ್ಧಿಯಲ್ಲಿದ್ದು ಈ ರೀತಿ ಒತ್ತುವರಿಯಾಗಿರುವುದನ್ನು ತಡೆಗಟ್ಟಲು ವಿಫಲಾರಾಗಿರುವುದು ಕಂಡು ಬಂದಿರುತ್ತದೆ. ಆದ್ದರಿಂದ, ಮತ್ತೊಮ್ಮೆ ತಹಶಿಲ್ದಾರರಿಗೆ ತಮ್ಮ ವತಿಯಿಂದ ನಿರ್ದೇಶನ ನೀಡಿ ಒತ್ತುವರಿಯನ್ನು ಗುರುತಿಸಿ ತೇರುವುಗೊಲಿಸಲು ಹಾಗೂ ಕೆರೆಯನ್ನು ರಕ್ಷೀಸಲು ತಂತಿಬೆಲಿ/ಟ್ರೇಂಚ್/ ಅರಣ್ಯಕರಣ ಕಾಮಗಾರಿಯನ್ನು ಕೈಗೊಳ್ಳಲು ಮುಖ್ಯ ಕಾರ್ಯನಿರ್ವಾಣಾಧಿಕಾರಿಗಳು, ಜಿಲ್ಲಾ ಪಂಚಾಯತಿ ಬೆಳಗಾವಿ ರವರಿಗೆ ನಿರ್ದೇಶಿಸಬಹುದಾಗಿ ಕೊರುತ್ತಾ ಈ ನಿಟ್ಟಿನಲ್ಲಿ ಕೆಳಹಂತದ ಅಧಿಕಾರಿಗಳು ಕ್ರಮ ಕೈಗೊಳ್ಳಲು ತಮ್ಮ ವತಿಯಿಂದ ನಿರ್ದೇಶನ ನೀಡಲು ಕೊರುತ್ತೆನೆ. ಎಂದು ಪ್ರಾಧಿಕಾರ ಆದೇಶ ಮಾಡಿರುತ್ತದೆ.)

ಸದ್ಯ ಇದೆಲ್ಲದರ ಪ್ರತಿಫಲವಾಗಿ ಈಗಾಗಲೇ ಎರಡು ಹಂತದ ಕೆರೆ ಒತ್ತುವರಿಯ ಪ್ರಾಥಮೀಕ ತನಿಖೆ ಮುಗಿದಿದ್ದು ಹಂದಿಗುಂದ ಗ್ರಾಮದ ಕೆರೆ ಒತ್ತುವರಿಯಾಗಿರುವುದು ಖಾತರಿಯಾಗಿದ್ದು , ಹಂದಿಗುಂದ ಗ್ರಾಮದ ಪಂಚಾಯತ ಅಭಿವೃದ್ಧಿ ಅಧಿಕಾರಿ ಶ್ರೀ ಮಹಾದೇವ ಕುಂಬಾರರವರ ನೇತೃತ್ವದಲ್ಲಿ ಸರ್ವೇ ಮಾಡಲಾಗಿದೆ. ಆದರೆ ಇದುವರೆಗೂ ಹಂದಿಗುಂದ ಕೆರೆ ಒತ್ತುವರಿಯನ್ನು ತೆರವುಗೊಳಿಸಲು ಜಿಲ್ಲಾಡಳಿತ ವಿಫಲವಾಗಿದ್ದರಿಂದ ಬೆಳಗಾವಿ ಜಿಲ್ಲಾಧಿಕಾರಿ ಮತ್ತು ಅಕ್ರಮ ಕೆರೆ ಒತ್ತುವರಿದಾರದ ವಿರುದ್ದ ನ್ಯಾಯವಾದಿ ಮತ್ತು ಛಲಗಾರ ವಾಹಿನಿಯ ಮುಖ್ಯಸ್ಥ ಶ್ರೀ ಪ್ರಭಾಕರ ಹೆಚ್ ಗಗ್ಗರಿಯವರು ದಿನಾಂಕ : 10/07/2023 ರಂದು ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ನಲ್ಲಿ ಸಾರ್ವಜನಿಕ ಇತಾಸಕ್ತಿ ಅರ್ಜಿ ಸಲ್ಲಿಸಿದ್ದರು . ಅದರಂತೆ ಈ ಪ್ರಕರಣವು ಅತ್ಯಂತ ಗಂಭಿರ ಪ್ರಕರಣವೆಂದು ಅಭೀಪ್ರಾಯ ಪಟ್ಟು ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಮುಖ್ಯ ನ್ಯಾಯಮೂರ್ತಿ ಕೃಷ್ಣ ಎಸ್ ದಿಕ್ಷೀತ್ ರವರು, ದಿನಾಂಕ 19/12/2023 ರಂದು ಬೆಳಗಾವಿ ಜಿಲ್ಲಾಧಿಕಾರಿ ಮತ್ತು ಅಕ್ರಮ ಕೆರೆ ಒತ್ತುವರಿದಾರನ್ನು ಸೇರಿ ಒಟ್ಟು 17 ಜನಕ್ಕೆ ನೋಟಿಸ್ ಜಾರಿ ಮಾಡಿದೆ. ಹಾಗಾದರೆ ಕಾದು ನೋಡಬೇಕಾಗಿದೆ ಹಂದಿಗುಂದ ಕೇರೆ ಉಳಿಯುತ್ತಾ ? ಒತ್ತುವರಿದಾರರ ಪಾಲಾಗುತ್ತದೆಯಾ ?

# ಗ್ರಾಪಂ ಸದಸ್ಯನ ಅರಬೆತ್ತಲೆ ಮಾಡಿ ನೀಚ ಕೃತ್ಯ



ಹಾವೇರಿ: ಜಿಲ್ಲೆಯ ರಾಣೇಬೆನ್ನೂರು ತಾಲೂಕಿನ ಚಳಗೇರಿ ಗ್ರಾಮದಲ್ಲಿ ಮತ್ತೊಂದು ಅಮಾನವೀಯ ಕೃತ್ಯ ಬೆಳಕಿಗೆ ಬಂದಿದೆ.

ಏನಿದು ಪ್ರಕರಣ..? ಗ್ರಾಮ ಪಂಚಾಯತಿ ಸದಸ್ಯರೊಬ್ಬರನ್ನು ಅರಬೆತ್ತಲೆ ಮಾಡಿ ಮೃಗೀಯವಾಗಿ ನಡೆಸಿಕೊಂಡಿದ್ದಾರೆ. ಹಲ್ಲೆಗೊಳಗಾದ ಗ್ರಾಮ ಪಂಚಾಯತ್ ಸದಸ್ಯನ ಸಂಬಂಧಿ ಒಬ್ಬರು ಓರ್ವ ಯುವತಿಯನ್ನು ಪ್ರೀತಿಸುತ್ತಿದ್ದರು. ಹಲವು ವರ್ಷಗಳಿಂದ ಲವ್ ಬರ್ಡ್ಸ್ ಆಗಿ ತಿರುಗಾಡಿದ್ದ ಈ ಜೋಡಿ ನಾಲ್ಕೈದು ದಿನಗಳ ಹಿಂದೆ ಮನೆಬಿಟ್ಟು ಓಡಿ ಹೋಗಿತ್ತು. ಇದೇ ಕಾರಣಕ್ಕೆ ಗ್ರಾಪಂ ಸದಸ್ಯನನ್ನು ಹಿಡಿದು ಥಳಿಸಿದ್ದಾರೆ.

ಗ್ರಾಪಂ ಸದಸ್ಯನನ್ನು ರಸ್ತೆಯಲ್ಲಿ ಅರಬೆತ್ತಲೆಯಾಗಿ ನಿಲ್ಲಿಸಿ ಏಟು ಕೊಟ್ಟಿದ್ದಾರೆ. ಹುಡುಗಿಯ ಮನೆಯವರ ವಿರುದ್ಧ ನೀಚ ಕೃತ್ಯ ನಡೆಸಿರುವ ಆರೋಪ ಕೇಳಿಬಂದಿದೆ. ಶಿವಾಜಿ ಕಮದೋಡು, ಬಸಣ್ಣ ಸೇರಿದಂತೆ 20 ಜನರು ಸೇರಿ ಹಲ್ಲೆ ಮಾಡಿದ್ದಾರೆ. ಹಲ್ಲೆ ಮಾಡಿದ ಹುಡುಗಿ ಮನೆಯವರ ವಿರುದ್ಧ ಗ್ರಾಮ ಪಂಚಾಯತಿ ಸದಸ್ಯ ದೂರು ನೀಡಿದ್ದಾರೆ. ಹಲಗೇರಿ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

**ಪುರಸಭೆ ಕಾರ್ಯಾಲಯ ಅಥಣಿ**
**ಡಾ॥ ಬಿ.ಆರ್ ಅಂಬೇಡ್ಕರ್ ವೃತ್ತದ ಹತ್ತಿರ, ಅಥಣಿ-591304**
**ಜಿ:ಬೆಳಗಾವಿ. ದೂರವಾಣಿ:08289-251137 ವೆಬಸೈಟ್:www.athanitown.mrc.gov.in**

**ಕ್ರಮ ಸಂಖ್ಯೆ:ಪುಸಅ:ಕಾಮಗಾರಿ:ಟೆಂಡರ::2023-24** **ದಿನಾಂಕ: 18-12-2023**

**॥ಟೆಂಡರ ಪ್ರಕಟಣೆ॥ ॥ಇ-ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ॥ (ಕರ್ನಾಟಕ ಪಾರದರ್ಶಕ ಅಧಿನಿಯಮ 2000 ರನ್ವಯ)**

ಅಥಣಿ ಪುರಸಭೆ ವ್ಯಾಪ್ತಿಯಲ್ಲಿ ಸನ್ 2023-24ನೇ ಸಾಲಿನ ಎಸ್.ಎಫ್.ಸಿ. ಮತ್ತು ಪುರಸಭೆ ಅನುದಾನದಲ್ಲಿ ಶೇ.5% ಯೋಜನೆಯಡಿ ಕೈಗೊಂಡ ಈ ಕೆಳಗೆ ವಿವರಿಸಿದ ಕಾಮಗಾರಿಗೆ ಲೋಕೋಪಯೋಗಿ/ ಪಂಚಾಯತ ರಾಜ/ಕರ್ನಾಟಕ ಸರ್ಕಾರದ ಇಂಧನ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ ಅರ್ಹ ಪೈರೈಕೆದಾರರು ಕೆ.ಜಿ-1,2, ರ ಪ್ರಕಾರ ಟೆಂಡರನ್ನು ಆಹ್ವಾನಿಸಲಾಗಿದೆ. ಇಚ್ಚೆಯುಳ್ಳ ಪೂರೈಕೆದಾರರು ಇ-ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ ಬಿಡ್ಡ್ ಸಲ್ಲಿಸಬಹುದು. ಕಾಮಗಾರಿಗಳ ವಿವರ ಈ ಕೆಳಗಿನಂತಿದೆ.

ಪ್ಯಾ ನಂ:1:ಕಾಮಗಾರಿ ಇಂಡೆಂಟ್ ನಂ:DMA/2023-24/IND0751, ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):3.69, ಇ.ಎಂ.ಡಿ ಮೊತ್ತ (ರೂ.ಗಳಲ್ಲಿ):9225

ಟೆಂಡರ ಪಾರ್ಮ ವೆಬ್ ಸೈಟಿನಿಂದ ಡೌನ್ ಲೋಡ ಮಾಡಿಕೊಳ್ಳುವ ಪ್ರಾರಂಭದ ದಿನಾಂಕ:19-12-2023,ಭರ್ತಿ ಮಾಡಿದ ಟೆಂಡರಗಳನ್ನು ಅಪಲೋಡ್ (Upload) ಮಾಡುವ ಕೊನೆಯ ದಿನಾಂಕ:28-12-2023, ಟೆಂಡರಗಳನ್ನು ತೆರೆಯುವ ದಿನಾಂಕ:30-12-2023 ಸಾಯಂಕಾಲ 5.00 ಘಂಟೆಯ ನಂತರ ತೆರೆಯಲಾಗುವುದು,ಹೆಚ್ಚಿನ ಮಾಹಿತಿಗಾಗಿ Website:www.athanitown.mrc.gov.in & https://kppp.karnataka.gov.in ವೆಬ್‌ಸೈಟನಲ್ಲಿ ನೋಡಬಹುದು

ಸಹಿ/-ಮುಖ್ಯಾಧಿಕಾರಿ
ಪುರಸಭೆ ಅಥಣಿ

ಸಹಿ/-ಆಡಳಿತಾಧಿಕಾರಿಗಳು
ಪುರಸಭೆ ಅಥಣಿ ಹಾಗೂ
ಉಪವಿಭಾಗಾಧಿಕಾರಿಗಳು ಚಿಕ್ಕೋಡಿ

DIPR/BGM/RO-NO-799/MCA/2023-24

# ಕಾರ್ಮಿಕ ಭವಿಷ್ಯ ನಿಧಿ ಬಾಕಿ ವಸೂಲಾತಿ ಕ್ರಮ ಜಾರಿ

ಶಿವಮೊಗ್ಗ: ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆ, ನವದೆಹಲಿಯು ಡಿಸೆಂಬರ್ 2023 ರಿಂದ ಫೆಬ್ರವರಿ –2024ರವರೆಗೆ ವಿಶೇಷ ವಸೂಲಾತಿ ಅಭಿಯಾನವನ್ನು ಪ್ರಾರಂಭಿಸಿದ್ದು, ಇಪಿಎಫ್ ಮತ್ತು ಎಂಪಿ ಆಕ್ಟ್ 1952ರ ಸೆಕ್ಷನ್ 8ಬಿ ಯಿಂದ 8ಜಿ ಅಡಿಯಲ್ಲಿ ಮರುಪ್ರಾಪ್ತಿ ಪ್ರಕ್ರಿಯೆಗಳು ಪಿಎಫ್ ಮತ್ತು ಅಲೈಡ್ ಬಾಕಿಗಳ ವಸೂಲಾತಿಗಾಗಿ ಪ್ರಾದೇಶಿಕ ಕಚೇರಿಯಿಂದ ಟಾಪ್ 5 ಸಂಸ್ಥೆಗಳ ವಿರುದ್ಧ ಕ್ರಮ ಜಾರಿಗೊಳಿಸಿದೆ.

ಹರಪ್ಪನಹಳ್ಳಿಯ ಮೆ॥ ಕತ್ರ ಫೈಟೋಕೆಮ್ ಪ್ರೈ.ಲಿ., ಹರಿಹರದ ಮೆ॥ ಸೋನಲ್ಕರ್ ಟೂಲ್ ವರ್ಕ್ಸ ಪ್ರೈ. ಲಿ., ಶಿವಮೊಗ್ಗದ ಬಿ. ಬಸವರಾಜ್, ಕಂಟ್ರಾಕ್ಟರ್, ಮೆ॥ವರ್ಟೀರಾ ಡಿನ್ನರ್ವೇರ್ ಪ್ರೈ.ಲಿ., ಹಾಗೂ ಶ್ರೀ ಗುರು ರಾಘವೇಂದ್ರ ಎಂಟರ್ಪ್ರೈಸಸ್, ಸಂತೆಕಡೂರು ಈ ಸಂಸ್ಥೆಗಳ ಉದ್ಯೋಗದಾತರ/ ನಿರ್ದೇಶಕರ ಆಸ್ತಿಗೆ ಸಂಬಂಧಿಸಿದಂತೆ ಯಾವುದೇ ಮಾಹಿತಿ ಲಭ್ಯವಿದ್ದರೆ ಅದನ್ನು ಡಿಥಿ.ಖತಚಿಟಂರಂಚಿ@ಜಠಿಜಿಟಿಜಬಿ.ರಿಂತಿ.ಟಿ ನಲ್ಲಿ ಹಂಚಿಕೊಳ್ಳಬಹುದಾಗಿದೆ.

ಬಲವಂತದ ಕ್ರಮಗಳನ್ನು ತಪ್ಪಿಸಲು, ಉದ್ಯೋಗದಾತರು ಪಿಎಫ್ ವಂತಿಕೆಗಳನ್ನು ನಿಗದಿತ ಅವಧಿಯಲ್ಲಿ ಮತ್ತು ಆದೇಶ ನೀಡಿದ 60 ದಿನಗಳಲ್ಲಿ ಎಲ್ಲಾ ಪಿಎಫ್ ಸಂಬಂಧಿತ ಬಾಕಿಗಳನ್ನು ಭರಿಸಲು ಕ್ಷೇತ್ರೀಯ ಭವಿಷ್ಯನಿಧಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದೆ.

# ಹೊಸ ನ್ಯಾಯಬೆಲೆ ಅಂಗಡಿ ತೆರೆಯಲು ಅರ್ಜಿ ಅಹ್ವಾನ

ಶಿವಮೊಗ್ಗ: ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ಸಾಗರ ತಾಲೂಕಿನ ಸೈದೂರು ಮತ್ತು ಚನ್ನಗೊಂಡ ಗ್ರಾಮಗಳಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿ ತೆರೆಯಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ನಿಗದಿತ ನಮೂನೆ ಅರ್ಜಿಯನ್ನು ತಹಶೀಲ್ದಾರ್ ಸಾಗರ ತಾಲೂಕು ಕಚೇರಿ/ ಉಪ ನಿರ್ದೇಶಕರ ಕಚೇರಿಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ದಿ:12/01/2024 ರೊಳಗಾಗಿ ಸಲ್ಲಿಸುವಂತೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ವಾಹನಗಳ ಸಂಚಾರಕ್ಕೆ ಪರ್ಯಾಯ ಮಾರ್ಗ

ಶಿವಮೊಗ್ಗ: ಕುಂಸಿ–ಆನಂದಪುರ ಸ್ಟೇಷನ್ ಮಧ್ಯೆ ಬರುವ ರೈಲ್ವೆ ಲೆವೆಲ್ ಕ್ರಾಸಿಂಗ್ ಗೇಟ್ ನಂ.80(ಕಿ.ಮೀ.96/200–300) ನ್ನು ತಾಂತ್ರಿಕವಾಗಿ ಪರಿಶೀಲನೆ ಮಾಡಬೇಕಾಗಿದ್ದು, ಸಾರ್ವಜನಿಕ ಹಿತದೃಷ್ಟಿಯಿಂದ ವಾಹನ ಸಂಚಾರಕ್ಕೆ ಅಡಚಣೆ ಆಗದಂತೆ ಡಿ.25 ರಿಂದ 26 ರವರೆಗೆ ಗೇಟ್ ಮುಚ್ಚಿ ಕೆಳಕಂಡಂತೆ ತಾತ್ಕಾಲಿಕವಾಗಿ ಪಯಾರ್ಯ ಮಾರ್ಗ ಕಲ್ಪಿಸಿ ಜಿಲ್ಲಾಧಿಕಾರಿ ಡಾ.ಸೆಲ್ವಮಣಿ ಆರ್. ಆದೇಶಿಸಿದ್ದಾರೆ.

ರಿಪ್ಪನ್ಪೇಟೆಯಿಂದ ಆಯನೂರು ಮತ್ತು ಆಯನೂರಿನಿಂದ ರಿಪ್ಪನ್ಪೇಟೆಗೆ ಸಂಚರಿಸುವ ಲಘು ವಾಹನಗಳು ರೈಲ್ವೆ ಲೇವೆಲ್ ಕ್ರಾಸ್ ನಂ.79ರ ಮೂಲಕ ಆಯನೂರು, ಕುಂಸಿ, ಚೋರಡಿ, ಗುಂಡೂರು ಕ್ರಾಸ್, ಶೆಟ್ಟಿಕೆರೆ, ಸೂಡೂರು, ರಿಪ್ಪನ್ಪೇಟೆ ಹಾಗೂ ರಿಪ್ಪನ್ಪೇಟೆಯಿಂದ ಶಿವಮೊಗ್ಗಕ್ಕೆ ಬರುವ ವಾಹನಗಳು ರಿಪ್ಪನ್ಪೇಟೆ, ಸೂಡೂರು, ಶೆಟ್ಟಿಕೆರೆ, ಚೋರಡಿ, ಕುಂಸಿ, ಆಯನೂರು, ಶಿವಮೊಗ್ಗ ಮಾರ್ಗವಾಗಿ ಹಾಗೂ ಭಾರಿ ವಾಹನಗಳು ಅಯನೂರು, ಕುಂಸಿ, ಚೋರಡಿ, ಆನಂದಪುರ, ರಿಪ್ಪನ್ಪೇಟೆ ಮುಖಾಂತರ ಪರ್ಯಾಯ ಮಾರ್ಗದಲ್ಲಿ ವಾಹನಗಳು ಸಂಚರಿಸುವಂತೆ ಜಿಲ್ಲಾಧಿಕಾರಿಗಳು ಡಿ.14 ರ ಆದೇಶದಲ್ಲಿ ಸೂಚಿಸಿದ್ದಾರೆ.

# ಮೆಸ್ಕಾಂ : ದೂರು ಮತ್ತು ಸಲಹೆಗಳಿಗೆ ಕರೆ ಮಾಡಿ

ಶಿವಮೊಗ್ಗ: ಶಿವಮೊಗ್ಗ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಯಾವುದೇ ತರಹದ ವಿದ್ಯುಚ್ಛಕ್ತಿ ಅಥವಾ ವಿದ್ಯುತ್ ಸರಬರಾಜಿಗೆ ಸಂಬಂಧಿಸಿದಂತೆ ದೂರುಗಳು ಅಥವಾ ಸಲಹೆಗಳಿದ್ದಲ್ಲಿ ಮೆಸ್ಕಾಂ ದೂರವಾಣಿ ಸಂಖ್ಯೆಗೆ ಕರೆ ಮಾಡಿ ತಿಳಿಸಬಹುದೆಂದು ಮೆಸ್ಕಾಂ ಕಾ ಮತ್ತು ಪಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೆಸ್ಕಾಂ ವ್ಯಾಪ್ತಿಯಲ್ಲಿನ ವಿದ್ಯುತ್ ಸರಬರಾಜಿಗೆ ಸಂಬಂಧಿಸಿದ ದೂರುದಳಿದ್ದಲ್ಲಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ : 1912 ಮತ್ತು ಮೆಸ್ಕಾಂ ಶಿವಮೊಗ್ಗ ನಗರ ಪ್ರದೇಶದ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜಿಗೆ ಸಂಬಂಧಿಸಿದ ದೂರುಗಳಿದ್ದಲ್ಲಿ ದೂರವಾಣಿ ಸಂಖ್ಯೆ : 08182–225887, 08182–222369 ನ್ನು ಸಂಪರ್ಕಿಸಬಹುದಾಗಿದೆ. ಶಿವಮೊಗ್ಗ ತಾಲ್ಲೂಕು ನಗರ ಉಪವಿಭಾಗ–3 ರ ಉಪವಿಭಾಗಾಧಿಕಾರಿ ಸುರೇಶ್, ಮೊ.ನಂ:94480841339 ಈ ಅಧಿಕಾರಿಯ ವ್ಯಾಪ್ತಿಗೆ ಬರುವ ಸ್ಥಳಗಳು ಈ ಕೆಳಕಂಡಂತಿವೆ.


ಎ.ಪಿ.ಎಂ.ಸಿ, ಎಸ್.ಜಿ.ಕೆ ಇಂಡಸ್ಟ್ರಿಯಲ್ ಏರಿಯಾ, ವಿನೋಬನಗರ 60 ಅಡಿ ರಸ್ತೆ, ಬಾಲಾಜಿ ಗ್ರಾನೈಟ್, ಸೈಕಲ್ ಲೋಕ, ಶುಭಮಂಗಳ ಕಲ್ಯಾಣ ಮಂಟಪ, ರಾಣಿ ಚೆನ್ನಮ್ಮ ರಸ್ತೆ, ಹೊಸಮನೆ, ಶರಾವತಿ ನಗರ, ಪೊಲೀಸ್ ಚೌಕಿ, ಮೇದಾರ ಕೇರಿ, ಶಿವಾಲಯ, ಲಕ್ಷ್ಮೀ ಟಾಕೀಸ್, ವೀರಣ್ಣ ಲೇಔಟ್, ಹುಚ್ಚರಾಯ ಕಾಲೋನಿ, ಚೇತನ ಪಾರ್ಕ್ ಅರವಿಂದ ನಗರ, ಸೂರ್ಯ ಲೇಔಟ್, ಕನಕ ನಗರ, ಪಿ ಅಂಡ್ ಟಿ ಕಾಲೋನಿ, ದೇವರಾಜ ಅರಸು ಬಡಾವಣೆ, ಶಾರದಮ್ಮ ಲೇಔಟ್, ಮೈತ್ರಿ ಅಪಾರ್ಟ್ಮಂಟ್, ಖಾಜಿ ಗಾರ್ಡನ್, ಬೂಸ್ಟರ್ ಪಂಪ್ಹೌಸ್, ಆಟೋ ಕಾಂಪ್ಲೆಕ್ಸ್, ಶಿವಮೊಗ್ಗ ಟೆಕ್ನೋರಿಂಗ್ ಇಂಡಸ್ಟ್ರಿಯಲ್ ಏರಿಯಾ, ಯುನಿಟಿ ಆಸ್ಪತ್ರೆ, ಆದಿಚುಂಚನಗಿರಿ ಕಲ್ಯಾಣ ಮಂಟಪ, ಕುವೆಂಪು ರಸ್ತೆ, ನಂದಿ ಪೆಟ್ರೋಲ್ ಬಂಕ್, ಜೈಲ್ ರಸ್ತೆ, ನರ್ಸ್ ಕ್ವಾರ್ಟರ್ಸ್, ಆಯುರ್ವೇದ ಕಾಲೇಜು, ಆಯನೂರು ಗೇಟ್, ಸಾಗರ ರಸ್ತೆ, ಸುಬ್ಬಯ್ಯ ಆಸ್ಪತ್ರೆ, ಶಿವಮೊಗ್ಗ ಗ್ಯಾಸ್ ಈ ವ್ಯಾಪ್ತಿಯಲ್ಲಿರುವವರು ತಮ್ಮ ದೂರು ಅಥವಾ ಸಲಹೆಗಳಿದ್ದಲ್ಲಿ ಶಾಖಾಧಿಕಾರಿ ಜಗದೀಶ್ ಎನ್.ಪಿ, ಘಟಕ–7 ಮೊ.ನಂ:9448289664 ಇವರನ್ನು ಸಂಪರ್ಕಿಸಬಹುದಾಗಿದೆ.

ಸಾಗರ ರಸ್ತೆ, ಗುತ್ಯಪ್ಪ ಕಾಲೋನಿ, ನೇತಾಜಿ ಸರ್ಕಲ್, ಆಯನೂರು ಗೇಟ್, ಜೆ.ಪಿ ನಗರ, ಶ್ರೀರಾಮ ನಗರ, ವಿಜಯ ನಗರ, ನೀಲಮೇಗಂ ಲೇಔಟ್, ರಾಜಮಹಲ್ ಬಡಾವಣೆ, ಪೊಲೀಸ್ ಲೇಔಟ್, ಗೋಪಾಳ ಗೌಡ ಬಡಾವಣೆ, ಕೆ.ಹೆಚ್.ಬಿ ಕಾಲೋನಿ, ಅಲ್ಕರೀಂ ಏರಿಯಾ, ಅಣ್ಣನಗರ, ಕೊರ್ಮರ ಕೇರಿ, ರಂಗನಾಥ ಬಡಾವಣೆ, ಮಿಳಘಟ್ಟ, ಪದ್ಮಾ ಟಾಕೀಸ್, ಟಿಪ್ಪು ನಗರ ಬಲಭಾಗ, ಮೆಗ್ಗಾನ್ ಆಸ್ಪತ್ರೆ, ಮಿಷನ್ ಕಾಂಪೌಂಡ್, ಕುವೆಂಪು ಬಲಭಾಗ, ದುರ್ಗಿಗುಡಿ, ಜೆ.ಪಿ.ಎನ್ ರಸ್ತೆ, ಎಲ್.ಎಲ್.ಆರ್ ರಸ್ತೆ ಕಾಮಾಕ್ಷಿ ಬೀದಿ, ಸವಾಲೈನ್ ರಸ್ತೆ, ಎ.ಆರ್ಬಿ ಕಾಲೋನಿ, ಐ.ಬಿ, ಎಸ್.ಪಿ ಆಫೀಸ್, ಪೊಲೀಸ್ ಕ್ವಾರ್ಟರ್ಸ್, ಅಶೋಕ ನಗರ ಈ ವ್ಯಾಪ್ತಿಯಲ್ಲಿರುವವರು ತಮ್ಮ ದೂರು ಅಥವಾ ಸಲಹೆಗಳಿದ್ದಲ್ಲಿ ಶಾಖಾಧಿಕಾರಿ ಪ್ರಶಾಂತ್ ಕುಮಾರ್ ಕೆ.ಎಂ, ಘಟಕ–8 ಮೊ.ನಂ:9448289679 ಇವರನ್ನು ಸಂಪರ್ಕಿಸಬಹುದಾಗಿದೆ.

ಎಸ್.ವಿ ಬಡಾವಣೆ–ಎ.ಬಿ.ಸಿ.ಡಿ.ಇ.ಎಫ್ ಬ್ಲಾಕ್, ಆಲ್ಕೊಳ, ಪೊಲೀಸ್ ಲೇಔಟ್, ಅಮೃತ್ ಲೇಔಟ್, ಲಗಾನ್ ಮಂದಿರ, ಸಿಟಿ ಕ್ಲಬ್, ಗಾಡಿಕೊಪ್ಪ, ವುಮೆನ್ಸ್ ಪಾಲಿಟೆಕ್ನಿಕ್, ಜಡ್ಜ್ ಕ್ವಾರ್ಟರ್ಸ್, ಸ್ನೇಹ ಅಪಾರ್ಟ್ಮಂಟ್, ವೃದ್ಧಾಶ್ರಮ, ಹನುಮಂತನಗರ, ಸಂಭ್ರಮ ಅಪಾರ್ಟ್ಮಂಟ್, ಗಾಡಿಕೊಪ್ಪ ತಾಂಡ, ಸಾಗರ ಮುಖ್ಯ ರಸ್ತೆ, ನಂಜಪ್ಪ ಲೈಫ್ ಕೇರ್, ಮಲ್ಲಿಗೇನಹಳ್ಳಿ, ಶರಾವತಿ ಡೆಂಟಲ್ ಕಾಲೇಜ್, ಹರ್ಷ ಫರ್ನ್ ಹೋಟೆಲ್, ಗಾಯತ್ರಿದೇವಿ ಬಡಾವಣೆ, ಸಮಾಜ ಕಲ್ಯಾಣ ಲೇಔಟ್, ವಾಜಪೇಯಿ ಬಡಾವಣೆ–ಎ.ಬಿ.ಸಿ.ಡಿ ಬ್ಲಾಕ್, ಮ್ಯಾಕ್ಸ್ ವರ್ಥ್ ಲೇಔಟ್, ಗಾರ್ಡನ್ ಸಿಟಿ ಲೇಔಟ್, ಸೇಂಟ್ ಡಿಸೋಜ ಚರ್ಚ, ಅರೇಕಾನಟ್ ಕ್ಲಬ್, ಪುರದಾಳು ರಸ್ತೆ, ವಿಜಯ ಲೇಔಟ್, ಜಯಕಮಲ್ ಲೇಔಟ್, ಚಿನ್ಮಯ್ ಡಾಕ್ಟರ್ ಲೇಔಟ್, ಸೋಷಿಯಲ್ ಹಾರ್ಬರ್, ವೀರಣ್ಣ ಲೇಔಟ್, ಕಾಶಿಪುರ, ಜಯದೇವ ಬಡಾವಣೆ, ಪ್ರಿಯದರ್ಶಿನಿ ಲೇಔಟ್, ಶಿವಪ್ಪ ನಾಯಕ ಬಡಾವಣೆ, ಇಂದಿರಾಗಾಂಧಿ ಲೇಔಟ್, ಕೆ.ಹೆಚ್.ಬಿ, ದಾಮೋದರ್ ಕಾಲೋನಿ, ಚೇತನ ಸ್ಕೂಲ್, ಕಲ್ಲಳ್ಳಿ, ಕೆ.ಎಸ್.ಆರ್ಟಿಸಿ ಲೇಔಟ್, ಪ್ರಿಯದರ್ಶಿನಿ ಸ್ಕೂಲ್, ನಾಗಚೌಡೇಶ್ವರಿ ಟೆಂಪಲ್, ಕುರುಮಾರಿಯಮ್ಮ ದೇವಸ್ಥಾನ, ತಮಿಳು ಕ್ಯಾಂಪ್, ಕಲ್ಲಳ್ಳಿ–ಎ.ಬಿ.ಸಿ.ಡಿ.ಇ.ಎಫ್.ಜಿ.ಹೆಚ್ ಬ್ಲಾಕ್, ಕಾಶಿಪುರ ಬಸ್ಟಾಂಡ್, ಮಧವ ನೆಲೆ, ಅಣ್ಣ ಹಜಾರೆ ಪಾರ್ಕ, ಬಸವ ಮಂಟಪ, ಕೆ.ಹೆಚ್.ಬಿ ಕಚೇರಿ, ತಿಮ್ಮಕ್ಕ ಲೇಔಟ್, ಎಸ್.ಕೆ.ಎನ್ ಸ್ಕೂಲ್, ರೇಣುಕಾಂಬ ಬಡಾವಣೆ, ಹನುಮಂತಪ್ಪ ಬಡಾವಣೆ, ಲಕ್ಷ್ಮೀಪುರ, ಕೆಂಚಪ್ಪ ಲೇಔಟ್, ಕೆ.ಹೆಚ್.ಬಿ ಕ್ವಾರ್ಟರ್ಸ್, ಸಬ್ ರಿಜಿಸ್ಟಾರ್ ಕಚೇರಿ, ಸೂಡಾ ಕಾಂಪ್ಲೆಕ್ಸ್, ವಿನೋಬನಗರ ಪೊಲೀಸ್ ಸ್ಟೇಷನ್, ಆದರ್ಶ ಕಾಲೋನಿ, ಸವಿ ಬೇಕರಿ, ಕೆಳಭಾಗ, ವೆಟರ್ನರಿ ಕಾಲೇಜ್ ರಸ್ತೆ, ಲಕ್ಕಪ್ಪ ಲೇಔಟ್, ಎನ್.ಎಂ.ಸಿ ಕಾಂಪೌಂಡ್, ವಿಜಯ ಅವಿನ್ಯೂ, ಬ್ಯಾಂಕ್ ಆಫ್ ಬರೋಡ, ವಿಪ್ರ ಟ್ರಸ್ಟ್, ಜೆ.ಹೆಚ್ ಪಟೇಲ್ ಬಡಾವಣೆ ಎ.ಬಿ.ಸಿ.ಡಿ ಬ್ಲಾಕ್, ವಿಕಾಸ ಸ್ಕೂಲ್, ಮುನಿಯಪ್ಪ ಲೇಔಟ್, ಸಹ್ಯಾದ್ರಿನಗರ, ಆದಿಶಂಕರ ಲೇಔಟ್, ಸೋಮಿನಕೊಪ್ಪ, ಹೊಂಗಿರಣ ಲೇಔಟ್ ಈ ವ್ಯಾಪ್ತಿಯಲ್ಲಿರುವವರು ತಮ್ಮ ದೂರು ಅಥವಾ ಸಲಹೆಗಳಿದ್ದಲ್ಲಿ ಶಾಖಾಧಿಕಾರಿ ವಿಶ್ವನಾಥ್, ಘಟಕ–9 ಮೊ.ನಂ:9448289676 ಇವರನ್ನು ಸಂಪರ್ಕಿಸಬಹುದೆಂದು ಮೆಸ್ಕಾಂ ಕಾ ಮತ್ತು ಪಾ ವಿಭಾಗದ ಕಾರ್ಯನಿವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಯುಷ್ಮತಿ ಕ್ಲಿನಿಕ್‌ಗಳ ಮೂಲಕ ಗರ್ಭಿಣಿಯರ ತಪಾಸಣೆ ಹೆಚ್ಚಿಸಿ: ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ

ಬಳ್ಳಾರಿ: ಗರ್ಭಿಣಿ, ಚಿಕ್ಕ ಮಕ್ಕಳ ತಪಾಸಣೆಗಾಗಿ ತಜ್ಞ ವೈದ್ಯರ ಮೂಲಕ ನೀಡುವ ಸೇವೆಯನ್ನು ಅವರ ವಸತಿ ಪ್ರದೇಶದಲ್ಲಿಯೇ ಒದಗಿಸಲು ಸರ್ಕಾರದ ವಿನೂತನ ಯೋಜನೆಯಾದ ಆಯುಷ್ಮತಿ ಕ್ಲಿನಿಕ್ಗಳ ಕುರಿತು ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಲು ಅಗತ್ಯ ಮುತವರ್ಜಿ ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ವೈದ್ಯಾಧಿಕಾರಿಗಳಿಗೆ ಕರೆ ನೀಡಿದರು.



ನಗರದ ಜಿಲ್ಲಾ ಪಂಚಾಯತ್ನ ನಜೀರ್ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಪ್ರದೇಶಗಳಾದ ಮಿಲ್ಲರ್ಪೇಟ್ ಹಾಗೂ ಬ್ರೂಸ್ಪೇಟ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಈಗಾಗಲೇ ಒಡಂಬಡಿಕೆಯಂತೆ ತಜ್ಞವೈದ್ಯರು ಪ್ರತಿದಿನ ಎರಡು ಗಂಟೆಗಳ ಕಾಲ ಸೇವೆಯನ್ನು ಒದಗಿಸುತ್ತಿದ್ದಾರೆ.

ಈ ಸೇವೆಯನ್ನು ಸಾಧ್ಯವಿರುವ ಎಲ್ಲಾ ಪ್ರಸೂತಿ ತಜ್ಞರು, ಮಕ್ಕಳ ತಜ್ಞರು, ಚರ್ಮರೋಗ ತಜ್ಞರು, ಎಲುಬು ಕೀಲು ತಜ್ಞರು, ಕಣ್ಣಿನ ತಜ್ಞರು, ಕಿವಿ ಮೂಗು ಗಂಟಲು ತಜ್ಞರು ಹಾಗೂ ಶಸ್ತ್ರಚಿಕಿತ್ಸಾ ತಜ್ಞರು ಕನ್ಸಲ್ಟೇಶನ್ ಆಧಾರದಡಿ ನಿಯಮಾನುಸಾರ ನೇಮಕ ಮಾಡಿಕೊಂಡು ಹೆಚ್ಚಿನ ಸೇವೆ ನೀಡಬೇಕು ಎಂದು ತಿಳಿಸಿದರು.

ನಗರ ಮತ್ತು ಗ್ರಾಮೀಣ ಭಾಗದಲ್ಲಿ 30 ವರ್ಷ ಮೇಲ್ಪಟ್ಟವರಿಗೆ ಮಧುಮೇಹ ಮತ್ತು ರಕ್ತದೊತ್ತಡ ಪರೀಕ್ಷೆ ತಪಾಸಣೆ ನಡೆಸಲು ಸೂಕ್ತ ಕಾರ್ಯಯೋಜನೆ ಮಾಡಿಕೊಳ್ಳಬೇಕು. ಗ್ರಾಮ ಪಂಚಾಯತಿ ಮಟ್ಟದಲ್ಲಿ ಕ್ಷಯರೋಗ ನಿರ್ಮೂಲನೆಗೆ ಮತ್ತು ಕ್ಷಯಮುಕ್ತ ಗ್ರಾಮ ಪಂಚಾಯತಿ ಘೋಷಣೆಗಾಗಿ ಎಲ್ಲಾ ಇಲಾಖೆಗಳ ಸಹಕಾರ ಪಡೆಯಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅನೀಮಿಯ ಮುಕ್ತ ಪೌಷ್ಟಿಕ ಕರ್ನಾಟಕದಡಿಯಲ್ಲಿ ಕಾಲೇಜು ವಿದ್ಯಾರ್ಥಿಗಳಿಗೆ ರಕ್ತಹೀನತೆ ತಪಾಸಣಾ ಶಿಬಿರಗಳನ್ನು ಪರಿಣಾಮಕಾರಿಗೊಳಿಸಬೇಕು.

ಕಡಿಮೆ ಹೆಚ್ಚಿ ಹೊಂದಿರುವ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಚಿಕಿತ್ಸೆಯನ್ನು ಆಯಾ ಹಂತಗಳಲ್ಲಿ ನೀಡಬೇಕು.

ಅಗತ್ಯವಿದ್ದಲ್ಲಿ ರಕ್ತ ಪೂರಣ ಮತ್ತು ಐರನ್ ಸುಕ್ರೋಸ್ ಚುಚ್ಚುಮದ್ದು ನೀಡಬೇಕು ಎಂದು ಸಲಹೆ ನೀಡಿದರು.

ಇದೇ ಡಿ.27ರಿಂದ ಮುಂದಿನ ಜ.11 ರವರೆಗೆ ನಡೆಯುವ ಕುಷ್ಟರೋಗ ಪತ್ತೆ ಆಂದೋಲನದಡಿ ರಚಿಸಿರುವ ತಂಡಗಳ ಮೂಲಕ ನಿಖರವಾಗಿ ಶಂಕಿತರನ್ನು ಗುರುತಿಸಬೇಕು.

ರೋಗ ಖಚಿತಪಟ್ಟಲ್ಲಿ ಸಕಾಲದಲ್ಲಿ ಚಿಕಿತ್ಸೆ ನೀಡುವ ಮೂಲಕ ಪ್ರಕರಣಗಳ ಸಂಖ್ಯೆಯನ್ನು ಗಣನೀಯವಾಗಿ ನಿಯಂತ್ರಿಸಬೇಕು ಎಂದು ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ ಅವರು ನಿರ್ದೇಶನ ನೀಡಿದರು.

ಕುಟುಂಬ ಕಲ್ಯಾಣ ತಾತ್ಕಾಲಿಕ ವಿಧಾನಗಳಲ್ಲಿ ಪುರುಷರಿಗಾಗಿರುವ ನೋ ಸ್ಕಾಲ್ಪೆಲ್ ವ್ಯಾಸೆಕ್ಟಮಿಯನ್ನು ಹೆಚ್ಚು ಜಾಗೃತಿ ನೀಡುವ ಮೂಲಕ ಪುರುಷರು ಭಾಗವಹಿಸುವಿಕೆಯೊಂದಿಗೆ ಶಸ್ತ್ರಚಿಕಿತ್ಸೆಯನ್ನು ನೆರವೇರಿಸಲು ತಿಳಿಸಿದರು.

ಸೊಳ್ಳೆಯಿಂದ ಹರಡುವ ಕಾಯಿಲೆಗಳ ನಿಯಂತ್ರಣಕ್ಕಾಗಿ ಅಂತರ ಇಲಾಖೆಗಳೊಂದಿಗೆ ಸಭೆ ಆಯೋಜಿಸಿ ರೋಗ ನಿಯಂತ್ರಣಕ್ಕೆ ಇನ್ನೂ ಹೆಚ್ಚಿನ ಕ್ರಮವಹಿಸುವಂತೆ ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ ರಮೇಶ್ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಆರ್ಸಿಹೆಚ್ ಅಧಿಕಾರಿ ಡಾ.ಆರ್.ಅನಿಲ್ ಕುಮಾರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ., ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಪೂರ್ಣಿಮ ಕಟ್ಟಿಮನಿ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಇಂದ್ರಾಣಿ.ವಿ., ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಡಾ.ಈರಣ್ಣ, ಡಾ.ಭರತ್, ಡಾ.ಅರುಣ್ ಸೇರಿದಂತೆ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಡಿಎನ್ಒ ಗಿರೀಶ್, ಎನ್ಸಿಡಿ ಕನ್ಸಲ್ಟೆಂಟ್ ಡಾ.ಜಮೀನಾ ತಾಜ್, ಡಿಪಿಎಂ ವೆಂಕೋಬ್ ನಾಯ್ಕ್, ಆರ್ಕೆಎಸ್ಕೆ ಜಿಲ್ಲಾ ಸಮಾಲೋಚಕ ಮನೋಹರ್, ಡಿಪಿಸಿ ಅರ್ಚನಾ, ಸಿಪಿಎಂ ಸುರೇಶ್ ಸೇರಿದಂತೆ ಇತರೆ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಇವಿಎಂ–ವಿವಿ ಪ್ಯಾಟ್‌ಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು : ಡಿಸಿ




ಶಿವಮೊಗ್ಗ: ಇವಿಎಂ ಮತ್ತು ವಿವಿಪ್ಯಾಟ್ ಕುರಿತು ಸಮಗ್ರವಾಗಿ ತಿಳಿದುಕೊಂಡು ಅತಿ ಜಾಗೃತೆಯಿಂದ, ಸೂಕ್ಷ್ಮವಾಗಿ ನಿರ್ವಹಣೆ ಮಾಡಬೇಕೆಂದು ಚುನಾವಣೆಗೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಸೆಲ್ವಮಣಿ ಆರ್ ಸೂಚನೆ ನೀಡಿದರು.

ಫ್ರೀಡಂ ಪಾರ್ಕ್ ಬಳಿಯ ಗಾಂಧಿ ಭವನದಲ್ಲಿ ಇಂದು ಅಧಿಕಾರಿಗಳಿಗೆ ಮೊಬೈಲ್ ಡೆಮಾನ್ಸ್ಟ್ರೇಷನ್ ವೆಹಿಕಲ್(ಎಂಡಿವಿ) ಮೂಲಕ ಆಯೋಜಿಸಲಾಗಿದ್ದ ಇವಿಎಂ ಮತ್ತು ವಿವಿಪ್ಯಾಟ್ ಪ್ರಾತ್ಯಕ್ಷಿಕೆ ಹಾಗೂ ಅರಿವು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಇಂದಿನ ಪ್ರಾತ್ಯಕ್ಷಿಕೆ ಮತ್ತು ಅರಿವು ಕಾರ್ಯಕ್ರಮದಲ್ಲಿ ಮಾಸ್ಟರ್ ತರಬೇತುದಾರರು ಸಮಗ್ರವಾಗಿ ಇವಿಎಂ ಮತ್ತು ವಿವಿಪ್ಯಾಟ್ ಕಾರ್ಯಚಟುವಟಿಕೆ ಹಾಗೂ ಬಳಕೆ ವಿಧಾನವನ್ನು ತಿಳಿಸಿಕೊಡುವರು. ಅದನ್ನು ಸಮರ್ಪಕವಾಗಿ ತಿಳಿದುಕೊಂಡು ಇಂದು ಪಾಲ್ಗೊಂಡಿರುವ 7 ತಂಡಗಳು ತಾವು ಸಹ ಪ್ರಾತ್ಯಕ್ಷಿಕೆ ನೀಡಬೇಕು ಎಂದರು.

ಇವಿಎಂ ಮಷೀನ್ಗಳು ಅತ್ಯಂತ ಸೂಕ್ಷ್ಮವಾಗಿದ್ದು ಅವುಗಳನ್ನು ಅತಿ ಎಚ್ಚರಿಕೆಯಿಂದ ನಿರ್ವಹಿಸಬೇಕು. ಚುನಾವಣಾ ಆಯೋಗ ಈ ವಿಷಯವಾಗಿ ಅತ್ಯಂತ ನಿರ್ದಿಷ್ಟವಾಗಿದ್ದು, ಯಾವುದೇ ತಪ್ಪುಗಳು ಜರುಗದಂತೆ ಜಾಗೃತೆ ವಹಿಸಬೇಕು. ಇವಿಎಂ ಗಳ ಸಾಗಾಣಿಕೆ, ಶೇಖರಣೆ ಮತ್ತು ಬಳಕೆ ಎಲ್ಲವೂ ಅತ್ಯಂತ ಜವಾಬ್ದಾರಿಯಿಂದ ಕೂಡಿದ್ದು ಎಚ್ಚರಿಕೆಯಿಂದ ನಿರ್ವಹಣೆ ಮಾಡಬೇಕು. ಇಲ್ಲವಾದಲ್ಲಿ ಸಂಬಂಧಿಸಿದ ಅಧಿಕಾರಿಗಳೇ ಜವಾಬ್ದಾರರಾಗುತ್ತಾರೆ. ಇವಿಎಂ ಮತ್ತು ವಿವಿಪ್ಯಾಟ್ ನಲ್ಲಿ ತಾಂತ್ರಿಕ ತೊಂದರೆಗಳು, ಇತರೆ ಸ್ಪಷ್ಟನೆಗಳು ಇದ್ದಲ್ಲಿ ಮಾಸ್ಟರ್ ಟ್ರೈನರ್ ಮತ್ತು ತಂತ್ರಜ್ಞರೊಂದಿಗೆ ಚರ್ಚಿಸಿ ಸರಿಪಡಿಸಿಕೊಳ್ಳುವಂತೆ ತಿಳಿಸಿದರು.

ಮಾಸ್ಟರ್ ಟ್ರೈನರ್ ರವಿಕುಮಾರ್ ಪ್ರಾತ್ಯಕ್ಷಿಕೆ ನಡೆಸಿಕೊಟ್ಟರು. ಈ ವೇಳೆ ಜಿಲ್ಲಾ ಪಂಚಾಯತ್ ಸಿಇಒ ಸ್ನೇಹಲ್ ಸುಧಾಕರ ಲೋಖಂಡೆ, ಅಪರ ಜಿಲ್ಲಾಧಿಕಾರಿ ಸಿದ್ದಲಿಂಗ ರೆಡ್ಡಿ, ಎಲ್ಲ ತಾಲ್ಲೂಕುಗಳ ತಹಶೀಲ್ದಾರರು, ಮಾಸ್ಟರ್ ತರಬೇತುದಾರರು, ಅಧಿಕಾರಿ/ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ಮಕ್ಕಳ ಪ್ಯಾಂಟ್ ಬಿಚ್ಚಿಸಿ ವಿಕೃತಿ ಮೆರೆದ ಶಿಕ್ಷಕ ಅರೆಸ್ಟ್

ಬೀದರ್: ಪ್ರೌಢ ಶಾಲಾ ಶಿಕ್ಷಕನೋರ್ವನ ಮೇಲೆ ಮಕ್ಕಳ ಪ್ಯಾಂಟ್ ಬಿಚ್ಚಿಸಿ ವಿಕೃತಿ ಮೆರೆಯುತ್ತಿದ್ದ ಆರೋಪ ಕೇಳಿಬಂದಿದೆ. ಬೀದರ್ ಜಿಲ್ಲೆಯ ಪ್ರೌಢ ಶಾಲೆಯೊಂದರಲ್ಲಿ ಈ ಅಮಾನವೀಯ ಕೃತ್ಯ ನಡೆದಿದೆ.



ಖಾಸಗಿ ಪ್ರೌಢ ಶಾಲೆಯ ದೈಹಿಕ ಶಿಕ್ಷಕ ರಮೇಶ ಎಂಬುವವರ ಮೇಲೆ ಈ ಆರೋಪ ಕೇಳಿಬಂದಿದೆ. 10ನೇ ತರಗತಿ ಮಕ್ಕಳ ಪ್ಯಾಂಟ್ ಹಾಗೂ ಒಳಉಡುಪು ಬಿಚ್ಚಿಸಿ ಮೈದಾನದಲ್ಲಿ ಓಡಿಸುತ್ತಿದ್ದರು ಎಂದು ಹೇಳಲಾಗುತ್ತಿದೆ.

ಇನ್ನು ಶಿಕ್ಷಕ ರಮೇಶ ಮೇಲೆ ವಿದ್ಯಾರ್ಥಿಗಳು ಪರಸ್ಪರ ಗುಪ್ತಾಂಗ ಮುಟ್ಟಿಸಿ ವಿಡಿಯೋ ಮಾಡಿಕೊಳ್ಳುತ್ತಿದ್ದರು ಎಂಬ ಆರೋಪವಿದೆ.

ಸಾಯಂಕಾಲ ಶಾಲಾ ಬಿಡುವಿನ ನಂತರ ಮಕ್ಕಳಿಗೆ ವಿಚಿತ್ರ ಪಾಠ ಮಾಡುತ್ತಿದ್ದರು.

ಹೇಳಿದಂತೆ ಮಾಡದೇ ಹೋದರೆ ಅವಾಚ್ಯ ಪದಬಳಸಿ ಹೊಡೆಯುತ್ತಿದ್ದರು ಎಂದು ವಿದ್ಯಾರ್ಥಿಗಳು ದೂರಿದ್ದಾರೆ.

ಸದ್ಯ ಶಿಕ್ಷಕ ರಮೇಶನ ವಿರುದ್ಧ ಪೋಕ್ಸೋ ಖಾಯ್ದೆ ಅಡಿ ಪ್ರಕರಣ ದಾಖಲಾಗಿದೆ. ಆರೋಪಿ ಶಿಕ್ಷಕನನ್ನ ಬೀದರ್ ಪೊಲೀಸರು ವಶಕ್ಕೆ ಪಡೆದು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

# ಮಹಾನಗರ ವ್ಯಾಪ್ತಿಯ ಖಾಲಿ ನಿವೇಶನಗಳ ಸ್ವಚ್ಛತೆಗೆ ಆದ್ಯತೆ ನೀಡಿ ; ಪುಟ್ಪಾತ ಅತಿಕ್ರಮಣ ತೆರವುಗೊಳಿಸಿ– ನ್ಯಾಯಮೂರ್ತಿ ಸುಭಾಷ ಆಡಿ

ಧಾರವಾಡ: ಹುಬ್ಬಳ್ಳಿ–ಧಾರವಾಡ ಮಹಾನಗರ ವ್ಯಾಪ್ತಿಯಲ್ಲಿ ಸುಮಾರು 1.10 ಲಕ್ಷ ಖಾಲಿ ನಿವೇಶನಗಳಿದ್ದು, ಇವುಗಳ ಸ್ವಚ್ಛತೆಗೆ ಕ್ರಮವಹಿಸಿ, ಸೈಟ್ ಮಾಲೀಕರನ್ನು ಜವಾಬ್ದಾರರನ್ನಾಗಿಸಿ ನೋಟಿಸ್ ಜಾರಿ ಮಾಡಲು ರಾಷ್ಟ್ರೀಯ ಹಸಿರು ನ್ಯಾಯಾಧೀಕರಣದ ರಾಜ್ಯಮಟ್ಟದ ಸಮಿತಿಯ ಅಧ್ಯಕ್ಷರಾದ ನ್ಯಾಯಮೂರ್ತಿ ಸುಭಾಷ ಬಿ. ಆಡಿ ಅವರು ಸೂಚಿಸಿದರು.



ಅವರು ಜಿಲ್ಲಾ ಪಂಚಾಯತ್ ಆವರಣದಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳ ಸಭೆ ಜರುಗಿಸಿ ಮಹಾನಗರ ಸ್ವಚ್ಛತೆ ಹಾಗೂ ಹಸರೀಕರಣಕ್ಕೆ ಕೈಗೊಂಡ ಕ್ರಮಗಳ ಕುರಿತು ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು.

ಅವಳಿ ನಗರ ವ್ಯಾಪ್ತಿ ಹಾಗೂ ಜಿಲ್ಲೆಯ ನಗರ, ಗ್ರಾಮೀಣ ಪ್ರದೇಶದಲ್ಲಿ ಸ್ವಚ್ಛತೆ ಹಾಗೂ ನೈರ್ಮಲ್ಯಕ್ಕಾಗಿ ಅನೇಕ ಸಭೆಗಳ ಮೂಲಕ ಅಧಿಕಾರಿಗಳಿಗೆ ಕ್ರಮವಹಿಸಲು ತಿಳಿಸಲಾಗಿದೆ. ಆದರೂ ನಿರೀಕ್ಷಿತ ಮಟ್ಟದ ಬದಲಾವಣೆ ಕಾಣುತಿಲ್ಲ.

ಅಧಿಕಾರಿಗಳು ತಮ್ಮ ಜವಾಬ್ದಾರಿಗಳನ್ನು ಕಾನೂನು ಪ್ರಕಾರ ಕಟ್ಟುನಿಟ್ಟಾಗಿ ನಿರ್ವಹಿಸಬೇಕು ಎಂದರು.

ಮಹಾನಗರದಲ್ಲಿ ಪ್ರತಿದಿನ ಉತ್ಪಾದನೆ ಆಗುವ ತ್ಯಾಜ್ಯವನ್ನು ನಿಯಮಾನುಸಾರ ಸಂಗ್ರಹಿಸಿ, ತಾಂತ್ರಿಕ ರೀತಿಯಲ್ಲಿ ವಿಂಗಡಿಸಿ ತ್ಯಾಜ್ಯವಿಲೇವಾರಿ ಮಾಡಬೇಕು. ಇದರಲ್ಲಿ ಸಾರ್ವಜನಿಕರ ಕರ್ತವ್ಯ ಹೆಚ್ಚು ಮುಖ್ಯವಾಗಿದೆ. ಹಸಿರು ನ್ಯಾಯಾಧೀಕರಣದ ನಿಯಮಾವಳಿಗಳನ್ನು ಜನಸಾಮಾನ್ಯರಿಗೆ ತಿಳಿಸಲು ಹೆಚ್ಚು ಹೆಚ್ಚು ಜನಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕೆಂದು ಅವರು ಹೇಳಿದರು.

ಮಹಾನಗರ ವ್ಯಾಪ್ತಿಯಲ್ಲಿ ಸರ್ಕಾರಿ ಅಧಿಕಾರಿ, ಸಿಬ್ಬಂದಿಗಳು ವಾಸವಿರುವ ಸುಮಾರು 46 ವಸತಿ ಆವರಣ (ಕ್ವಾಟರ್ಸ) ಗಳಿವೆ. ಇವುಗಳಲ್ಲಿ ಸ್ವಚ್ಛತೆ ಹಾಗೂ ಸೂಕ್ತ ರೀತಿಯಲ್ಲಿ ತ್ಯಾಜ್ಯ ವಿಲೇವಾರಿಗೆ ಕ್ರಮ ವಹಿಸಬೇಕು. ನಗರದ ಪ್ರತಿ ಸಮುದಾಯಭವನ, ಕಲ್ಯಾಣ ಮಂಟಪ, ವಿದ್ಯಾರ್ಥಿ ನಿಲಯಗಳು, ವಸತಿಗೃಹ ಸಮುಚ್ಛಯ (ಅಪಾರ್ಟ್ಮಂಟ್) ಮುಂತಾದವುಗಳಲ್ಲಿ ತ್ಯಾಜ್ಯ ಸಂಗ್ರಹ ಮತ್ತು ವಿಂಗಡನೆ ನಿಯಮಾನುಸಾರ ಆಗುವಂತೆ ಆಯಾ ಮಾಲೀಕರನ್ನು ಹೊಣೆಗಾರಗೊಳಿಸಬೇಕೆಂದು ಅವರು ಸೂಚಿಸಿದರು.

ಮಹಾನಗರ ವ್ಯಾಪ್ತಿಯ ಕೆರೆಗಳ ಸ್ವಚ್ಛತೆ ಹಾಗೂ ಒತ್ತುವರಿ ತೆರವುಗೊಳಿಸಲು ಕ್ರಮವಹಿಸಬೇಕು. ನಗರದ ಕೊಳಚೆ ನೀರು, ಚರಂಡಿ, ಶೌಚದ ನೀರು ಕೆರೆಗಳನ್ನು ಸೇರದಂತೆ ಸಂರಕ್ಷಿಸಬೇಕು. ವಿಶೇಷವಾಗಿ ಈಗಾಗಲೇ ಸೂಚಿಸಿರುವಂತೆ ಧಾರವಾಡದ ಕೆಲಗೇರಿ ಕೆರೆ ಮತ್ತು ಹುಬ್ಬಳ್ಳಿಯ ಉಣಕಲ್ ಕೆರೆಗಳ ಬಗ್ಗೆ ತುರ್ತು ಕ್ರಮ ವಹಿಸಬೇಕೆಂದು ಅವರು ಸೂಚಿಸಿದರು.

ಬೀದಿ ಬದಿಯಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಸ ಚೆಲ್ಲುವವರ ವಿರುದ್ಧ ಕಾನೂನಾತ್ಮಕ ಕ್ರಮ ಕೈಗೊಂಡು ದಂಡ ವಿಧಿಸಬೇಕು. ಅಂತಹ ಕಸ ಹಾಕುವ ಬ್ಲ್ಯಾಕ್ ಸ್ಪಾಟ್ಗಳನ್ನು ಗುರುತಿಸಿ ತ್ಯಾಜ್ಯ ಸಂಗ್ರಹವಾಗದಂತೆ ಸುತ್ತಲಿನ ಜನರಿಗೆ ಮುನ್ನೆಚ್ಚರಿಕೆ ವಹಿಸಲು ಜಾಗೃತಿ ಮೂಡಿಸಬೇಕೆಂದು ಅವರು ತಿಳಿಸಿದರು.

ತ್ಯಾಜ್ಯಗಳನ್ನು ಕಡಿಮೆಗೊಳಿಸಲು ಹೆಚ್ಚು ಜನಸಂದಣಿ ಆಗುವ ಮದುವೆ, ಮನರಂಜನೆ ಹಾಗೂ ಇತರ ಕಾರ್ಯಕ್ರಮಗಳನ್ನು ಹಸಿರುಯುಕ್ತವಾಗಿ ಆಯೋಜಿಸಲು ಗ್ರೀನ್ ಮ್ಯಾರೇಜ್, ವೆಸ್ಟ್ ಫ್ರೀ ಮ್ಯಾರೇಜ್, ವೆಸ್ಟ್ ಫ್ರೀ ಪ್ರೊಗ್ರಾಮ್ಗಳನ್ನು ಹೆಚ್ಚು ಪ್ರಚಲಿತಪಡಿಸಬೇಕು. ಜಿಲ್ಲೆಯ ಎಲ್ಲ ಶಾಲಾ ಕಾಲೇಜುಗಳನ್ನು ಪ್ಲಾಸ್ಟಿಕ್ ಮುಕ್ತ ಪ್ರದೇಶಗಳನ್ನಾಗಿ ರೂಪಿಸಬೇಕೆಂದು ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪರಶುರಾಮ ದೊಡ್ಡಮನಿ, ಮಹಾನಗರ ಪಾಲಿಕೆಯ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಸ್ಮಾರ್ಟ ಸಿಟಿ ಯೋಜನೆ ವ್ಯವಸ್ಥಾಪಕ ನಿರ್ದೇಶಕ ರುದ್ರೇಶ್ ಗಾಳಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ನಾರಾಯಣ ಭರಮನಿ ವೇದಿಕೆಯಲ್ಲಿದ್ದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಹಿರಿಯ ಪ್ರಾದೇಶಿಕ ಅಧಿಕಾರಿ ಜಗದೀಶ ಐ.ಹೆಚ್. ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು.

ಸಭೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ, ಶಾಲಾ ಶಿಕ್ಷಣ ಇಲಾಖೆ, ಕಾಲೇಜು ಶಿಕ್ಷಣ ಇಲಾಖೆ, ನಗರ ಸ್ಥಳೀಯ ಸಂಸ್ಥೆಗಳು, ಸಣ್ಣ ನೀರಾವರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

# ಛತ್ತೀಸ್‌ಗಢ ವಿಧಾನಸಭೆಯ ನೂತನ ಸ್ಪೀಕರ್ ಆಗಿ ಮಾಜಿ ಸಿಎಂ ರಮಣ್ ಸಿಂಗ್ ಆಯ್ಕೆ



ರಾಯ್‌ಪುರ: ಬಿಜೆಪಿಯ ಹಿರಿಯ ಶಾಸಕ ಹಾಗೂ ಛತ್ತೀಸ್‌ಗಢ ಮಾಜಿ ಮುಖ್ಯಮಂತ್ರಿ ರಮಣ್ ಸಿಂಗ್ ಅವರು ಮಂಗಳವಾರ ರಾಜ್ಯ ವಿಧಾನಸಭೆಯ ಸ್ಪೀಕರ್ ಆಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಹೊಸ ವಿಧಾನಸಭೆಯ ಮೊದಲ ಅಧಿವೇಶನ ಇಂದಿನಿಂದ ಆರಂಭವಾಗಿದ್ದು, ಕಲಾಪ ಆರಂಭವಾಗುತ್ತಿದ್ದಂತೆ ಹಂಗಾಮಿ ಸ್ಪೀಕರ್ ರಾಮ್‌ವಿಚಾರ್ ನೇತಮ್ ಅವರು ಬಿಜೆಪಿ ಮತ್ತು ಕಾಂಗ್ರೆಸ್ ಶಾಸಕರು ಹಾಗೂ ಜಿಜಿಪಿಯ ಒಬ್ಬ ಶಾಸಕರಿಗೆ ಪ್ರಮಾಣ ವಚನ ಬೋಧಿಸಿದರು. ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ, ವಿರೋಧ ಪಕ್ಷದ ನಾಯಕ ಚರಣ್ ದಾಸ್ ಮಹಂತ್, ಉಪಮುಖ್ಯಮಂತ್ರಿಗಳಾದ ಅರುಣ್ ಸಾವೊ ಮತ್ತು ವಿಜಯ್ ಶರ್ಮಾ, ಮಾಜಿ ಸಿಎಂಗಳಾದ ರಮಣ್ ಸಿಂಗ್ ಮತ್ತು ಭೂಪೇಶ್ ಬಘೇಲ್ ಅವರು ಹಂಗಾಮಿ ಸ್ಪೀಕರ್ ಅವರಿಂದ ಪ್ರಮಾಣ ವಚನ ಸ್ವೀಕರಿಸಿದರು.

# ಗರ್ಭಪಾತ ಮಾಡಿಸಿಕೊಳ್ಳುವಂತೆ ಪ್ರೇಮಿಯಿಂದ ಒತ್ತಾಯ; ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ ಸಂತ್ರಸ್ತೆ

ಬೆಂಗಳೂರು: ತನ್ನ ಸಂಗಾತಿಗೆ ಗರ್ಭಪಾತ ಮಾಡಿಸಿಕೊಳ್ಳುವಂತೆ ಒತ್ತಾಯಿಸಿದ ಆರೋಪದ ಮೇಲೆ ಪ್ರೇಮಿಯ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ.



ಸಂತ್ರಸ್ತೆ ಘಟನೆ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಹಾಸನ ಜಿಲ್ಲಾ ಪೊಲೀಸ್, ಬೆಂಗಳೂರು ಪೊಲೀಸ್ ಕಮಿಷನರ್‌ರನ್ನು ಟ್ಯಾಗ್ ಮಾಡಿದ್ದಾರೆ.

ತನ್ನ ಪೋಸ್ಟ್‌ನಲ್ಲಿ, ತಾವು ಬಾಲಕೃಷ್ಣ ಸುನೀಲ್ ಎಂಬಾತ ನೊಂದಿಗೆ ಆರು ವರ್ಷಗಳ ಸುದೀರ್ಘ ಸಂಬಂಧವನ್ನು ಹೊಂದಿದ್ದು, ತನ್ನ ಪ್ರೇಮಿ ತನ್ನನ್ನು ದೈಹಿಕವಾಗಿಯೂ ಬಳಸಿಕೊಂಡಿದ್ದ. ಇದೀಗ ಗರ್ಭಪಾತಕ್ಕೆ ಒಳಗಾಗುವಂತೆ ಒತ್ತಾಯಿಸಿದ್ದಾನೆ ಎಂದು ಅವರು ಆರೋಪಿಸಿದ್ದಾರೆ.

ಆತ ತನ್ನ ಬಳಿಯಿದ್ದ ಹಣವನ್ನು ಕಿತ್ತುಕೊಂಡಿದ್ದಾನೆ ಮತ್ತು ತಾವಿಬ್ಬರೂ ಬೆಂಗಳೂರಿನಲ್ಲಿ ಒಟ್ಟಿಗೆ ವಾಸಿಸುತ್ತಿದ್ದೆವು. ಇದೀಗ ಆರೋಪಿಯು ಬೇರೊಬ್ಬ ಮಹಿಳೆಯನ್ನು ಮದುವೆಯಾಗಿ ಹಾಸನ ಜಿಲ್ಲೆಯ ಅಗಲಟ್ಟಿ ಗ್ರಾಮದಲ್ಲಿ ನೆಲೆಸಿದ್ದ ಎನ್ನಲಾಗಿದೆ.

ತನ್ನನ್ನು ತಮ್ಮ ಮಗಳೆಂದು ಪರಿಗಣಿಸಿ ಆರೋಪಿಗಳಿಗೆ ಶಿಕ್ಷೆ ವಿಧಿಸಿ ನ್ಯಾಯ ದೊರಕಿಸಿಕೊಡುವಂತೆ ಸಂತ್ರಸ್ತೆಯು ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

# ಸಿರಿಧಾನ್ಯ ನಡಿಗೆ ಮತ್ತು ಸಿರಿಧಾನ್ಯ ಮೇಳ: ಸಕಲ ಸಿದ್ದತೆಗೆ ಡಿಸಿ ಸೂಚನೆ

ಶಿವಮೊಗ್ಗ: ಜಿಲ್ಲಾ ಮಟ್ಟದಲ್ಲಿ ನಡೆಯುವ ಸಿರಿಧಾನ್ಯ ನಡಿಗೆ(ವಾಕಥಾನ್) ಹಾಗೂ ಸಿರಿಧಾನ್ಯ ಮೇಳಕ್ಕೆ ಅಗತ್ಯವಾದ ಸಕಲ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳಾದ ಡಾ.ಸೆಲ್ವಮಣಿ ಆರ್ ಸೂಚನೆ ನೀಡಿದರು.



ಜಿಲ್ಲಾಡಳಿತ ಕಚೇರಿಯಲ್ಲಿ ಸಿರಿಧಾನ್ಯ ಮೇಳ ಆಯೋಜನೆ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಲು ಏರ್ಪಡಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಿರಿಧಾನ್ಯಗಳ ಕುರಿತು ಜನರಲ್ಲಿ ಅರಿವು ಮೂಡಿಸಲು ಹಾಗೂ ಅವುಗಳ ಮಹತ್ವವನ್ನು ತಿಳಿಸುವ ಉದ್ದೇಶದಿಂದ ಡಿ.22 ರಂದು ಸಿರಿಧಾನ್ಯ ನಡಿಗೆ ಮತ್ತು ಡಿ.27 ರಂದು ಸಿರಿಧಾನ್ಯ ಮೇಳವನ್ನು ಜಿಲ್ಲಾ ಮಟ್ಟದಲ್ಲಿ ಆಯೋಜಿಸಲಾಗುತ್ತಿದೆ.

ಡಿ.22 ರಂದು ಬೆಳಿಗ್ಗೆ 6.30 ಕ್ಕೆ ನೆಹರೂ ಕ್ರೀಡಾಂಗಣದಲ್ಲಿ ಗಿಡಗಳನ್ನು ನೆಡುವ ಮೂಲಕ ಸಿರಿಧಾನ್ಯ ವಾಕಥಾನ್ಗೆ ಚಾಲನೆ ನೀಡಲಾಗುವುದು.

ವಾಕಥಾನ್ ನೆಹರೂ ಕ್ರೀಡಾಂಗಣದಿಂದ ಹೊರಟು ಮಹಾವೀರ ವೃತ್ತ, ಗೋಪಿ ವೃತ್ತ, ಜೈಲ್ ವೃತ್ತ, ಎಸ್.ಎಂ ವೃತ್ತದಿಂದ ಸಾಗಿ ಬಂದು ನೆಹರೂ ಕ್ರೀಡಾಂಗಣ ತಲುಪುವುದು.

ವಾಕಥಾನ್ನಲ್ಲಿ ಕೃಷಿ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಅಧಿಕಾರಿಗಳು, ಯೋಗ ಮತ್ತು ವಿವಿಧ ಆಸಕ್ತ ಸಂಸ್ಥೆಗಳ ಅಭ್ಯರ್ಥಿಗಳು ಪಾಲ್ಗೊಂಡು ಸಿರಿಧಾನ್ಯಗಳ ಕುರಿತಾದ ಫಲಕಗಳನ್ನು ಪ್ರದರ್ಶಿಸಿ, ಘೋಷಣೆಗಳನ್ನು ಕೂಗುವರು. ಹಾಗೂ ಕೃಷಿ ಇಲಾಖೆಯ 7 ಕೃಷಿ ಸಂಜೀವಿನಿ ವಾಹನಗಳ ಮೂಲಕವೂ ಸಿರಿಧಾನ್ಯ ಮಹತ್ವವನ್ನು ಪ್ರದರ್ಶಿಸಲಾಗುವುದು.

ಡಿ.27 ರಂದು ಕುವೆಂಪು ರಂಗಮಂದಿರದಲ್ಲಿ ಬೆಳಿಗ್ಗೆ 11.30 ರಿಂದ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದ ಅವರು ಕುವೆಂಪು ರಂಗಮಂದಿರದ ಹೊರಭಾಗದಲ್ಲಿ ಸುಮಾರು 30 ಸಿರಿಧಾನ್ಯಗಳ ಕುರಿತಾದ ಮಳಿಗೆಗಳನ್ನು ಸ್ಥಾಪಿಸುವಂತೆ ತಿಳಿಸಿದರು.

ಸಿರಿಧಾನ್ಯಗಳ ಮಳಿಗೆಗಳ ಜೊತೆ ವಿವಿಧ ಇಲಾಖೆಗಳ ಮಳಿಗೆಗಳನ್ನು ಸ್ಥಾಪಿಸಬಹುದು.

ಆದರೆ ಮುಖ್ಯವಾಗಿ ಸಿರಿಧಾನ್ಯ ಮತ್ತು ಅವುಗಳ ಉತ್ಪನ್ನಗಳ ಕುರಿತಾದ ಮಳಿಗೆಗಳಿಗೆ ಪ್ರಾಮುಖ್ಯತೆ ನೀಡಬೇಕು.

ಸಿರಿಧಾನ್ಯ ಉತ್ಪನ್ನಗಳ ತಯಾರಿಕರು, ಸ್ವಸಹಾಯ ಗುಂಪುಗಳಿಗೆ ಆಹ್ವಾನ ನೀಡಿ ಮಳಿಗೆ ಸ್ಥಾಪಿಸಬೇಕು. ಜನರಲ್ಲಿ ಸಿರಿಧಾನ್ಯದ ಕುರಿತು ಹೆಚ್ಚಿನ ಅರಿವು ಮೂಡಿಸಬೇಕೆಂದರು.

ಪಾಲಿಕೆಯವರು ಸ್ವಚ್ಚತೆ, ಪ್ರಚಾರದ ಬ್ಯಾನರ್ ವ್ಯವಸ್ಥೆ ಮಾಡಬೇಕು. ಆರೋಗ್ಯ ಇಲಾಖೆ ಮತ್ತು ಅಗ್ನಿಶಾಮಕ ಇಲಾಖೆಯವರು ಹಾಜರಿರಬೇಕು.

ಕನ್ನಡ ಮತ್ತು ಸಂಸ್ಕೃತ ಇಲಾಖೆಯಿಂದ ವೇದಿಕೆ ಕಾರ್ಯಕ್ರಮ ಏರ್ಪಡಿಸುವಂತೆ ತಿಳಿಸಿದ ಅವರು ವಿವಿಧ ಇಲಾಖೆಗಳು ಮೇಳದ ಯಶಸ್ಸಿಗೆ ಸಹಕರಿಸಬೇಕೆಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಓ ಸ್ನೇಹಲ್ ಸುಧಾಕರ ಲೋಖಂಡೆ, ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಪೂರ್ಣಿಮಾ, ಕೃಷಿ ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಸ್ವರ್ಣವಲ್ಲೀ ಶ್ರೀಗಳಿಗೆ 'ಗೀತಾಭಿಯಾನಾರ್ಣವ' ಬಿರುದು ಪ್ರದಾನ

ಬೆಳಗಾವಿ: ವೀರಶೈವ ಹಾಗೂ ಬ್ರಾಹ್ಮಣ ಮಠಗಳು ಜಾತಿಯನ್ನು ಮೀರಿ ಕಾರ್ಯವನ್ನು ಮಾಡುತ್ತಿವೆ. ಇಂಥ ಸಂದರ್ಭದಲ್ಲಿ ಸೋಂದಾ ಸ್ವರ್ಣವಲ್ಲಿ ಮಹಾಸಂಸ್ಥಾನ ಮಠದ ಮಠಾಧೀಶ ಶ್ರೀಮದ್ ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀಮದ್ ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿಗೆ ಗೀತಾಭಿಯಾನಾರ್ಣವ ಪ್ರಶಸ್ತಿ ನೀಡುತ್ತಿರುವುದು ಅಭಿಮಾನದ ಸಂಗತಿ ಎಂದು ಶ್ರೀ ಗುರುಶಾಂತೇಶ್ವರ ಸಂಸ್ಥಾನ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಮಂಗಳವಾರ ಇಲ್ಲಿನ ಲಕ್ಷ್ಮೀ ಟೇಕಡಿಯಲ್ಲಿರುವ ಹುಕ್ಕೇರಿ ಗುರುಶಾಂತೇಶ್ವರ ಸಂಸ್ಥಾನದಲ್ಲಿ ಶ್ರೀಮಠದಿಂದ ಸೋಂದಾ ಸ್ವರ್ಣವಲ್ಲಿ ಮಹಾಸಂಸ್ಥಾನ ಮಠದ ಮಠಾಧೀಶ ಶ್ರೀಮದ್ ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀಮದ್ ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ ಅವರಿಗೆ ಗೀತಾಭಿಯಾರ್ಣವ ಬಿರುದಾಂಕಿತ ಪ್ರಶಸ್ತಿ ಪ್ರಧಾನ ಮಾಡಿ ಮಾತನಾಡಿದರು.

ಸೋಂದಾ ಸ್ವರ್ಣವಲ್ಲಿ ಮಹಾಸಂಸ್ಥಾನ ಮಠದ ಮಠಾಧೀಶ ಶ್ರೀಮದ್ ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀಮದ್ ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ ಅವರು ಭಗವದ್ಗೀತೆಯ ಅಭಿಯಾನ ಕರ್ನಾಟಕದ ತುಂಬ ಅಭಿಮಾನ ಮಾಡುವ ಮೂಲಕ ಮನೆ ಮಾತಾಗಿದ್ದಾರೆ.

ಶ್ರೀಗಳು ನಮ್ಮ ಸನಾತನ ಧರ್ಮದ ಬಗ್ಗೆ ಸಮಾಜಕ್ಕೆ ಅರಿವು ಮೂಡಿಸುವ ಕಾರ್ಯವನ್ನು ಮಾಡುತ್ತಿದ್ದಾರೆ ಎಂದರು.

ಸಾಗರೋಪಾದಿಯಲ್ಲಿ ಕಳೆದ 2007 ರಲ್ಲಿ ರಾಜ್ಯದಲ್ಲಿ ಸಂಚಲನ ಮೂಡಿಸಿದ್ದರು.

ಈಗ ಮತ್ತೆ ಆ ಕಾರ್ಯವನ್ನು ಮಾಡುತ್ತಿದ್ದಾರೆ. ಹಿಂದು ಧರ್ಮದಲ್ಲಿರುವ ಎಲ್ಲ ಸಂಪ್ರದಾಯ ಮಠ, ಮಾನ್ಯಗಳು ಒಂದಾಗಿ ಸನಾತನ ಸಂಸ್ಕೃತಿ ಎತ್ತಿ ಹಿಡಿದಾಗ ಮಾತ್ರ ಭಾರತಕ್ಕೆ ಭವಿಷ್ಯ ಇದೆ.

ಈ ನಿಟ್ಟಿನಲ್ಲಿ ನಮ್ಮದ್ದು ವೀರಶೈವ ಮಠ, ರೇಣುಕಾಚಾರ್ಯರ ಪರಂಪರೆಯ ಮಠ, ಸ್ವರ್ಣವಲ್ಲಿ ಜಗದ್ಗುರುಗಳು ಶಂಕರಾಚಾರ್ಯರ ಪಂರಪರೆಯ ಮಠವಾಗಿದೆ. ಇತಿಹಾಸದಲ್ಲಿ ಜಗದ್ಗುರು ರೇಣುಕಾಚಾರ್ಯರು ಮತ್ತು ಶಂಕರಾಚಾರ್ಯರು ಕೂಡಿದ್ದರು ಎನ್ನುವುದು ಇದೆ ಎಂದರು.

ಸೋಂದಾ ಸ್ವರ್ಣವಲ್ಲಿ ಮಹಾಸಂಸ್ಥಾನ ಮಠದ ಮಠಾಧೀಶ ಶ್ರೀಮದ್ ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀಮದ್ ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ ಮಾತನಾಡಿ, ಎಲ್ಲ ಸಂಪ್ರದಾಯ ಮಠಗಳು ಒಂದಾಗಬೇಕು.

ಇದನ್ನೆ ನಾವು ಸಮನ್ವಯ ಎಂದು ಕರೆಯುತ್ತೇವೆ. ವಿಭಿನ್ನ ಮತ್ತು ಸಂಪ್ರದಾಯಗಳು ನಮ್ಮ ದೇಶಕ್ಕೆ ಭೂಷಣ. ಅವುಗಳನ್ನು ಇಟ್ಟುಕೊಂಡು ಹೋಗಬೇಕು. ಹಿಂದೂಗಳು ಎಲ್ಲರೂ ಒಗ್ಗಟ್ಟಾಗಿ ಹೋಗಬೇಕೆಂದು ಕರೆ ನೀಡಿದರು.




ಹುಕ್ಕೇರಿ ಮಠದ ಸ್ವಾಮಿಗಳವರು ನೀಡಿದ ಈ ವಿಶೇಷ ಸನ್ಮಾನ ಸ್ವೀಕರಿಸಿದ ಶ್ರೀ ಶ್ರೀಗಳವರು ಈ ಸನ್ಮಾನವು ವಾಸ್ತವಿಕವಾಗಿ ಗೀತಾಚಾರ್ಯ ಶ್ರೀಕೃಷ್ಣನಿಗೆ ಸಮರ್ಪಣೆ, ಅವನಿಗೆ ಸಲ್ಲಬೇಕು ಎಂದರು.

ಗೀತೆಯನ್ನು ನಮಗೆ ಕೊಟ್ಟವನು ಶ್ರೀಕೃಷ್ಣ ಪರಮಾತ್ಮ. ಆ ಮಹತ್ತಾದ ಕೊಡುಗೆ ಶ್ರೀಕೃಷ್ಣನದ್ದು. ಭಗವದ್ಗೀತೆಯು ಅವನದ್ದಾದ್ದರಿಂದ ಈ ಅಭಿಯಾನವೂ ಅವನದ್ದೇ. ಆದ್ದರಿಂದ ಈ ಸನ್ಮಾನ ಅವನಿಗೇ ಅರ್ಪಣೆ, ಅವನಿಗೇ ಸಲ್ಲಬೇಕಾದದ್ದು. ಹಾಗೆಯೇ ಅದನ್ನು ಮೊಟ್ಟಮೊದಲು ಮಹಾಭಾರತದಿಂದ ಹೊರತಂದಂತಹ ಪರಶಿವನ ಅವತಾರಿ ಶಂಕರಾಚಾರ್ಯರು. ಅದಕ್ಕಾಗಿ ಈ ಸನ್ಮಾನವು ಇವರಿಬ್ಬರಿಗೆ ಸಲ್ಲಲಿ ಎಂದರು.

> ಶ್ರೀ ಶ್ರೀಮದ್ ಗಂಗಾಧರೇಂದ್ರ ಸರಸ್ವತಿ ಸೊಂದಾ ಮಹಾಸ್ವಾಮಿ ಅವರು ಭಗವದ್ಗೀತೆಯನ್ನು ಮನೆ ಮನೆಗೆ ತಲುಪಿಸುವ ಮತ್ತು ಮನ ಮನಕ್ಕೆ ತಲುಪಿಸುವ ಮಹಾಮಣಿಗೆ ಹೆಗಲು ಕೊಟ್ಟ ಸೊಂದಾ ಸ್ವರ್ಣವಲ್ಲಿ ಶ್ರೀಗಳು ನಾಡಿನ ತುಂಬೆಲ್ಲ ಅದ್ಭುತ ಕ್ರಾಂತಿಯನ್ನು ಮಾಡಿದ್ದಾರೆ. ಅವರ ಗೀತಾ ಅಭಿಯಾನಕ್ಕೆ ನೂರಕ್ಕೆ ನೂರು ಯಶಸ್ವಿಯಾಗಿದೆ. ಗೀತಾ ಅಭಿಯಾನದ ಸಮುದ್ರದಂತಿರುವ ಪೂಜ್ಯರಿಗೆ ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಗೀತಾಭಿಯಾನಾರ್ಣವ ಅಭಿನಂದನಾ ಗೌರವ ಸಲ್ಲಿಸಿದ್ದು ನಿಜಕ್ಕೂ ಸೂಕ್ತ ಮತ್ತು ಸಮುಚಿತ.
>
> **– ಡಾ. ಶಿವಾನಂದ ಶಿವಾಚಾರ್ಯ ಸ್ವಾಮೀಜಿ, ತುಮಕೂರು**

ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಸಾಮಾಜಿಕ, ಧಾರ್ಮಿಕ ಕಾರ್ಯದಲ್ಲಿ ಇತಿಹಾಸವನ್ನೆ ಸೃಷ್ಟಿಸಿದ್ದಾರೆ. ಅವರಿಂದ ನನಗೆ ನೀಡಿರುವ ಗೀತಾಭಿಯಾನಾರ್ಣವ ಪ್ರಶಸ್ತಿ ನೀಡಿರುವುದು ಇದು ಶಂಕರಾಚಾರ್ಯರಿಗೆ ಸಲ್ಲಬೇಕು ಎಂದರು.

ಭಗವದ್ಗೀತೆ ಬಗ್ಗೆ ಎಲ್ಲ ಕಡೆ ಪ್ರಚಾರ ಮಾಡಲಾಗುತ್ತಿದೆ. ಕಳೆದ 17 ವರ್ಷಗಳಿಂದ ವೀರಶೈವ ಮಠಗಳ ಸಹಕಾರ ಹೆಚ್ಚಿನ ಸಂಖ್ಯೆಯ ನೀಡಿವೆ.

ಈಗ ಹುಕ್ಕೇರಿ ಹಿರೇಮಠದ ಸಹಾಕರ ನೀಡುತ್ತಿರುವುದು ಅಭಿಮಾನದ ಸಂಗತಿ ಎಂದರು.

ಭಗವದ್ಗೀತೆ ಬಗ್ಗೆ ಹೇಳುವಂಥವರ ಹೆಚ್ಚಿದ್ದಾರೆ. ಆದರೆ ಭಗವದ್ಗೀತೆಯನ್ನು ಜನರ ಬಾಯಿಂದ ಹೇಳಿಸಬೇಕು. ಅವರಿಗೆ ತಿಳಿಸಬೇಕು ಎನ್ನುವುದೇ ಭಗವದ್ಗೀತೆ ಅಭಿಯಾನ ಹಾಗೂ ಇದರ ಉದ್ದೇಶವಾಗಿದೆ ಎಂದರು.

ಭಗವದ್ಗೀತೆಯ ಕೈಗನ್ನಡಿಯಂತೆ ಇದೆ. ಮಠಗಳಲ್ಲಿ ಪರಸ್ಪರ ಅನ್ಯೋನ್ಯತೆ ಇರಬೇಕು. ಎಲ್ಲಾ ಸ್ವಾಮೀಜಿಗಳು ಒಂದಾಗಬೇಕು. ಈ ನಿಟ್ಟಿನಲ್ಲಿ ನೀವು ಒಂದು ಮಾಡಬೇಕೆಂದು ಮಹಿಳೆ ಒಬ್ಬರು ನನಗೆ ಪತ್ರ ಬರೆದಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಶ್ರೀ ಗುರುಶಾಂತೇಶ್ವರ ಸಂಸ್ಥಾನ ಹಿರೇಮಠ ಗುರುಕುಲದ ಸುಮಾರು 150 ವೇಧ ವಟುಗಳು ಹಾಗೂ 50 ಜನ ಮಹಿಳೆಯರು ಒಟ್ಟಿಗೆ ಗೀತಾ ಪಾರಾಯಣ ಮಾಡಿದರು.ಸುಬ್ರಹ್ಮಣ್ಯ ಭಟ್ ಸ್ವಾಗತಿಸಿದರು. ಹುಕ್ಕೇರಿ ಹಿರೇಮಠದ ಸಂಪತಕುಮಾರ ಶಾಸ್ತ್ರೀಗಳು ಗೀತಾಪಾರಾಯಣ ಮಾಡಿದರು.

## ಎಸ್‌ಎಂಇಗಳ ವಹಿವಾಟನ್ನು ವೃತ್ತಿಪರವಾಗಿಸಲು ಟ್ಯಾಲಿಪ್ರೈಮ್ 4.0

ಹುಬ್ಬಳ್ಳಿ: ಕಿರು, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಬದಲಾಗುತ್ತಿರುವ ಅಗತ್ಯಗಳನ್ನು ಪೂರೈಸಲು, ವಹಿವಾಟು ನಿರ್ವಹಣೆಯ ಸಾಫ್ಟ್‌ವೇರ್ ಒದಗಿಸುವ ಭಾರತದ ಪ್ರಮುಖ ಕಂಪನಿಯಾಗಿರುವ ಟ್ಯಾಲಿ ಸೊಲುಷನ್ಸ್, ಟ್ಯಾಲಿಪ್ರೈಮ್ 4.0 ಅನ್ನು ಜಾಗತಿಕ ಮಾರುಕಟ್ಟೆಗೆ ಪರಿಚಯಿಸಿರುವುದಾಗಿ ಇಂದು ಪ್ರಕಟಿಸಿದೆ. ಈ ಹೊಸ ಸಾಫ್ಟ್‌ವೇರ್, ಉದ್ಯಮಗಳ ಮಾಲೀಕರು ಮತ್ತು ಅಂತಿಮ ಬಳಕೆದಾರರಿಗೆ ಸರಿಸಾಟಿಯಿಲ್ಲದ ಮತ್ತು ಉನ್ನತ ಅನುಭವ ಒದಗಿಸುವ ಟ್ಯಾಲಿಯ ದೂರದೃಷ್ಟಿಗೆ ಅನುಗುಣವಾಗಿದೆ. ಕಂಪನಿಯು ಮುಂದಿನ 2 ರಿಂದ 3 ವರ್ಷಗಳಲ್ಲಿ ತನ್ನ ಗ್ರಾಹಕರ ನೆಲೆಯಲ್ಲಿ ಶೇ 50ರಷ್ಟು ಬೆಳವಣಿಗೆಯನ್ನು ಮತ್ತು ಶೇ 40ರಷ್ಟು ಸಂಯುಕ್ತ ವಾರ್ಷಿಕ ಒಟ್ಟು ವರಮಾನ ಸಾಧಿಸುವ ಗುರಿ ಹೊಂದಿದೆ.

ಟ್ಯಾಲಿಪ್ರೈಮ್ 4.0 ಮಾಹಿತಿಪೂರ್ಣ ಮತ್ತು ಶಕ್ತಿಯುತ ಡ್ಯಾಷ್‌ಬೋರ್ಡ್‌ಗಳು, ಎಂಎಸ್ ಎಕ್ಸೆಲ್‌ನಿಂದ ಹೆಚ್ಚಿನ ಶ್ರಮವಿಲ್ಲದೆ ಡೇಟಾ ಪಡೆಯುವುದು ಮತ್ತು ಹೊಸ ಸೌಲಭ್ಯವಾದ ವಾಟ್ಸ್‌ಆಪ್ ಫಾರ್ ಬಿಸಿನೆಸ್ ನೆರವಿನಿಂದ ವಹಿವಾಟು ನಿರ್ವಹಣಾ ವ್ಯವಸ್ಥೆಯ ಅನುಭವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲಿದೆ.

ಟ್ಯಾಲಿಪ್ರೈಮ್ 4.0 ಕುರಿತು ಪ್ರತಿಕ್ರಿಯಿಸಿರುವ ಟ್ಯಾಲಿ ಸೊಲುಷನ್ಸ್‌ನ ವ್ಯವಸ್ಥಾಪಕ ನಿರ್ದೇಶಕ ತೇಜಸ್ ಗೋಯೆಂಕಾ, "ಕೆಲವು ವರ್ಷಗಳ ಹಿಂದೆ ಟ್ಯಾಲಿ ಪ್ರೈಮ್ ಪ್ರಾರಂಭಿಸುವುದರೊಂದಿಗೆ, ಎಸ್‌ಎಂಇಗಳು ತಮ್ಮ ವಹಿವಾಟುಗಳನ್ನು ನಿರ್ವಹಿಸುವ ವಿಧಾನವನ್ನು ಸರಳ ಹಾಗೂ ವೃತ್ತಿಪರಗೊಳಿಸುವುದಕ್ಕೆ ಗಮನ ಕೇಂದ್ರೀಕರಿಸುವ ಶಕ್ತಿಯುತ ವಹಿವಾಟು ನಿರ್ವಹಣೆಯ ಅನುಭವ ನೀಡುವ ನಿಟ್ಟಿನಲ್ಲಿ ನಾವು ನಿರಂತರವಾಗಿ ಕೆಲಸ ಮಾಡುತ್ತಿದ್ದೇವೆ. ಟ್ಯಾಲಿಪ್ರೈಮ್ 4.0 ನೊಂದಿಗೆ, ನಮ್ಮ ಗಮನವೆಲ್ಲ ಬಳಕೆದಾರರ ಅನುಭವವನ್ನು ಉನ್ನತೀಕರಿಸುವುದಕ್ಕೆ ಕೇಂದ್ರೀಕರಿಸಿದೆ. ಉದ್ಯಮದ ಮಾಲೀಕರು ತಮ್ಮ ವಹಿವಾಟನ್ನು ಹೆಚ್ಚು ವೃತ್ತಿಪರತೆ ಮತ್ತು ಪರಿಣಾಮಕಾರಿಯಾಗಿ ನಿರ್ವಹಿಸಲು ಇದು ನೆರವಾಗಲಿದೆ. ವಹಿವಾಟಿನ ನಿರ್ವಹಣೆಯನ್ನು ಸುಗಮಗೊಳಿಸಲು ಮತ್ತು ಡೇಟಾದೊಂದಿಗೆ ತಡೆರಹಿತ ಸಂವಹನ ಸುಗಮಗೊಳಿಸಲು ವಿನ್ಯಾಸಗೊಳಿಸಲಾದ ಹೊಸ, ದೃಢ ಸ್ವರೂಪದ ಕಾರ್ಯಚಟುವಟಿಕೆಗಳ ಸೌಲಭ್ಯ ನೀಡಲಿದೆ. ಮಾಹಿತಿಪೂರ್ಣವಾದ ಹಾಗೂ ಶಕ್ತಿಯುತ ಡ್ಯಾಷ್‌ಬೋರ್ಡ್‌ಗಳು ಟ್ಯಾಲಿಯ ದೃಢವಾದ ವರದಿ ಮಾಡುವ ಎಂಜಿನ್, ವೃತ್ತಿಪರ ವಾಟ್ಸ್‌ಆಪ್ ಸಂವಹನ ಮತ್ತು ಎಕ್ಸೆಲ್‌ಶೀಟ್‌ಗಳಿಂದ ಡೇಟಾವನ್ನು ಸುಲಭವಾಗಿ ಸಂಯೋಜಿಸಲಿದೆ. ಬಳಕೆದಾರರು ತಮ್ಮ ವಹಿವಾಟುಗಳನ್ನು ನಡೆಸಲು ಮತ್ತು ವೃದ್ಧಿಸಲು ಅನುವು ಮಾಡಿಕೊಡಲಿದೆ" ಎಂದು ಹೇಳಿದ್ದಾರೆ.

ಟ್ಯಾಲಿಯು ಎಂಎಸ್‌ಎಂಇ ಗಳ ಅಗತ್ಯಗಳನ್ನು ಅಧ್ಯಯನ ಮಾಡುತ್ತಿದೆ. ಕಳೆದ ಮೂರು ದಶಕಗಳಿಂದ ಸಂಬಂಧಿತ ಪರಿಹಾರಗಳನ್ನೂ ಒದಗಿಸುತ್ತಿದೆ. ಟ್ಯಾಲಿಪ್ರೈಮ್ 4.0 ನೆರವಿನಿಂದ ಉದ್ದಿಮೆಗಳು ಹೊಸ 'ಮಾಹಿತಿಪೂರ್ಣ ಡ್ಯಾಷ್‌ಬೋರ್ಡ್‌ಗಳು, ಜೊತೆಗೆ ಅಸ್ತಿತ್ವದಲ್ಲಿರುವ ಶಕ್ತಿಯುತ ವರದಿ ಮಾಡುವ ಎಂಜಿನ್ ಅನ್ನು ಮತ್ತಷ್ಟು ಬಳಸಿಕೊಳ್ಳಬಹುದು. ಯಾವುದೇ ವಹಿವಾಟಿನ ಅನನ್ಯ ಅವಶ್ಯಕತೆಗಳನ್ನು ಪೂರೈಸಲು ಅವುಗಳ ಅಗತ್ಯಕ್ಕೆ ತಕ್ಕಂತೆ ಮಾಡಬಹುದಾದ ಅನಿಯಮಿತ ದೃಶ್ಯ ಡೇಟಾ ವಿಶ್ಲೇಷಣೆಯ ಪ್ರಯೋಜನವನ್ನು ಇದು ಮುಂಚೂಣಿಗೆ ತರಲಿದೆ. ಅದೇ ರೀತಿ ಟ್ಯಾಲಿಪ್ರೈಮ್‌ನ ಹೆಚ್ಚಿನ ಶ್ರಮವಿಲ್ಲದ ಡೇಟಾ ಸ್ವೀಕಾರ ಸೌಲಭ್ಯವು, ಟ್ಯಾಲಿಯ ಸರಳ ವಿಧಾನದ ನೆರವಿನಿಂದ ವರ್ಚುವಲ್ ಬಗೆಯಲ್ಲಿ ಯಾವುದೇ ಎಕ್ಸೆಲ್ ದಾಖಲೆಗಳನ್ನು ಪಡೆದುಕೊಳ್ಳಬಹುದು.

'ಭಾರತದಲ್ಲಿ ಮತ್ತು ಜಾಗತಿಕವಾಗಿ ಎಂಎಸ್‌ಎಂಇಗಳಿಗೆ ಸರಿಯಾದ ತಂತ್ರಜ್ಞಾನಗಳನ್ನು ಆವಿಷ್ಕರಿಸಲು ಮತ್ತು ರೂಪಿಸುವುದನ್ನು ಮುಂದುವರಿಸಲು ನಾವು ಗಮನ ನೀಡುತ್ತಿದ್ದೇವೆ. ಅವರ ವಿಶಿಷ್ಟ ಕಾರ್ಯಾಚರಣಾ ಪರಿಸರಗಳು ಮತ್ತು ಉತ್ಪನ್ನದ ಹೆಚ್ಚಿನ ನಿರೀಕ್ಷೆಗಳು ಭಾರತದಲ್ಲಿ ಮತ್ತು ಜಾಗತಿಕವಾಗಿ ನಮ್ಮನ್ನು ಪ್ರೇರೇಪಿಸುತ್ತಲೇ ಇವೆ" ಎಂದೂ ತೇಜಸ್ ಗೋಯೆಂಕಾ ಹೇಳಿದ್ದಾರೆ.

ಟಿಎಸ್‌ಎಸ್ ಚಂದಾದಾರಿಕೆ ಹೊಂದಿರುವವರಿಗೆ ಇತ್ತೀಚೆಗೆ ಪರಿಚಯಿಸಿರುವ ಟ್ಯಾಲಿಪ್ರೈಮ್ 4.0 ಯಾವುದೇ ಹೆಚ್ಚುವರಿ ವೆಚ್ಚವಿಲ್ಲದೆ ದೊರೆಯಲಿದೆ.

## ಡಾ.ಬಾಬಾಸಾಹೇಬ ಅಂಬೇಡ್ಕರ ಓದು ಕಾರ್ಯಕ್ರಮ

ಬೆಳಗಾವಿ: ಬೆಳಗಾವಿ ಜೀವಣದಲ್ಲಿ ಸ್ವಾಭಿಮಾನ ಬದುಕು ನಡೆಸಲು ಹಾಗೂ ಒಳ್ಳೆಯ ವ್ಯಕ್ತಿತ್ವ ಹೊಂದಲು ಪ್ರತಿಯೊಬ್ಬರಿಗೂ ಶಿಕ್ಷಣ ಕಲಿಯುವುದು ಪ್ರಮುಖವಾಗಿದೆ ಆ ನಿಟ್ಟಿನಲ್ಲಿ ಇಂದಿನ ಯುವ ಜನರು ಕಾಲೇಜು ವಿದ್ಯಾರ್ಥಿ ಜೀವಣವನ್ನು ವ್ಯರ್ಥ ಮಾಡದೆ ಶ್ರದ್ದೆಯಿಂದ ಜೀವಣದ ಸಾಧನೆ ಮಾಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರಾದ ವಿದ್ಯಾವತಿ ಹೆಚ್ ಬಿ ಯುವಜನರಿಗೆ ಕರೆ ನೀಡಿದರು

ಬೆಳಗಾವಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಬೆಳಗಾವಿ ಸರ್ಕಾರಿ ಸರ್ದಾರ್ ಪಪೂ ಕಾಲೇಜು ಇವರ ಸಹಯೋಗದಲಿ ಡಿ.19 2023 ರಂದು ಡಾ// ಬಿ ಆರ್ ಅಂಬೇಡ್ಕರ ಓದು ಕಾರ್ಯ ಕ್ರಮವನ್ನು ಆಯೋಜಿಸಿಲಾಗಿತ್ತು.

ಸಸಿಗೆ ನೀರೆರದು ಉದ್ಘಾಟಿಸಿ



ಮಾತನಾಡಿ ಡಾ/ ಬಾಬಾಸಾಹೇಬ ಅಂಬೇಡ್ಕರರವರು ಕಷ್ಟ ಜೀವಣದಲ್ಲಿ ಓದಿನಲ್ಲಿ ಎಂದೂ ಹಿಂದೆ ಬೀಳದೆ ಶ್ರಮವಹಿಸಿ ಶಿಕ್ಷಣ ಕಲಿತು ಎಲ್ಲರಿಗೂ ದಾರಿದೀಪವಾಗಿದ್ದಾರೆ ಎಂದೂ ಬಣ್ಣಿಸಿದರು.

ಅತಿಥಿಗಳಾಗಿ ಆಗಮಿಸಿದ ಎಂ ಎಂ ಮುಲ್ಲಾ ಎನ್ ಎಸ್ ಎಸ್ ಜಿಲ್ಲಾ ಕಾರ್ಯಕ್ರಮಾಧಿಕಾರಿಗಳು ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯ ನೋಡಲ್ ಅಧಿಕಾರಿಗಳು ಮಾತನಾಡಿ ಇಂದಿನ ವಿದ್ಯಾರ್ಥಿಗಳು ಓದಿನ ಕಲಿಕೆಯ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಬೇಕು ಅದು ನಿಮ್ಮ ಜೀವಣ ಬದುಕಿಗೆ ಶಕ್ತಿ ತುಂಬುತ್ತದೆ ಎಂದು ಹೇಳಿದರು.

ಅತಿಥಿ ಉಪನ್ಯಾಸಕರಾದ ಎಸ್ ಆರ್ ಕಲಹಾಳ ಅವರು ಡಾ. ಬಾಬಾಸಾಹೇಬರ ಅಮುಲ್ಯ ವಿಚಾರಗಳನ್ನು ವಿದ್ಯಾರ್ಥಿಗಳಿಗೆ ಮನಮುಟ್ಟುವಂತೆ ಉಪನ್ಯಾಸ ನೀಡಿದರು.

ಸಮಾರಂಭದ ಅದ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯರಾದ ವಾಯ್ ಎಂ ಪಾಟೀಲ ವಹಿಸಿದ್ದರು. ಕಾಲೇಜು ವಿದ್ಯಾರ್ಥಿಗಳಿಗೆ ಆಶು ಬಾಷಣ, ಗಾಯಣ ಹಾಗೂ ನಿಬಂಧ ಸ್ಪರ್ಧೆ ಆಯೋಜಿಸಿ ವಿಜೇತರಿಗೆ ಡಾ.ಬಾಬಾಸಾಹೇಬ ಅಂಬೇಡ್ಕರರವರ ಸಂವಿಧಾನ ಪುಸ್ತಕ, ಪ್ರಮಾಣಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ನಿಜಾಮೋದ್ದೀನ್ ಎಸ್ ಎ ಬಿ ಜಿಡ್ಡಿ ಮನಿ, ವಿ ಪಿ .ಹತ್ತಿ, ಧಾಮಣೆ ,ಎಸ್ ಎಸ್ ತಟಗಾರ, ಪರವೀಣಬಾನು, ಗಿರೀಶ ಕಬಟೆ, ಕಾಲೇಜಿನ ಸಿಬ್ಬಂಧಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ವಿಕಲಚೇತನ ವ್ಯಕ್ತಿಗಳಿಂದ ಅರ್ಜಿ ಆಹ್ವಾನ

ಬೆಳಗಾವಿ: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಆಧಾರ ಯೋಜನೆಯ ಮಾರ್ಗಸೂಚಿ ಯನ್ವಯ, ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಲ್ಲಿ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಸ್ವಯಂ–ಸೇವಾ ಸಂಸ್ಥೆಯ ಒಬ್ಬರು ಪ್ರತಿನಿಧಿ ಹಾಗೂ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಒಬ್ಬರು ವಿಕಲಚೇತನ ವ್ಯಕ್ತಿಯನ್ನು 2 ವರ್ಷದ ಅವಧಿಗೆ ಆಯ್ಕೆ ಸಮಿತಿಯ ಸದಸ್ಯರನ್ನಾಗಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ನಾಮ ನಿರ್ದೇಶನ ಮಾಡಬೇಕಾಗಿದ್ದು ಬೆಳಗಾವಿ ಜಿಲ್ಲೆಯಲ್ಲಿ ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ಸ್ವಯಂ–ಸೇವಾ ಸಂಸ್ಥೆಗಳು ಹಾಗು ವಿಕಲಚೇತನರಿಗಾಗಿ ಶ್ರಮಿಸುತ್ತಿರುವ ವಿಕಲಚೇತನ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಅರ್ಹ ಸಂಸ್ಥೆ ಹಾಗೂ ವಿಕಲಚೇತನ ವ್ಯಕ್ತಿಗಳು ಜ.19 2024 ರ ಒಳಗಾಗಿ ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ಈ ಕಛೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಅರ್ಜಿ ನಮೂನೆಗಾಗಿ ಜಿಲ್ಲಾ ಕಛೇರಿ ಅಥವಾ ಆಯಾ ತಾಲೂಕಿನ ಎಂ.ಆರ್.ಡಬ್ಲ್ಯೂ. ಅವರನ್ನು ಸಂಪರ್ಕಿಸಬಹುದು ಎಂದು ಬೆಳಗಾವಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಖಿಲ ಭಾರತಎನ್ ಸಿ ಸಿ ಟ್ರ್ಯಾಕಿಂಗ್ (ಚಾರಣ) ಶಿಬಿರ 2023 ಕ್ಕೆ ಚಾಲನೆ

ಬೆಳಗಾವಿ : ಜನಾಂಗವು ರಾಷ್ಟ್ರದ ಸಂಪತ್ತಾಗಿದ್ದುದೇಶದ ಸಂಸ್ಕೃತಿ ಪರಂಪರೆ ಹಾಗೂ ಪರಿಸರವನ್ನು ತಿಳಿದು ಕೊಳ್ಳುವುದು ಅವಶ್ಯವಾಗಿದೆ. ಪರಿಸರವನ್ನು ಸಂರಕ್ಷಿಸಿ ಅದನ್ನು ಪೋಷಿಸಿ ಬೆಳೆಸುವುದು ಕೂಡ ನಮ್ಮಕರ್ತವ್ಯವಾಗಿದೆ.

ಎನ್‌ಸಿಸಿಯ ಪ್ರಮುಖಧ್ಯೆಯವಾಗಿದೆಎಂದು 26 ಕರ್ನಾಟಕ ಬೆಟಾಲಿಯನ್ ಬೆಳಗಾವಿಯ ಎನ್ ಸಿಸಿ ಕಮಾಂಡಿಂಗ್ ಆಫೀಸರ್, ಚಾರಣ ಶಿಬಿರದ ಕಮಾಂಡಂಟ್ ಕರ್ನಲ್‌ಎಸ್‌ದರ್ಶನ್ ಹೇಳಿದರು. ಬೆಳಗಾವಿಯ ಜಾಧವ ನಗರದಲ್ಲಿ ಬೆಳಗಾವಿ ಎನ್‌ಸಿಸಿ ಗ್ರೂಪ್ ಅಡಿಯಲ್ಲಿ ಡಿಸೆಂಬರ 15 ದಿಂದ 22ರವರೆಗೆ ಜರುಗುತ್ತಿರುವ ಅಖಿಲ ಭಾರತ ಟ್ರ್ಯಾಕಿಂಗ್ (ಚಾರಣ) ಶಿಬಿರಕ್ಕೆ ಅವರು ಚಾಲನೆ ನೀಡಿ ಮಾತನಾಡಿದರು.




ಈ ಶಿಬಿರವು ಯುವಕರಲ್ಲಿ ಸಾಹಸ ಪ್ರವೃತ್ತಿಯನ್ನು ಮೂಡಿಸಲಿದೆ ಎಂದರು. ಯುವ ಸಮುದಾಯದಲ್ಲಿ ರಾಷ್ಟ್ರೀಯ ಹಾಗೂ ಪ್ರಜ್ಞೆಯನ್ನು ಮೂಡಿಸುವುದು ಪರಿಸರದ ಕಾಳಜಿಯ ಬಗ್ಗೆ ಜಾಗೃತಿಯನ್ನು ಹುಟ್ಟು ಹಾಕುವುದು ಶಿಬಿರದ ಉದ್ದೇಶವೆಂದರು. ವಿವಿಧ ರಾಜ್ಯಗಳಿಂದ ಆಗಮಿಸಿರುವ ವಿದ್ಯಾರ್ಥಿಗಳು ಒಟ್ಟಾಗಿ ಬೆಳಗಾವಿಯ ಸುತ್ತಮುತ್ತಲಿನ ಪ್ರಾಕೃತಿಕ ಸೌಂದರ್ಯವನ್ನು ಸವಿಯಲಿದ್ದಾರೆ. ಸೌಜನ್ಯತೆಗಳನ್ನು ಸಮಯ ಪಾಲನೆಯನ್ನು ಅಳವಡಿಸಿಕೊಂಡು ಸಮಾಜಕ್ಕೆ ತಮ್ಮದೇ ಆದಕೊಡುಗೆಯನ್ನು ನೀಡಬೇಕು. ನಾವು ಪ್ರಕೃತಿಯ ಭಾಗವಾಗಿದ್ದು ಅಂತಹ ಪ್ರಕೃತಿ ಕಾಪಾಡಿಕೊಳ್ಳುವುದು ನಮ್ಮಕರ್ತವ್ಯವಾಗಿದೆ. ಪ್ರಕೃತಿಯೊಂದಿಗೆ ನಾವು ಬೆರೆಯಬೇಕು. ಪ್ರಕೃತಿ ಸೌಂದರ್ಯವನ್ನು ಸವಿಯಬೇಕು ಜಾಗೃತಿಯನ್ನು ಮುಟ್ಟಿಸಬೇಕುಎಂದು ಸಲಹೆ ನೀಡಿದರು.

ಅವರು ಮಾತನಾಡಿ, ಎನ್‌ಸಿಸಿ ಕೆಡೆಟ್‌ಗಳಲ್ಲಿ ಸಾಹಸಮಯ ಮತ್ತು ಪರಿಶೋಧನಾತ್ಮಕ ಮನೋಭಾವವನ್ನು ಬೆಳೆಸಿಸುವದು, ದೈಹಿಕ ಸಾಮರ್ಥ್ಯ, ಸಹಿಷ್ಣುತೆ, ಆತ್ಮ ವಿಶ್ವಾಸ, ತಂಡದ ಮನೋಭಾವ ಮತ್ತುಉತ್ಸಾಹವನ್ನು ಬೆಳೆಸಿಸುವದು. ಪ್ರಕೃತಿಯಲ್ಲಿಯ ಸಸ್ಯ ಮತ್ತು ಪ್ರಾಣಿಗಳ ಬಗ್ಗೆ ಪ್ರೀತಿಯನ್ನು ಬೆಳೆಸಿಸುವದು. ಪರಿಸರ ಅರಣ್ಯ, ವನ್ಯಜೀವಿ, ಪರಿಸರ ಸಮತೋಲನದ ಸಂರಕ್ಷಣೆಗಾಗಿ ಕಾಳಜಿಯನ್ನು ಅಭಿವೃದ್ಧಿ ಪಡಿಸುವುದು, ಪ್ರಾಚೀನ ಸ್ಮಾರಕಗಳು ಮತ್ತು ಸ್ವಚ್ಛತೆ, ಸ್ಥಳೀಯ ಪದ್ಧತಿಕುರಿತು ಅರಿವನ್ನುಂಟು ಮಾಡುವುದು ಈ ಶಿಬಿರದ ಉದ್ದೇಶವಾಗಿದೆಎಂದು ಹೇಳಿದರು.

ದೇಶದ ನಾನಾ ಭಾಗಗಳಿಂದ ಆಗಮಿಸಿರುವ ಎನ್‌ಸಿಸಿ ಕೆಡೆಟ್‌ಗಳು ಒಟ್ಟಿಗೆ ವಾಸಿಸುವ ಮೂಲಕ ರಾಷ್ಟ್ರೀಯ ಪ್ರಜ್ಞೆಏಕತೆಯನ್ನುಉತ್ತೇಜಿಸಲಿದ್ದಾರೆ ಹೇಳಿದರು. ಈ ಚಾರಣ ಹಾಗೂ ಎಂದು ಶಿಬಿರದಲ್ಲಿ ಕರ್ನಾಟಕ, ಗೋವಾ, ಆಂಧ್ರ ಪ್ರದೇಶ, ತಿರುಚಿ, ತಮಿಳುನಾಡು, ಪಾಂಡಿಚೇರಿ ಕೇರಳ, ಲಕ್ಷದೀಪ 510 ಎನ್ ಸಿ ಸಿ ಕೆಡೆಟ್ ಗಳು ಪಾಲ್ಗೊಂಡಿದ್ದಾರೆ.

ಈ ಸಂದರ್ಭದಲ್ಲಿ ಕರ್ನಲ್ ಶಂಕರ್ ಯಾದವ್, ಲೆಫ್ಟಿನೆಂಟ್ ಕರ್ನಲ್ ಪಂಕಜಾಕು ಗಜಿ, ವಿಂಗ ಕಮಾಂಡರ್ ದೀಪಕ ಬಾಲ್ರಾ, ಸುಬೇದಾರ್ ಮೇಜರ್‌ಕಲ್ಲಪ್ಪ ಪಾಟೀಲ್, ಮೆಜರ ಮಹೇಶ ಗುರನಗೌಡರ ಉಪಸ್ಥಿತರಿದ್ದರು.

## ಶಾಲಾ ಶಿಕ್ಷಣ ಇಲಾಖೆ: ಖಾಲಿ ಹುದ್ದೆಗಳಿಗಾಗಿ ಅರ್ಜಿ ಅಹ್ವಾನ

ಬೆಳಗಾವಿ: ಶಾಲಾ ಶಿಕ್ಷಣ ಇಲಾಖೆಯ 2023–24ನೇ ಸಾಲಿಗೆ ಸರಕಾರಿ ಪ್ರಾಥಮಿಕ, ಪ್ರೌಢ ಶಾಲಾ ಸಹಶಿಕ್ಷಕರ ಮತ್ತು ಮುಖ್ಯ ಶಿಕ್ಷಕರು, ತತ್ಸಮಾನ ವೃಂದದ ನಿರ್ದಿಷ್ಠಪಡಿಸಿದ ಹುದ್ದೆಗಳಿಗೆ (specified post) ಲಿಖಿತ ಪರೀಕ್ಷೆ ಮೂಲಕ ಅರ್ಜಿ ಅಹ್ವಾನಿಸಲಾಗಿದೆ.

ವಿಸ್ತೃತವಾದ ವೇಳಾಪಟ್ಟಿ ಹಾಗೂ ಅರ್ಜಿ ಸಲ್ಲಿಸಲು ಮಾರ್ಗಸೂಚಿ ಅಂಶಗಳ ಸಹಿತವಾಗಿ ಈಗಾಗಲೇ ಇಲಾಖಾ ವೆಬ್‌ಸೈಟ್ https://schooleducation.karnataka.gov.in ನಲ್ಲಿ ಅಧಿಸೂಚನೆ ಹೊರಡಿಸಲಾಗಿದೆ.


ಹೆಚ್ಚಿನ ಮಾಹಿತಿಗಾಗಿ ಡಿಸೆಂಬರ 30, 2023 ರೊಳಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದೆಂದು ಎಂದು ಡಿಡಿಪಿಐ ಮೋಹನಕುಮಾರ ಎಲ್ ಹಂಚಾಟೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಬ್ಬರು ಮಕ್ಕಳಿಗೆ ಯಶಸ್ವಿಯಾಗಿ ಪ್ರೀ ಎಮ್ಟಿವ್ ಕಿಡ್ನಿ ಟ್ರಾನ್ಸ್‌ಪ್ಲಾಂಟೇಶನ್

ಬೆಳಗಾವಿ: ಹುಕ್ಕೇರಿ ತಾಲೂಕಿನ 17 ವರ್ಷದ ಬಾಲಕಿ ಮತ್ತು ಹಳಿಯಾಳದ 9 ವರ್ಷದ ಬಾಲಕನಿಗೆ ಬೆಳಗಾವಿಯ ಕೆಎಲ್‌ಇಎಸ್ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದಲ್ಲಿ ಯಶಸ್ವಿಯಾಗಿ ಪ್ರೀ ಎಮ್ಟಿವ್ (Pre-Emptive) ಮೂತ್ರಪಿಂಡ ಕಸಿ ಮಾಡಲಾಯಿತು.

17 ವರ್ಷದ ಹುಡುಗಿ ತನ್ನ ತಾಯಿಯಿಂದ ಮತ್ತು 9 ವರ್ಷದ ಹುಡುಗ ತನ್ನ ಅಜ್ಜಿಯಿಂದ ಕಿಡ್ನಿ ಪಡೆದಿದ್ದಾರೆ. ಇಬ್ಬರೂ ಕಿಡ್ನಿ ವೈಫಲ್ಯದಿಂದ ಬಳಲುತ್ತಿದ್ದರು. ಅವರನ್ನು ಉಳಿಸಿಕೊಳ್ಳಲು ಡಯಾಲಿಸಿಸ್ ಅಥವಾ ಕಿಡ್ನಿ ಟ್ರಾನ್ಸ್‌ಪ್ಲಾಂಟೇಶನ್‌ಗೆ ಅನಿವಾರ್ಯವಾಗಿತ್ತು.

ಪೀಡಿಯಾಟ್ರಿಕ್ ನೆಪ್ರಾಲಜಿಸ್ಟ್ ಡಾ.ಮಹಾಂತೇಶ



ವಿ ಪಾಟೀಲ್ ಅವರ ಟೀಮ್ ಯಶಸ್ವಿಯಾಗಿ ಕಿಡ್ನಿ ಟ್ರಾನ್ಸ್‌ಪ್ಲಾಂಟೇಶನ್ ನಡೆಸಿತು.

ಮಕ್ಕಳು ಡಯಾಲಿಸಿಸ್‌ಗೆ ಒಳಗಾಗುವುದು ಬಹಳ ಕಷ್ಟ. ಮತ್ತು ಡಯಾಲಿಸಿಸ್ ಸಮಯದಲ್ಲಿ ಪೋಷಕರು ಮತ್ತು ಮಕ್ಕಳು ಇಬ್ಬರೂ ಸಾಕಷ್ಟು ತೊಂದರೆಗಳನ್ನು ಅನುಭವಿಸುತ್ತಾರೆ. ಮಕ್ಕಳು ವಿದ್ಯಾಭ್ಯಾಸ ವಂಚಿತರಾದರೆ, ಪಾಲಕರು ಉದ್ಯೋಗ ಕಳೆದುಕೊಳ್ಳಬೇಕಾಗುತ್ತದೆ. ಆದ್ದರಿಂದ ಡಯಾಲಿಸಿಸ್ ಗಿಂತ ಕಿಡ್ನಿ ಕಸಿ ಮಾಡುವುದು ಮಕ್ಕಳಿಗೆ ಉತ್ತಮ ಚಿಕಿತ್ಸೆಯಾಗಿದೆ. ಕಿಡ್ನಿ ಕಸಿ ನಂತರ ಇಬ್ಬರೂ ರೋಗಿಗಳು ಉತ್ತಮವಾಗಿ ಚೇತರಿಸಿಕೊಂಡಿದ್ದಾರೆ ಎಂದು ಕಿಡ್ನಿ ಟ್ರಾನ್ಸ್ ಪ್ಲಾಂಟೇಶನ್ ನೇತೃತ್ವ ವಹಿಸಿದ್ದ ಖ್ಯಾತ ಮಕ್ಕಳ ತಜ್ಞ ಡಾ.ಮಹಾಂತೇಶ ಪಾಟೀಲ ತಿಳಿಸಿದ್ದಾರೆ.

ಜೆ.ಎನ್.ಮೆಡಿಕಲ್ ಕಾಲೇಜಿನ ಪ್ರಾಚಾರ್ಯ ಡಾ.ಎನ್.ಎಸ್.ಮಹಾಂತಶೆಟ್ಟಿ ಅವರ ಸಹಕಾರದಲ್ಲಿ ಮೂತ್ರಶಾಸ್ತ್ರಜ್ಞರಾದ ಡಾ ಆರ್ ಬಿ ನೇರ್ಲಿ, ಡಾ ವಿಕ್ರಮ್ ಪ್ರಭಾ, ನಾಳೀಯ ಶಸ್ತ್ರಚಿಕಿತ್ಸಕ ಡಾ ರಿಚರ್ಡ್ ಸಲ್ದಾನ್ಹಾ, ಅರಿವಳಿಕೆ ತಜ್ಞ ಡಾ ಮಾನೆ ಮತ್ತು ಡಾ ವಿನಾಯಕ ಜನ್ನು ಸಹಕಾರ ನೀಡಿದರು.

ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ.ಪ್ರಭಾಕರ ಕೋರೆ ಮತ್ತು ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕ ಡಾ. ದಯಾನಂದ ಅವರು ಯಶಸ್ವಿ ಶಸ್ತ್ರ ಚಿಕಿತ್ಸೆ ನಡೆಸಿದ ವೈದ್ಯರ ತಂಡವನ್ನು ಅಭಿನಂದಿಸಿದ್ದಾರೆ.

## ಕುಡಿದ ಮತ್ತಿನಲ್ಲಿ ಹೆಂಡತಿ, ಮಗಳ ಮೇಲೆ ಮಾರಣಾಂತಿಕ ಹಲ್ಲೆ: ಪತಿ ಅರೆಸ್ಟ್

ಮಂಗಳೂರು: ಕುಡಿದ ಮತ್ತಿನಲ್ಲಿ ಹೆಂಡತಿ ಹಾಗೂ ಮಗಳ ಮೇಲೆ ಪತಿ ಮಾರಣಾಂತಿಕವಾಗಿ ಹಲ್ಲೆ ಮಾಡಿರೋ ಘಟನೆ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಶಿಶಿಲ ಗ್ರಾಮದಲ್ಲಿ ನಡೆದಿದೆ. ಈ ಘಟನೆಯು ನಿನ್ನೆ ತಡರಾತ್ರಿ 12.45ರ ಹೊತ್ತಿಗೆ ನಡೆದಿದೆ. ಸುರೇಶ್ ಗೌಡ ಆರೋಪಿ ಪತಿ. ಶಿಶಿಲ ಕೋಟೆಬಾಗಿಲು ನಿವಾಸಿಯಾಗಿದ್ದ ಸುರೇಶ್ ಗೌಡ ಕುಡಿದ ಮತ್ತಿನಲ್ಲಿ ಆತನ ಹೆಂಡತಿ ಹಾಗೂ ಮಗಳ ಮೇಲೆ ಹಲ್ಲೆ ಮಾಡಿದ್ದಾನೆ. ಕೋಲಿನಿಂದ ಹೊಡೆದು ಪತ್ನಿಯ ಕಣ್ಣು ಹಾಗೂ ಮುಖದ ಭಾಗಕ್ಕೆ ಕಚ್ಚಿ ಮಾಂಸವನ್ನು ಹೊರ ತೆಗೆದು ವಿಕೃತಿ ಮೆರೆದಿದ್ದಾನೆ. ಪರಿಣಾಮ ಪತ್ನಿಯ ಎಡ ಕಣ್ಣಿಗೆ ಸಂಪೂರ್ಣ ಹಾನಿಯಾಗಿದೆ. ಅಮ್ಮನನ್ನು ರಕ್ಷಿಸಲು ಬಂದ ಮಗಳ ಮೇಲೂ ಹಲ್ಲೆ ಮಾಡಿದ್ದಾನೆ. ಕೂಡಲೇ ಅಲ್ಲಿಂದ ತಪ್ಪಿಸಿಕೊಂಡು ಬಂದ ಮಗಳು ನೆರೆ ಹೊರೆಯವರಿಗೆ ವಿಚಾರ ತಿಳಿಸಿದ್ದಾಳೆ. ಈ ಹೊತ್ತಲ್ಲೇ ಜೀವ ಉಳಿಸಿಕೊಳ್ಳಲು ಓಡಿ ಹೋಗಿದ್ದ ಪತ್ನಿ ಇಂದು ಬೆಳಗ್ಗೆ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಕೂಡಲೇ ಅವರನ್ನು ಸ್ಥಳೀಯ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಇನ್ನು, ಪತ್ನಿ ಹಾಗೂ ಮಗಳ ಮೇಲೆ ಹಲ್ಲೆ ಮಾಡಿದ್ದ ಪತಿ ಸುರೇಶ್ ಗೌಡ ಅಲ್ಲಿಂದ ಎಸ್ಕೇಪ್ ಆಗಿದ್ದಾನೆ. ಈ ವಿಷಯ ತಿಳಿಯುತ್ತಿದ್ದಂತೆ ಘಟನಾ ಸ್ಥಳಕ್ಕೆ ಬೆಳ್ತಂಗಡಿಯ ಧರ್ಮಸ್ಥಳ ಪೊಲೀಸ್ ಅಧಿಕಾರಿಗಳು ದೌಡಾಯಿಸಿ ಪರಾರಿಯಾಗಿದ್ದ ಆರೋಪಿ ಗಂಡನನ್ನು ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸುತ್ತಿದ್ದಾರೆ.

## ವಾ.ಕ.ರ.ಸಾ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಎಸ್.ಭರತ್ ಬೆಳಗಾವಿ ವಿಭಾಗಕ್ಕೆ ಭೇಟಿ

ಬೆಳಗಾವಿ: ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಎಸ್.ಭರತ್ (IAS) ಅವರು ಡಿ.18 2023 ರಂದು ಬೆಳಗಾವಿ ವಿಭಾಗಕ್ಕೆ ಭೇಟಿ ನೀಡಿ, ಬೆಳಗಾವಿ ವಿಭಾಗದ ಬಸ್ ಕಾರ್ಯಾಚರಣೆ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿ ಕುರಿತು ವಿಭಾಗದ ಅಧಿಕಾರಿಗಳೊಂದಿಗೆ ಸಭೆಯನ್ನು ನಡೆಸಿ ಕೆಲಸ ಕಾರ್ಯಗಳನ್ನು ಪರಿಶೀಲಿಸಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡಿದರು.

ಪ್ರಸ್ತುತ ಶಕ್ತಿ ಯೋಜನೆ ಅನುಷ್ಠಾನದಲ್ಲಿದ್ದು, ವಿದ್ಯಾರ್ಥಿಗಳಿಗೆ ಅನಾನುಕೂಲ ಉಂಟಾಗದಂತೆ ಹೆಚ್ಚಿನ ಜಾಗೃತೆ ವಹಿಸಿ ಕಾರ್ಯಾಚರಣೆ ಮಾಡಲು ಎಲ್ಲ ಅಧಿಕಾರಿಗಳಿಗೆ ತಿಳಿಸಿದರು.

ಬೆಳಗಾವಿ ನಗರ ಸಾರಿಗೆಯನ್ನು ಬಲಪಡಿಸಲು ಹೊಸದಾಗಿ 50 ಇಲೇಕ್ಟ್ರೀಕ್ ವಾಹನಗಳನ್ನು ಒದಗಿಸುವ ಯೋಜನೆ ರೂಪಿಸಲಾಗಿದ್ದು, ಈ ಕುರಿತು ಅವಶ್ಯಕ ಪೂರ್ವ ತಯಾರಿಯನ್ನು ಮಾಡಿಕೊಳ್ಳಲು ಸೂಚಿಸಿದರು ಮತ್ತು ಬರುವ 3 ತಿಂಗಳಲ್ಲಿ ಬೆಳಗಾವಿ ನಗರಕ್ಕೆ ಹೆಚ್ಚಿನ ಬಸ್ಸುಗಳನ್ನು ನೀಡಲಿದ್ದು ಈ ಬಸ್ಸುಗಳ ಕಾರ್ಯಾಚರಣೆಗೆ ಕಾರ್ಯಯೋಜನೆ ರೂಪಿಸುವಂತೆ ಸೂಚನೆ ನೀಡಿದರು.

ಜನದಟ್ಟನೆ ಅವಧಿಯಲ್ಲಿ (Peak Season) ಸಾರ್ವಜನಿಕ ಪ್ರಯಾಣಿಕರಿಗೆ ವಿಶೇಷವಾಗಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಹೆಚ್ಚುವರಿ ಟ್ರೀಪ್‌ಗಳನ್ನು ಕಾರ್ಯಾಚರಣೆ ಮಾಡಲು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು.



ವಾಹನಗಳ ಶುಚಿಕರಣ ಹಾಗೂ ಕಾರ್ಯಾಚರಣೆ ಕುರಿತು ಇನ್ನೂ ಹೆಚ್ಚಿನ ಶಿಸ್ತನ್ನು ಕೈಗೊಳ್ಳಲು ಹೇಳಿದರು.

ಕಿತ್ತೂರ ಬಸ್ ಘಟಕದ ಕಾಮಗಾರಿಯನ್ನು ಮಾರ್ಚ–2024 ರ ಒಳಗಾಗಿ ಪೂರ್ಣಗೊಳಿಸಿ ಘಟಕದಿಂದ ಬಸ್ಸುಗಳ ಕಾರ್ಯಾಚರಣೆಗೆ ತರುವಂತೆ ಹಾಗೂ ಖಾನಾಪೂರ ಹೊಸ ಬಸ್ ನಿಲ್ದಾಣದ ನಿರ್ಮಾಣದ ಕಾಮಗಾರಿಯನ್ನು ಮಾರ್ಚ–2024 ರ ಒಳಗಾಗಿ ಪೂರ್ಣಗೊಳಿಸಲು ಆದೇಶಿಸಿದರು.

ಇನ್ನೂ 2 ರಿಂದ 3 ತಿಂಗಳಲ್ಲಿ ವಿಭಾಗಕ್ಕೆ 40 ಡಿಸೇಲ್ ಹೊಸ ವಾಹನಗಳನ್ನು ನೀಡಲಾಗುತ್ತಿದ್ದು, ಸೂಕ್ತ ಮಾರ್ಗಗಳಲ್ಲಿ ಹೆಚ್ಚುವರಿ ಕಾರ್ಯಾಚರಣೆಗೆ ಕಾರ್ಯ ಯೋಜನೆ ರೂಪಿಸುವಂತೆ ತಿಳಿಸಿದರು.

ಸದರಿ ಸಭೆಯಲ್ಲಿ ಮುಖ್ಯ ಸಂಚಾರ ವ್ಯವಸ್ಥಾಪಕರಾದ ರಾಜೇಶ ಹುದ್ದಾರ, ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿಯಾದ ಗಣೇಶ ಎಲ್ ರಾಠೋಡ್, ವಿಭಾಗೀಯ ಸಾರಿಗೆ ಅಧಿಕಾರಿಯಾದ ಕೆ.ಕೆ ಲಮಾಣಿ, ಭದ್ರತಾ ಮತ್ತು ಜಾಗೃತಾಧಿಕಾರಿ ಬಿ.ಡಿ ಗುರಿಕಾರ್, ಹಾಗೂ ವಿಭಾಗದ ಅಧಿಕಾರಿ ಮತ್ತು ಘಟಕ ವ್ಯವಸ್ಥಾಪಕರುಗಳು ಉಪಸ್ಥಿತತರಿದ್ದರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಸಂಪುಟ: 4 ಸಂಚಿಕೆ: 269 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089